ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ    Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 100 ಸಂಚಿಕೆ- 100 | PAGE-8 ಪುಟ-8 | ಮಂಗಳವಾರ 27.05.2025 | RS.2/- ಬೆಲೆ 2/-

# ರಾಜ್ಯದಲ್ಲಿ ಕೋವಿಡ್ ಹೆಚ್ಚಳ ಮಾಸ್ಕ್ ಧರಿಸಲು ಸಲಹೆ



ಮಲ್ಲಮ್ಮ ನುಡಿ ವಾರ್ತೆ
ಬೆಂಗಳೂರು,ಮೇ.26: ರಾಜ್ಯದಲ್ಲಿ ಕೋವಿಡ್ ಸೋಂಕು ಹೆಚ್ಚಳ ಹಿನ್ನೆಲೆ ವಯಸ್ಸಾದವರು, ಗರ್ಭಿಣಿಯರು, ಹೃದಯ ಸಂಬಂಧಿ, ಶ್ವಾಸಕೋಶ ಸಮಸ್ಯೆ ಇರುವವರು ಮುನ್ನೆಚ್ಚರಿಕೆ ಕ್ರಮವಾಗಿ ಮಾಸ್ಕ್ ಧರಿಸುವುದು ಒಳ್ಳೆಯದು ಎಂದು ಸರ್ಕಾರ ಸಲಹೆ ನೀಡಿದೆ.

ಕೋವಿಡ್ ಸಂಬಂಧಿಸಿದಂತೆ ಪರಿಸ್ಥಿತಿ ಅವಲೋಕಿಸಲು ಆರೋಗ್ಯ ಇಲಾಖೆ ಮತ್ತು ಆರೋಗ್ಯ ಶಿಕ್ಷಣ ಇಲಾಖೆ ಸಚಿವರು ಮತ್ತು ಅಧಿಕಾರಿಗಳೊಂದಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಾವೇರಿ ನಿವಾಸದಲ್ಲಿ ಸಭೆ ನಡೆಸಿದರು.

ಸಭೆಯಲ್ಲಿ ಅಧಿಕಾರಿಗಳು, ತಜ್ಞರು ಮತ್ತು ಸಚಿವರುಗಳಿಂದ ಮಾಹಿತಿ ಪಡೆದ ಮುಖ್ಯಮಂತ್ರಿ ಸಿದ್ದರಾಮಯ್ಯ, ಸದ್ಯಕ್ಕೆ ಆತಂಕ ಪಡುವ ಅಗತ್ಯವಿಲ್ಲ. ಆದರೆ, ಮುಂಚಿತವಾಗಿಯೇ ಮುಂದೆ ಸಂಭವಿಸಬಹುದಾದ ಪರಿಸ್ಥಿತಿಯನ್ನು ಅವಲೋಕಿಸಿ ಅಗತ್ಯವಾದ ಎಲ್ಲಾ ಸವಲತ್ತು, ಸಲಕರಣೆಗಳನ್ನು ಸಜ್ಜುಗೊಳಿಸಿಟ್ಟುಕೊಳ್ಳಬೇಕು.

ಸದ್ಯಕ್ಕೆ ಆತಂಕ ಪಡುವ ಪರಿಸ್ಥಿತಿ ಬಂದಿಲ್ಲವಾದರೂ ವೆಂಟಿಲೇಟರ್, ಆಕ್ಸಿಜನ್, ಔಷಧ ಸೇರಿ ಇತ್ಯಾದಿ ಅಗತ್ಯಗಳನ್ನು ಸಿದ್ದಪಡಿಸಿಟ್ಟುಕೊಳ್ಳಿ.

ವಯಸ್ಸಾದವರು, ಗರ್ಭಿಣಿಯರು, ಹೃದಯ ಸಂಬಂಧಿ, ಶ್ವಾಸಕೋಶ ಸಮಸ್ಯೆ ಇರುವವರು ಮುನ್ನೆಚ್ಚರಿಕೆ ಕ್ರಮವಾಗಿ ಮಾಸ್ಕ್ ಧರಿಸುವುದು ಒಳ್ಳೆಯದು. ಈ ಬಗ್ಗೆ ಅರಿವು ಮೂಡಿಸಬೇಕು ಎಂದು ಸೂಚಿಸಿದರು.

ಪ್ರತೀ ವಾರ ಅಥವಾ ಅಗತ್ಯ ಬಿದ್ದರೆ ಮೂರು ದಿನಕ್ಕೊಮ್ಮೆ ಪರಿಸ್ಥಿತಿಯ ಪರಿಶೀಲನೆ ನಡೆಸುತ್ತಾ ತೀವ್ರ ನಿಗಾ ಇಡಬೇಕು. ಗರ್ಭಿಣಿಯರಲ್ಲಿ ಆರೋಗ್ಯ ಸಮಸ್ಯೆ ಕಂಡುಬಂದರೆ, ಅವರನ್ನು ಒಂದು ಆಸ್ಪತ್ರೆಯಿಂದ ಮತ್ತೊಂದು ಆಸ್ಪತ್ರೆಗೆ ವರ್ಗಾಯಿಸುವುದನ್ನು ನಿಲ್ಲಿಸಿ, ಎಲ್ಲಾ ಆಸ್ಪತ್ರೆಗಳಲ್ಲೂ ಅಗತ್ಯ ವ್ಯವಸ್ಥೆ ಮಾಡಿಕೊಂಡಿರಬೇಕು.

ಶೀತ, ನೆಗಡಿ, ಜ್ವರ ಇರುವ ಮಕ್ಕಳನ್ನು ಪೋಷಕರು ಶಾಲೆಗೆ ಕಳುಹಿಸದಿರುವುದು ಆರೋಗ್ಯಕರ, ಶಾಲೆಗಳೂ ಈ ಬಗ್ಗೆ ಗಮನ ಹರಿಸಿ ಶೀತ, ನೆಗಡಿ ಇರುವ ಮಕ್ಕಳನ್ನು ವಾಪಾಸ್ ಪೋಷಕರ ಮೂಲಕ ಮನೆಗೆ ಕಳುಹಿಸಬೇಕು. ಎಂತಹುದೇ ಪರಿಸ್ಥಿತಿ ಎದುರಿಸಲು ಸರ್ವ ಸನ್ನದ್ಧವಾಗಿರುವಂತೆ ಸೂಚಿಸಿದರು.

ರಾಜ್ಯದಲ್ಲಿ ಕೊರೊನಾ ಹರಡದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಮಕ್ಕಳಿಗೆ ಜ್ವರ ಕೆಮ್ಮು ಮುಂತಾದ ಲಕ್ಷಣಗಳು ಕಂಡು ಬಂದರೆ ಶಾಲೆಗೆ ಕಳಿಸದಂತೆ ಪೋಷಕರು ಕ್ರಮ ವಹಿಸಲು , ಶಾಲಾ ಕಾಲೇಜು ಮಂಡಳಿಗಳು ನಿಗಾ ವಹಿಸಲು ಸೂಚಿಸುವಂತೆ ಕ್ರಮ ಕೈಗೊಳ್ಳಲು ತಿಳಿಸಿದರು.

ಸಾರ್ವಜನಿಕರಿಗೆ ಯಾವುದೇ ತೊಂದರೆಯಾಗದಂತೆ, ಎಂತಹುದೇ ಪರಿಸ್ಥಿತಿ ಎದುರಿಸಲು. ಆಸ್ಪತ್ರೆಗಳಲ್ಲಿ ಹಾಸಿಗೆ, ಆಕ್ಸಿಜನ್ ವೆಂಟಿಲೇಟರ್ ಸೇರಿದಂತೆ ಮೂಲಭೂತ ಸೌಕರ್ಯಗಳು ಕಡ್ಡಾಯವಾಗಿರುವಂತೆ

ಕ್ರಮ ತೆಗೆದುಕೊಳ್ಳಲು ಅಧಿಕಾರಿಗಳಿಗೆ ಸೂಚಿಸಿದರು.

ಬಾಣಂತಿ ಹಾಗೂ ಮಕ್ಕಳ ಆರೋಗ್ಯ ಬಗ್ಗೆ ವಿಶೇಷ ಕಾಳಜಿ ವಹಿಸುವಂತೆ ಸಭೆಯಲ್ಲಿ ಉಪಸ್ಥಿತರಿದ್ದ ಆರೋಗ್ಯಾಧಿಕಾರಿಗಳಿಗೆ ಸೂಚಿಸಿದರು.

ಸಾರ್ವಜನಿಕರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಕೊರೋನಾ ಸಹಾಯವಾಣಿ ಪ್ರಾರಂಭ ಮಾಡಲು ಸೂಚನೆ ನೀಡಿದರು.

ಮುಂದಿನ ದಿನಗಳಲ್ಲಿ ಅವಶ್ಯಕತೆ ಕಂಡು ಬಂದರೆ ವಿಮಾನ ನಿಲ್ದಾಣಗಳಲ್ಲಿ ಹೊರಗಡೆಯಿಂದ ಬರುವ ಪ್ರಯಾಣಿಕರಿಗೆ ತಪಾಸಣಾ ಘಟಕಗಳನ್ನು ಪ್ರಾರಂಭಿಸಲು ಕ್ರಮ ವಹಿಸುವಂತೆ ಸೂಚಿಸಿದರು.

ಯಾವುದೇ ಕಾರಣಕ್ಕೂ ನಿರ್ಲಕ್ಷ್ಯ ಧೋರಣೆ ಇರಬಾರದು. ಎಲ್ಲಾ ಜಿಲ್ಲೆಗಳಲ್ಲೂ ಜಿಲ್ಲಾ ಆಸ್ಪತ್ರೆಗಳೂ ಸರ್ವ ಸನ್ನದ್ಧವಾಗಿ ಇರುವಂತೆ ಸೂಚಿಸಿದರು.

ಆರೋಗ್ಯ ಇಲಾಖೆ ಸಿಬ್ಬಂದಿ ರಜಾ ಹಾಕಿ ತೆರಳದೆ ಕೇಂದ್ರ ಸ್ಥಾನದಲ್ಲಿಯೇ

ಇದ್ದು ಕಾರ್ಯ ನಿರ್ವಹಿಸಲು ಹಾಗೂ ಕೇಂದ್ರ ಸರ್ಕಾರದ ಮಾರ್ಗಸೂಚಿಗಳನ್ನು ಈಗಾಗಲೇ ಪಾಲಿಸುತ್ತಿದ್ದೇವೆ.

ರೂಪಾಂತರಿ ಕೊರೊನಾ ವೈರಾಣುವಿಗೆ ಸಂಬಂಧಿಸಿದಂತೆ ರೋಗ ನಿಯಂತ್ರಣ ಮುನ್ನೆಚ್ಚರಿಕೆಯಾಗಿ

ವ್ಯಾಕ್ಸಿನ್ ಗಳನ್ನು ಸಿದ್ದವಾಗಿಟ್ಟು ಕೊಳ್ಳಲು ಸೂಚನೆ ನೀಡಿದರು.

## ಒಂದು ವಾರದಲ್ಲಿ ದೇಶದಲ್ಲಿ 752 ಮಂದಿಗೆ ಕೊರೊನಾ ಸೋಂಕು : ಸಾವಿರ ಗಡಿ ದಾಟಿದ ಸಕ್ರಿಯ ಪ್ರಕರಣ




ಮಲ್ಲಮ್ಮ ನುಡಿ ವಾರ್ತೆ
ನವದೆಹಲಿ:ಮೇ.26: ಕಳೆದ ಒಂದು ವಾರದಲ್ಲಿ ದೇಶದಲ್ಲಿ 752 ಹೊಸ ಕೋವಿಡ್-19 ಪ್ರಕರಣಗಳು ವರದಿಯಾಗಿದ್ದು, ಸದ್ಯ ಸಕ್ರಿಯ ಪ್ರಕರಣಗಳ ಸಂಖ್ಯೆ 1,000ಕ್ಕೆ ಏರಿದೆ. ಕೇರಳ, ಮಹಾರಾಷ್ಟ್ರ ಮತ್ತು ದೆಹಲಿಯಲ್ಲಿ ಅತಿ ಹೆಚ್ಚು ಹೊಸ ಸೋಂಕು ವರದಿಯಾಗಿದೆ ಎಂದು ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ ಹೇಳಿದೆ.

ಕೇರಳದಲ್ಲಿ 335 ಹೊಸ ಸೋಂಕುಗಳು ವರದಿಯಾಗಿದ್ದು, ಒಟ್ಟು ಸಕ್ರಿಯ ಪ್ರಕರಣಗಳ ಸಂಖ್ಯೆ 430ಕ್ಕೆ ಏರಿದೆ. ಮಹಾರಾಷ್ಟ್ರ ಮತ್ತು ದೆಹಲಿಯಲ್ಲಿ ಕ್ರಮವಾಗಿ 153 ಮತ್ತು 99 ಹೊಸ ಪ್ರಕರಣಗಳು ದಾಖಲಾಗಿವೆ.

ಸೋಮವಾರ ಬೆಳಗ್ಗೆ ಸರ್ಕಾರ ಬಿಡುಗಡೆ ಮಾಡಿದ ಮಾಹಿತಿಯ ಪ್ರಕಾರ, ಮಹಾರಾಷ್ಟ್ರ ಮತ್ತು ದೆಹಲಿಯಲ್ಲಿ ಸಕ್ರಿಯ ಕೋವಿಡ್-19 ಪ್ರಕರಣಗಳು ಕ್ರಮವಾಗಿ 209 ಮತ್ತು 104ರಷ್ಟಿವೆ.

ಗುಜರಾತ್‌ನಲ್ಲಿ 83 ಪ್ರಕರಣಗಳು ದಾಖಲಾಗಿವೆ.

ಕರ್ನಾಟಕದಲ್ಲಿ 47, ಉತ್ತರ ಪ್ರದೇಶದಲ್ಲಿ 15 ಮತ್ತು ಪಶ್ಚಿಮ ಬಂಗಾಳದಲ್ಲಿ 12

(2ನೇ ಪುಟ ನೋಡಿ)

## ಕೇಸ್‌ನಿಂದ ಬಾಯಿ ಮುಚ್ಚಿಸಲಾಗದು: ಛಲವಾದಿ



ಮಲ್ಲಮ್ಮ ನುಡಿ ವಾರ್ತೆ
ಬೆಂಗಳೂರು:ಮೇ.26: ಕಾಂಗ್ರೆಸ್ಸಿನವರು ಮಾನನಷ್ಟ ಮೊಕದ್ದಮೆಯ ನಾಟಕವನ್ನು ಬಿಟ್ಟು ಬಿಡಬೇಕು ಎಂದು ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಹೇಳಿದರು. ಬೆಂಗಳೂರಿನಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ನಮ್ಮ ವಿರುದ್ಧ ಮಾನನಷ್ಟ ಮೊಕದ್ದಮೆ ಹಾಕಲು ಸರ್ಕಾರಕ್ಕೆ ಯಾವುದೇ ನೈತಿಕತೆ ಇಲ್ಲ. ಸರ್ಕಾರದ 5 ಗ್ಯಾರಂಟಿಗಳೂ ಅರ್ಧಕ್ಕರ್ಧ ಜನರಿಗೆ ಮುಟ್ಟಿಲ್ಲ. ಆದರೂ, 5 ಗ್ಯಾರಂಟಿಗಳ ಹೆಸರಿನಲ್ಲಿ 5ವರ್ಷ ದೂಡಿ ಹೋಗಬೇಕೆಂಬ ಯೋಚನೆಯಲ್ಲಿ ಕಾಂಗ್ರೆಸ್ ಸರ್ಕಾರ ಕೆಲಸ ಮಾಡುತ್ತಿದೆ ಎಂದು ಟೀಕಿಸಿದರು. ಯಾವುದೇ ಸಾಧನೆ ಮಾಡದೆ 2 ವರ್ಷ ಕಳೆದಿದ್ದಾರೆ. ಸಾಧನೆ ಇಲ್ಲದ ವೇದನಾ ಸಮಾವೇಶ ಮಾಡಿದ್ದಾಗಿ ಮೊದಲೇ ಹೇಳಿದ್ದೇವೆ. ಬೆಂಗಳೂರಿನ ಮಳೆಯಿಂದ ಆದ ಹಾನಿ ಪರಿಸ್ಥಿತಿ ನೋಡಲಿಲ್ಲ. ಮಳೆಯಿಂದ 5 ಜನರು ಮರಣ ಹೊಂದಿದರೂ ಗಮನಿಸಲಿಲ್ಲ. ನಿಮಗೆ ಜನರಪ್ರಾಣ, ಮಾನ ಮುಖ್ಯವಲ್ಲ. ಕೇವಲ ಅಧಿಕಾರ ಮಾತ್ರ ಮುಖ್ಯ ಎಂಬುದನ್ನು ತೋರಿಸಿಕೊಡುತ್ತಾ ಹೋಗುತ್ತಿದ್ದೀರಿ ಎಂದು ಕಿಡಿಕಾರಿದರು. ಇವತ್ತು ನಮ್ಮ ವಿರುದ್ಧ ಮೊಕದ್ದಮೆ ಹೂಡಿದ್ದೀರಿ. ನಮ್ಮ ಸರ್ಕಾರ ಇದ್ದಾಗ ನೀವು ಸುಳ್ಳು ಆರೋಪ ಮಾಡಿದ್ದೀರಿ. ನಿಮ್ಮ ಸರ್ಕಾರವು ಬೆಳಗ್ಗೆ ಎದ್ದು ಬಳಸುವ ಹಾಲಿನಿಂದ ಆಲ್ಕೋಹಾಲಿನವರೆಗೆ ಎಲ್ಲಾ ದರಗಳನ್ನೂ ಹೆಚ್ಚಿಸಿದೆ. ಅದನ್ನೇ ನಾವು ಹೇಳಿದ್ದೇವೆ. ಇದರಲ್ಲಿ ಸುಳ್ಳಿದೆಯೇ? ಹೆಚ್ಚಿಸಿದ ಹಾಲಿನ ದರವನ್ನು ರೈತರಿಗೆ ಕೊಟ್ಟಿದ್ದೀರಾ ಎಂದು ಪ್ರಶ್ನಿಸಿದರು. ಪೆಟ್ರೋಲ್ ದರ, ದವಸ-ಧಾನ್ಯಗಳ ದರ ಏರಿಸಿದ್ದೀರಿ. ಸ್ಟಾಂಪ್ ಡ್ಯೂಟಿ ಏರಿಸಿದ್ದೀರಿ. ಕಸಕ್ಕೆ ತೆರಿಗೆ ವಿಧಿಸಿದ್ದೀರಿ. ನೀರಿಗೆ ಟ್ಯಾಕ್ಸ್ ಹಾಕಿದ್ದೀರಿ. ಇದಲ್ಲದೆ ನಮ್ಮ ಮೇಲೆ 40% ಭ್ರಷ್ಟಾಚಾರದ ಆರೋಪ ಮಾಡಿದ್ದೀರಿ. ಈಗ ಅವರೇ, ಕಾಂಗ್ರೆಸ್ ಮೇಲೆ 60% ಭ್ರಷ್ಟಾಚಾರದ ಆರೋಪ ಮಾಡುತ್ತಾರೆ. ಅವರ ಮುಂದೆ ನೀವು ಬೆತ್ತಲಾಗಿದ್ದೀರಿ. ನಾವು ನ್ಯಾಯಾಲಯಕ್ಕೆ ಗೌರವ ಕೊಡುತ್ತೇವೆ. ಕೇಸಿನ ವಿರುದ್ಧ ಹೋರಾಟ ಮಾಡುತ್ತೇವೆ. ಇದರಿಂದ ನೀವು ನಮ್ಮ ಬಾಯಿ ಮುಚ್ಚಿಸಲು ಸಾಧ್ಯವಿಲ್ಲ ಎಂದು ಸವಾಲು ಹಾಕಿದರು.

## ಭಾರಿ ಮಳೆ, ಗೋಡೆ ಕುಸಿದು 3 ವರ್ಷದ ಬಾಲಕಿ ಸಾವು



ಮಲ್ಲಮ್ಮ ನುಡಿ ವಾರ್ತೆ
ಬೆಳಗಾವಿ:ಮೇ.26: ಕರ್ನಾಟಕದಲ್ಲಿ ಭಾರಿ ಮಳೆ ಆರಂಭವಾಗಿರುವಂತೆಯೇ ಅತ್ತ ಬೆಳಗಾವಿಯಲ್ಲಿ ಗೋಡೆ ಕುಸಿದು 3 ವರ್ಷದ ಬಾಲಕಿ ಸಾವನ್ನಪ್ಪಿರುವ ಭೀಕರ ಘಟನೆ ವರದಿಯಾಗಿದೆ.

ಸೋಮವಾರ ಬೆಳಿಗ್ಗೆ ಬೆಳಗಾವಿ ಜಿಲ್ಲೆಯ ಗೋಕಾಕ್ ಪಟ್ಟಣದಲ್ಲಿ ಭಾರೀ ಮಳೆಯ ಪರಿಣಾಮವಾಗಿ ಮನೆಯ ಗೋಡೆ ಕುಸಿದು ಮೂರು ವರ್ಷದ ಬಾಲಕಿ ಸಾವನ್ನಪ್ಪಿದ್ದಾಳೆ ಎಂದು ಪೊಲೀಸರು ತಿಳಿಸಿದ್ದಾರೆ.

ಮೃತಳನ್ನು ಕೃತಿಕಾ ಎಂದು ಗುರುತಿಸಲಾಗಿದೆ. ಘಟನೆಯಲ್ಲಿ ಆಕೆಯ ತಾಯಿ ರೇಷ್ಮಾ ಮತ್ತು ತಂಗಿ ಖುಷಿ ಗಾಯಗೊಂಡಿದ್ದಾರೆ. ಆದರೆ ಅವರು ಪ್ರಾಣಾಪಾಯದಿಂದ ಪಾರಾಗಿದ್ದು ಅವರನ್ನು ಗೋಕಾಕ್ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸಲಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ.

ಪೊಲೀಸರ ಪ್ರಕಾರ, ಬೆಳಿಗ್ಗೆ 7.30ರ ಸುಮಾರಿಗೆ ಮಹಾಲಿಂಗೇಶ್ವರ ನಗರದಲ್ಲಿ ಈ ಘಟನೆ ಸಂಭವಿಸಿದೆ. ಕೃತಿಕಾ ಮತ್ತು ಆಕೆಯ ಸಹೋದರಿ ಖುಷಿ ಮಲಗಿದ್ದಾಗ, ಭಾರೀ ಮಳೆಯ ಸಮಯದಲ್ಲಿ ಪಕ್ಕದ ಮನೆಯ ಗೋಡೆ ಕುಸಿದು ಅವರ ಮೇಲೆ ಬಿದ್ದಿದೆ.

ಈ ದುರ್ಘಟನೆಯಲ್ಲಿ ಕೃತಿಕಾ ಸ್ಥಳದಲ್ಲೇ ಸಾವನ್ನಪ್ಪಿದರೆ, ಆಕೆಯ ತಾಯಿ ರೇಷ್ಮಾ ಮತ್ತು ಖುಷಿ ಗಾಯಗೊಂಡಿದ್ದಾರೆ ಎಂದು ಹಿರಿಯ ಪೊಲೀಸ್ ಅಧಿಕಾರಿ ತಿಳಿಸಿದ್ದಾರೆ.

## ಬಿಜೆಪಿ ಎಂಎಲ್‌ಸಿ ಎನ್. ರವಿಕುಮಾರ್ ವಿರುದ್ಧ ಪ್ರಕರಣ ದಾಖಲು



ಮಲ್ಲಮ್ಮ ನುಡಿ ವಾರ್ತೆ
ಕಲಬುರಗಿ:ಮೇ.26: ಬಿಜೆಪಿ ವಿಧಾನಪರಿಷತ್ ಸದಸ್ಯ ಎನ್. ರವಿಕುಮಾರ್ ವಿರುದ್ಧ ಕಲಬುರಗಿಯ ಸ್ಟೇಷನ್ ಬಜಾರ್ ಪೊಲೀಸ್ ಠಾಣೆಯಲ್ಲಿ ಅಟ್ರಾಸಿಟಿ ಕೇಸ್ ದಾಖಲಾಗಿದೆ. ಖಾಸಗಿ ವ್ಯಕ್ತಿಯೊಬ್ಬರು ನೀಡಿದ ದೂರಿನನ್ವಯ ಎಫ್‌ಐಆರ್ ದಾಖಲಿಸಲಾಗಿದೆ.

ಮೇ 24 ರಂದು ಕಲಬುರಗಿಯಲ್ಲಿ ನಡೆದ ಬಿಜೆಪಿ ಮುಖಂಡರ ಪ್ರತಿಭಟನಾ ರ್ಯಾಲಿಯ ಸಂದರ್ಭದಲ್ಲಿ ಎಂಎಲ್‌ಸಿ ರವಿಕುಮಾರ್ ನೀಡಿದ ವಿವಾದಿತ ಹೇಳಿಕೆಗಳು ಈ ಪ್ರಕರಣಕ್ಕೆ ಕಾರಣವಾಗಿದೆ. ಅವರು ಕಲಬುರಗಿ ಜಿಲ್ಲಾಧಿಕಾರಿ ಫೌಜಿಯಾ ತರನ್ನುಮ್ ಅವರ ಕುರಿತು "ಪಾಕಿಸ್ತಾನದಿಂದ ಬಂದಿರಬೇಕು" ಎಂದು ಹೇಳಿಕೆ ನೀಡಿದ್ದಾಗಿ ದೂರಿನಲ್ಲಿ ಉಲ್ಲೇಖಿಸಲಾಗಿದೆ. ಇದೇ ರ್ಯಾಲಿಯಲ್ಲಿ ದಲಿತ ಸಮುದಾಯದ ಎಎಸ್‌ಪಿ ಮಹೇಶ್ ಮೇಘಣ್ಣವರ್ ಹಾಗೂ ಸಿಪಿಐ ಚಂದ್ರಶೇಖರ ವಿರುದ್ಧ ನಿಂದನಾತ್ಮಕ ಹೇಳಿಕೆಗಳನ್ನು ನೀಡಿರುವ ಆರೋಪವೂ ಕೇಳಿಬಂದಿದೆ. ಅಲ್ಲದೇ ಎಸ್ಸಿ ಸಮುದಾಯವನ್ನು ಅವಹೇಳನ ಮಾಡಿರುವ ಬಗ್ಗೆ ಕೂಡಾ ದೂರಿನಲ್ಲಿ ಉಲ್ಲೇಖಿಸಲಾಗಿದೆ. ಈ ಕುರಿತಂತೆ ಸ್ಟೇಷನ್ ಬಜಾರ್ ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಪ್ರಾರಂಭಿಸಿದ್ದಾರೆ.

## ಟಿಪ್ಪರ್‌ಗೆ ಕಾರು ಡಿಕ್ಕಿ : ಒಂದೇ ಕುಟುಂಬದ ನಾಲ್ವರು ಸ್ಥಳದಲ್ಲೇ ಸಾವು




ಬಳ್ಳಾರಿ: ಭೀಕರ ರಸ್ತೆ ಅಪಘಾತದಲ್ಲಿ ಇಬ್ಬರು ಮಹಿಳೆಯರು ಹಾಗೂ ಇಬ್ಬರು ಮಕ್ಕಳು ಸೇರಿ ಒಂದೇ ಕುಟುಂಬದ ನಾಲ್ವರು ಸ್ಥಳದಲ್ಲೇ ಮೃತಪಟ್ಟಿರುವ ಘಟನೆ ಬಳ್ಳಾರಿ ಜಿಲ್ಲೆಯ ಸಂಡೂರು ತಾಲೂಕಿನ ಜೈಸಿಂಗಪುರ ಬಳಿ ಸಂಭವಿಸಿದೆ.

ಸಂಡೂರು ತಾಲೂಕಿನ ಲಕ್ಷ್ಮೀಪುರದ ಆಶಾ (28), ಜಯಲಕ್ಷ್ಮಿ (21), ಸ್ವಾತಿ (5) ಹಾಗೂ ಬಿಂಧುಶ್ರೀ (4) ಮೃತರು. ಕಾರು ಚಲಾಯಿಸ್ತಿದ್ದ ರಮೇಶ್ ಗಂಭೀರ ಗಾಯಗೊಂಡಿದ್ದು, ಚಿಕಿತ್ಸೆಗಾಗಿ ಕೊಪ್ಪಳದ ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಗಿದೆ.

ಮೃತರು ಸ್ವಗ್ರಾಮ ಲಕ್ಷ್ಮೀಪುರದಿಂದ ಹೊಸಪೇಟೆ ಆಸ್ಪತ್ರೆಗೆ ಕಾರಿನಲ್ಲಿ ಹೊರಟಿದ್ದರು. ಈ ವೇಳೆ ಸಂಡೂರಿನ ಜೈಸಿಂಗಪುರ ಬಳಿ ಮೈನಿಂಗ್ ಟಿಪ್ಪರ್ ಓವರ್ ಟೇಕ್ ಮಾಡಲು ಹೋಗಿ ಕಾರು ಡಿಕ್ಕಿಯಾಗಿದೆ. ಡಿಕ್ಕಿಯ ರಭಸಕ್ಕೆ ಕಾರು ಸಂಪೂರ್ಣ ನಜ್ಜುಗುಜ್ಜಾಗಿದ್ದು, ನಾಲ್ವರು ಸ್ಥಳದಲ್ಲೇ ಮೃತಪಟ್ಟಿದ್ದಾರೆ.

ಸ್ಥಳಕ್ಕೆ ಸಂಡೂರು ಪೊಲೀಸರು ದೌಡಾಯಿಸಿ, ಮೃತದೇಹಗಳನ್ನ ಸಂಡೂರು ತಾಲೂಕು ಆಸ್ಪತ್ರೆಗೆ ರವಾನಿಸಿದರು. ಆಸ್ಪತ್ರೆಗೆ ಮೃತದೇಹಗಳು ಬರ್ತಿದ್ದಂತೆ ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿತ್ತು. ಸಂಡೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಪತ್ನಿಗೆ ಅಧ್ಯಕ್ಷ ಸ್ಥಾನ 'ಕೈ ತಪ್ಪಿದಕ್ಕೆ ಕಚೇರಿಗೆ ಬೆಂಕಿಯಿಟ್ಟ ಪತಿ : ರೌಡಿಶೀಟರ್ ಸೇರಿ ಇಬ್ಬರು ಅರೆಸ್ಟ್



ಮಲ್ಲಮ್ಮ ನುಡಿ ವಾರ್ತೆ
ಯಾದಗಿರಿ:ಮೇ.26: ಜಿಲ್ಲಾ ಕಾಂಗ್ರೆಸ್ ಕಚೇರಿಗೆ ಬೆಂಕಿಯಿಟ್ಟಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ಇದೀಗ ಯಾದಗಿರಿ ನಗರ ಪೊಲೀಸರು ರೌಡಿಶೀಟರ್ ಸೇರಿ ಇಬ್ಬರನ್ನು ಬಂಧಿಸಿದ್ದಾರೆ.

ಬಂಧಿತ ಆರೋಪಿಯನ್ನು ರೌಡಿಶೀಟರ್ ಬಾಬುಗೌಡ ಅಗತೀರ್ಥ ಹಾಗೂ ಜಿಲ್ಲಾ ಮಹಿಳಾ ಘಟಕದ ಮಾಜಿ ಅಧ್ಯಕ್ಷೆಯ ಪತಿ ಶಂಕರ್ ಗೂಳಿ ಎಂದು ಗುರುತಿಸಲಾಗಿದ್ದು, ಆಂಧ್ರಪ್ರದೇಶದ ವಿಜಯವಾಡನಲ್ಲಿ ಬಂಧಿಸಲಾಗಿದೆ. ಆರೋಪಿ ರೌಡಿಶೀಟರ್ ಬಾಬುಗೌಡ ಅಗತೀರ್ಥ ಯಾದಗಿರಿ ಜಿಲ್ಲಾ ಮಹಿಳಾ ಘಟಕದ ಮಾಜಿ ಅಧ್ಯಕ್ಷೆ ಮಂಜುಳಾ ಗೂಳಿಯ ಬೆಂಬಲಿಗನಾಗಿದ್ದ. ಮಂಜುಳಾ ಗೂಳಿ ಅವರಿಗೆ ಈ ಬಾರಿ ಅಧ್ಯಕ್ಷ ಸ್ಥಾನ ಕೈ ತಪ್ಪಿ ಹೋಗಿತ್ತು. ಹೀಗಾಗಿ ಇದೇ ಸಿಟ್ಟಿನಲ್ಲಿ ಮಂಜುಳಾ ಗೂಳಿ ಪತಿ ಶಂಕರ್ ಗೂಳಿ ಹಾಗೂ ರೌಡಿಶೀಟರ್ ಸೇರಿಕೊಂಡು ಮೇ 24ರಂದು ರಾತ್ರಿ 1 ಗಂಟೆ ಸುಮಾರಿಗೆ ಸ್ಕೂಟಿಯಲ್ಲಿ ಬಂದು ಪೆಟ್ರೋಲ್ ಸುರಿದು ಬೆಂಕಿ ಹಚ್ಚಿದ್ದರು. ಬೆಂಕಿಯಿಟ್ಟ ಬಳಿಕ ತಲೆಮರೆಸಿಕೊಂಡು, ಆಂಧ್ರಪ್ರದೇಶದ ವಿಜಯವಾಡದಲ್ಲಿ ತನ್ನ ಗೆಳೆಯನ ಮನೆಯಲ್ಲಿ ಅಡಗಿ ಕುಳಿತಿದ್ದ ಆರೋಪಿ ರೌಡಿಶೀಟರ್‌ನನ್ನು ಯಾದಗಿರಿ ನಗರ ಪೊಲೀಸರು ಬಂಧಿಸಿದ್ದಾರೆ. ಇನ್ನೂ ಈಗಾಗಲೇ ಇನ್ನೋರ್ವ ಆರೋಪಿ ಶಂಕರ್‌ನನ್ನು ಬಂಧಿಸಿ ಜೈಲಿಗಟ್ಟಿದ್ದಾರೆ. ಯಾದಗಿರಿ ನಗರದ ಕನಕ ವೃತ್ತದ ಬಳಿಯಿರುವ ಕಾಂಗ್ರೆಸ್ ಕಚೇರಿಗೆ ಪೆಟ್ರೋಲ್ ಸುರಿದು ಬೆಂಕಿ ಹಚ್ಚಿದ್ದರು. ಪರಿಣಾಮ ಕಚೇರಿಯಲ್ಲಿದ್ದ ಸೋಫಾ, ಎಸಿ ಎಲ್ಲವೂ ಸುಟ್ಟು ಭಸ್ಮವಾಗಿದ್ದವು. ಕಚೇರಿಗೆ ಪೊಲೀಸ್ ಅಧಿಕಾರಿಗಳು ಭೇಟಿ ನೀಡಿ, ಡಾಗ್ ಸ್ಕ್ವಾಡ್, ಬೆರಳಚ್ಚು ತಜ್ಞರು ಸೇರಿ ಪರಿಶೀಲನೆ ನಡೆಸಿದ್ದರು.

## ತಿರಂಗಾ ಯಾತ್ರೆ ವೇಳೆ ಶಾಸಕ ಪ್ರಭು ಚವಾಣ್ ಅಸ್ವಸ್ಥ, ಆಸ್ಪತ್ರೆಗೆ ದಾಖಲು



ಮಲ್ಲಮ್ಮ ನುಡಿ ವಾರ್ತೆ ಬೀದರ. ಮೇ. 26 : ಔರಾದ್ ಪಟ್ಟಣದಲ್ಲಿ ಸೋಮವಾರ ಬೆಳಿಗ್ಗೆ ನಡೆದ ತಿರಂಗಾ ಯಾತ್ರೆ ಮೆರವಣಿಗೆ ವೇಳೆ ಶಾಸಕ ಪ್ರಭು ಚವಾಣ್ ಅಸ್ವಸ್ಥಗೊಂಡಿದ್ದಾರೆ.

'ಆಪರೇಶನ್ ಸಿಂಧೂರ' ಯಶಸ್ಸು ಹಾಗೂ ರಾಷ್ಟ್ರ ರಕ್ಷಣೆಗಾಗಿ ಪಟ್ಟಣದಲ್ಲಿ ಬೃಹತ್ ತಿರಂಗಾ ಯಾತ್ರೆ ಹಮ್ಮಿಕೊಳ್ಳಲಾಗಿತ್ತು.

ಪ್ರವಾಸಿ ಮಂದಿರದಿಂದ ಹೊರಟ ಯಾತ್ರೆ ಕನ್ನಡಾಂಬೆ ವೃತ ತಲುಪಿ ಅಲ್ಲಿ ಸಮಾವೇಶಗೊಂಡು ಭಾಷಣ ನಡೆಯುವ ವೇಳೆ ಶಾಸಕರು ನಿಶಕ್ತರಾದರು. ಅಲ್ಲಿದ್ದವರು ತಕ್ಷಣ ಅವರನ್ನು ಕಾರಿನಲ್ಲಿ ಸಾರ್ವಜನಿಕ ಆಸ್ಪತ್ರೆ ಕರೆದೊಯ್ದರು.

ಶಾಸಕರು ಮೆರವಣಿಗೆಯಲ್ಲಿ ಕುಣಿದು ದಣಿದಿದ್ದಾರೆ. ಹೀಗಾಗಿ ಸುಸ್ತಾಗಿ ತಲೆ ಸುತ್ತಿದೆ. ಬೇರೆ ಏನು ಸಮಸ್ಯೆ ಇಲ್ಲ ಎಂದು ಅವರ ಆಪ್ತರು ತಿಳಿಸಿದ್ದಾರೆ.

## ಕರ್ನಾಟಕ ಸಿಜೆ ಸೇರಿ ಮೂವರ ಹೆಸರು ಸುಪ್ರೀಂ ಕೋರ್ಟ್ ಜಡ್ಜ್ ನೇಮಕಕ್ಕೆ ಶಿಫಾರಸು

ಮಲ್ಲಮ್ಮನುಡಿವಾರ್ತೆನವದೆಹಲಿ:ಮೇ.26: ಕರ್ನಾಟಕ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ ಎನ್.ವಿ. ಅಂಜಾರಿಯಾ , ಗುವಾಹಟಿ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ ವಿಜಯ್ ಬಿಷ್ಣೋಯ್ ಮತ್ತು ಬಾಂಬೆ ಹೈಕೋರ್ಟ್ ನ್ಯಾಯಾಧೀಶ ನ್ಯಾಯಮೂರ್ತಿ ಎ.ಎಸ್. ಚಂದೂರ್ಕರ್ ಅವರನ್ನು ಸುಪ್ರೀಂ ಕೋರ್ಟ್ ನ್ಯಾಯಾಧೀಶರನ್ನಾಗಿ ನೇಮಕ ಮಾಡುವಂತೆ ಸುಪ್ರೀಂ ಕೋರ್ಟ್ ಕೊಲಿಜಿಯಂ ಶಿಫಾರಸ್ಸು ಮಾಡಿದೆ. ನ್ಯಾಯಲಯದಲ್ಲಿ ಖಾಲಿ ಇರುವ ಮೂರು ಹುದ್ದೆಗಳನ್ನು ಭರ್ತಿ ಮಾಡಲು ಹೆಸರುಗಳನ್ನು ಚರ್ಚಿಸಲು ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿ ಬಿ.ಆರ್ ಗವಾಯಿ ನೇತೃತ್ವದ ಐವರು ಸದಸ್ಯರ ಕೊಲಿಜಿಯಂ ಸಭೆ ಸೇರಿ ಈ ಮೂರು ಹೆಸರುಗಳನ್ನು ಅಂತಿಮಗೊಳಿಸಿದೆ. ಮುಖ್ಯ ನ್ಯಾಯಮೂರ್ತಿ ಸಂಜೀವ್ ಖನ್ನಾ ಮತ್ತು ನ್ಯಾಯಮೂರ್ತಿಗಳಾದ ಬೇಲಾ ಎಂ ತ್ರಿವೇದಿ ಮತ್ತು ಎಎಸ್ ಓಕಾ ಅವರ ನಿವೃತ್ತಿಯ ನಂತರ ಮೂರು ಹುದ್ದೆಗಳು ಖಾಲಿಯಾಗಿವೆ. 34 ನ್ಯಾಯಧೀಶರ ಬಲ ಹೊಂದಿರುವ ಸುಪ್ರೀಂ ಕೋರ್ಟ್ ನಲ್ಲಿ ಸದ್ಯ 31 ನ್ಯಾಯಧೀಶರು ಕಾರ್ಯನಿರ್ವಹಿಸುತ್ತಿದ್ದಾರೆ.

ಪ್ರಭಾವಿಗಳ ನೆರಳಲ್ಲಿ ಎಗ್ಗಿಲ್ಲದೇ ನಡೆಯುತ್ತಿದೆಯೇ ಮರಳು ಮತ್ತು ಮರಮ್ ಸಾಗಾಟ ದಂಧೆ?

# ಮಾಮೂಲಿ' ಆಸೆಗೆ ಅಧಿಕಾರಿಗಳು ಕಣ್ಮುಚ್ಚಿ ಕುಳಿತ್ರಾ?





(ಎಂ.ರಫೀಕ್ ಪಟೇಲ್)

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಅಕ್ರಮ ಮರಳು ಮತ್ತು ಮರಮ್ ಸಾಗಾಟ ನಡೆ-ಯುತ್ತಿದ್ದರೂ, ಗಣಿ ಇಲಾಖೆ ಅಧಿಕಾರಿಗಳು, ಪೊಲೀಸರು, ಕಂದಾಯ ಇಲಾಖೆ, ಗ್ರಾಪಂ ಅಧಿಕಾರಿಗಳು ಮೌನವಾಗಿದ್ದಾರೆ. ಇವರ ಈ ಅಕ್ರಮ ಮರಳು ಮರಮ್ ಗಣಿಗಾರಿಕೆ ವಿರುದ್ಧ ಇವರ ಈ ಮೌನ ಕಂಡಾಗ ಪರೋಕ್ಷವಾಗಿ ಇವರು ಇದನ್ನು ಬೆಂಬಲಿಸುವಂತೆ ಕಾಣುತ್ತಿದೆ. ಆದ್ದರಿಂದ ಮರಳು ಮಾಫಿಯಾದವರು ನೀಡುವ 'ಮಾಮೂಲಿ' ಇವರನ್ನೆಲ್ಲ ಮೌನವಾಗಿರುವಂತೆ ಮಾಡಿತ್ತಾ ಎಂಬ ಪ್ರಶ್ನೆ ಸಾರ್ವಜನಿಕರದ್ದಾಗಿದೆ.

ಯಾದಗಿರಿ ಜಿಲ್ಲಾ ಉಸ್ತುವರಿ ಸಚಿವ ಶರಣಬಸಪ್ಪಗೌಡ ದರ್ಶನಪೂರ್ ತವರು ಕ್ಷೇತ್ರದಲ್ಲಿ ಅಕ್ರಮ ಮರಳುಗಾರಿಕೆ

ಪ್ರಭಾವಿ ರಾಜಕಾರಣಿಗಳ ನೆರಳಿನಲ್ಲಿ ಮರಳು ದಂಧೆ ಎಗ್ಗಿಲ್ಲದೇ ನಡೆಯುತ್ತಿದ್ದು, ಇದು ಆಡಳಿತ ಯಂತ್ರದ ಕೈ ಕಟ್ಟಿ ಹಾಕಿದಂತಿದೆ.

ಶಹಪುರ್ ತಾಲೂಕಿನ ಟೋಣ್ಣೂರು ಗ್ರಾಮದಲ್ಲಿ ಅಕ್ರಮ ಮರಳುಗಾರಿಕೆ ಟಿಪ್ಪರ್ ಗಳು ಅಧಿಕ ಭಾರ ತುಂಬಿಕೊಂಡು ಹೋಗುತ್ತಿರುವುದು ಕಣ್ಣಾರ ಕಂಡರು ಸಹ (ಖಖಿಔ) ಆರ್ ಟಿ ಓ ಅಧಿಕಾರಿಗಳು ತಪಾಸಣೆ ಮಾಡದೇ ಇರುವುದು ಅನುಮಾನಕ್ಕೆ ಎಡೆಮಾಡಿಕೊಟ್ಟಿದೆ ಎಂದು ಹೆಸರು ಹೇಳಲು ಇಚ್ಛಿಸದ ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.

ಜಿಲ್ಲೆಯ ಶಹಪುರ ತಾಲೂಕಿನ ಯಾದಗಿರಿ ಮತಕ್ಷೇತ್ರದ ದೋರನಹಳ್ಳಿ ಗ್ರಾಪಂ ವ್ಯಾಪ್ತಿಯ ಅಕ್ಕ ಪಕ್ಕದಲ್ಲಿ ಮಹಾಂತೇಶ್ವಾರ ಗುಡ್ಡದ ಹತ್ತಿರ ಜೆಸಿಬಿ ಯಂತ್ರಗಳು ಬಳಸಿ ರಾಜಾರೋಷವಾಗಿ ಅಕ್ರಮ ಮರಮ್ ಗಣಿಗಾರಿಕೆ ನಡೆ-ಯುತ್ತಿದೆ.

ಪ್ರಾಕೃತಿಕ ಸಂಪತ್ತನ್ನು ರಾಜಾರೋಷವಾಗಿ ಕೊಳ್ಳೆ ಹೊಡೆಯುತ್ತಿದ್ದರೂ, ಅಧಿಕಾರಿಗಳು ಮೌನ ವಹಿಸುತ್ತಿರುವುದು ಸಾರ್ವಜನಿಕರ ಸಂಶಯಕ್ಕೆ ಕಾರಣವಾಗಿದೆ.

# ಗ್ರಾಮ ಪಂಚಾಯತ್ ಅಧ್ಯಕ್ಷ ವೀರಪ್ಪಾ ಭುತ್ತಾಳೆಗೆ ಕರುನಾಡು ರಾಜ್ಯ ಪ್ರಶಸ್ತಿ ಪ್ರಧಾನ

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್ : ತಾಲೂಕಿನ ಧುಮ್ಮನಸೂರ್ ಗ್ರಾಮಪಂಚಾಯತನ ಅಧ್ಯಕ್ಷ ವೀರಪ್ಪಾ ಭುತ್ತಾಳೆ ಅವರಿಗೆ ನಿವೃತ್ತ ಸುಪ್ರೀಂ ಕೋರ್ಟ್ ನ್ಯಾಯಾಧೀಶರು ಹಾಗೂ ಲೋಕಾಯುಕ್ತರಾದ ಸಂತೋಷ್ ಹೆಗಡೆ ಅವರು ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಧ್ವನಿ ಸಂಘಟನೆಯ ಪತ್ರಕರ್ತರ 3ನೇ ರಾಜ್ಯ ಸಮ್ಮೇಳನ ಶುಭ ಸಂದರ್ಭದಲ್ಲಿ ಬೆಂಗಳೂರಿನ ರವೀಂದ್ರ ಕಲಾ ಕ್ಷೇತ್ರದಲ್ಲಿ ಶನಿವಾರ ಕರುನಾಡು ಸಾಧಕ ಸೇವಾ ರತ್ನ ರಾಜ್ಯ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಬೀದರ್ ಜಿಲ್ಲೆಯ ಹುಮನಾಬಾದ್



ತಾಲೂಕಿನ ಧೂಮ್ಮನಸುರು ಗ್ರಾಮ ಪಂಚಾಯತ್ ಅಧ್ಯಕ್ಷ ವೀರಪ್ಪಾ ಎಸ್. ಭುತ್ತಾಳೆ ಇವರು ಮಾಡಿರುವ ಅನೇಕ ಅಭಿವೃದ್ಧಿ ಕಾರ್ಯಗಳನ್ನು ನೋಡಿ ಅತ್ಯುತ್ತಮ ಸೇವೆಯನ್ನು ಗುರುತಿಸಿ ಕರುನಾಡು ಸಾಧಕ ಸೇವಾ ರತ್ನ ರಾಜ್ಯ ಪ್ರಶಸ್ತಿ ನೀಡಿ ಸನ್ಮಾನಿಸಿ ಗೌರವಿಸಿದರು.

# ತಾಯಿಯು ತ್ಯಾಗದ ಮೂರ್ತಿ ಆಗಿದ್ದಾರೆ.

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ:-ಮೆ26 ತಾಯಿಯು ತ್ಯಾಗದ ಮೂರ್ತಿಯಾಗಿದ್ದಾರೆ ತಾಯಿಗಿಂತ ದೊಡ್ಡ ದೇವರಿಲ್ಲ ಎಂದು ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಪ್ರೊ. ಶಂಭುಲಿಂಗ ಕಾಮಣ್ಣಾ ತಿಳಿಸಿದರು ಅವರು ತಾಲೂಕಿನ ಬೇಲೂರು ಗ್ರಾಮದಲ್ಲಿ ಕಲ್ಯಾಣ ನಾಡು ಗ್ರಾಮೀಣ ಕಲಾವೃಂದದ ಪ್ರಮುಖ ವೀರಶೆಟ್ಟಿ ಮಲ್ ಶೆಟ್ಟಿ ಅವರ ಸಹಭಾಗಿತ್ವದಲ್ಲಿ ವಿಶ್ವ ತಾಯಂದಿರ ದಿನಾಚರಣೆಯನ್ನು ಬಸವಣ್ಣನವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವುದರ ಮುಖಾಂತರ ಹಾಗೂ ಪೂಜೆಮಾತೆಯರಿಗೆ ಪಾದಪೂಜೆ ಮಾಡಿದ ನಂತರ ವಿಶೇಷ ಉಪನ್ಯಾಸಕರಾಗಿ ಮಾತನಾಡಿದರು ತ್ರಿಪೂರಾಂತ

ಗವಿಮಠದ ಪೂಜ್ಯ ಶ್ರೀ ಷ.ಬ್ರ. ಡಾ. ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರು ಮಕ್ಕಳಿಗೆ ಉತ್ತಮ ಸಂಸ್ಕಾರ ನೀಡುವಲ್ಲಿ ತಾಯಿಯ ಪಾತ್ರ




ಬಹಳಷ್ಟಿದೆ ಎಂದರು ಇದೇ ಸಂದರ್ಭದಲ್ಲಿ ಎಸ್ ಎಸ್ ಎಲ್ ಸಿ ಹಾಗೂ ಪಿಯುಸಿಯಲ್ಲಿ ಗರಿಷ್ಠ ಅಂಕ ಪಡೆದ ವಿದ್ಯಾರ್ಥಿಗಳಿಗೆ ಹಾಗೂ ಸಾಧಕರಿಗೆ ವಿಶೇಷ ಸನ್ಮಾನ ಮಾಡಲಾಯಿತು ಬೇಲೂರಿನ ವಿರಕ್ತಮಠದ ಪೂಜ್ಯ ಶ್ರೀ ಶಿವಕುಮಾರಸ್ವಾಮಿ ನಾರಾಯಣಪುರದ ಲಲಿತಾಬಾಯಿ ತಹಸಿಲ್ದಾರ ಶಿವಾನಂದ ಮೇತ್ರೆ ನಿವೃತ್ತ ಮುಖ್ಯ ಇಂಜಿನಿಯರ್ ಮಲ್ಲಿಕಾರ್ಜುನ್ ಗುಂಗೆ ನಿವೃತ್ತ ನ್ಯಾಯಾಧೀಶ ಎಸ್. ಎಸ್. ನಾಗರಾಳೆ ಡಾ. ವಿಜಯಕುಮಾರ ಅಂತಪ್ಪನವರ.ಡಾ. ಪ್ರಶಾಂತ ಅಳ್ಳೆ ಬೀದರನ ಅಲ್ಲಂಪ್ರಭು ನಾವದಗೆರೆ ಗ್ರಾ.ಪಂ. ಅಧ್ಯಕ್ಷ ಕರುಣಾಬಾಯಿ ಪರೆಪ್ಪಾ ನಿವೃತ್ತಿ ಪಿಡಿಒ ನಾಗನಾಥ ಮಹಾಜನ ಚಿತ್ರಕಲಾವಿದ ವಿಠ್ಠಲ್ ಜಾಧವ. ಪತ್ರಕರ್ತರ ವೀರಶೆಟ್ಟಿ ಮಲಶೆಟ್ಟಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ರಾಜಕುಮಾರ ನಂದೊಡೆ. ಬಸವರಾಜ ಗುಂಗೆ ಸೇರಿದಂತೆ ಅನೇಕರು ಉಪಸ್ಥಿತರಿದರು.

2025-26ನೇ ಸಾಲಿನ ಮುಂಗಾರ ಹಂಗಾಮಿನ ಬಿತ್ತನೆ ಬೀಜ ವಿತರಣೆ ಕಾರ್ಯಕ್ರಮ

# ಬಿತ್ತನೆ ಬೀಜ ಪೂರೈಕೆಗೆ ಅಧಿಕಾರಿಗಳ ಶ್ರಮ ಅಗತ್ಯ : ಪಾಟೀಲ್






ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್: ಪ್ರಸ್ತುತ ಸಾಲಿನ ಮುಂಗಾರು ಹಂಗಾಮಿನ ಬಿತ್ತನೆ ಪ್ರಕ್ರಿಯೆಗೆ ಸಂಬಂಧಿಸಿದಂತೆ ಕೃಷಿ ಇಲಾಖೆ ಅಧಿಕಾರಿಗಳು ಹೆಚ್ಚಿನ ಶ್ರಮ ವಹಿಸಿ ಸೂಕ್ತ ಸಮಯಕ್ಕೆ ರೈತರಿಗೆ ಗುಣಮಟ್ಟದ ಬಿತ್ತನೆ ಬೀಜ ಪೂರೈಕೆ ಮಾಡಬೇಕು ಎಂದು ಶಾಸಕ ಡಾ. ಸಿದ್ದು ಪಾಟೀಲ್ ಹೇಳಿದರು.

ಪಟ್ಟಣದ ರೈತ ಸಂಪರ್ಕ ಕೇಂದ್ರದ ಆವರಣದಲ್ಲಿ ಕೃಷಿ ಇಲಾಖೆವತಿಯಿಂದ ಸೋಮವಾರ ನಡೆದ 2025-26ನೇ ಸಾಲಿನ ಮುಂಗಾರು ಹಂಗಾಮಿನ ಬಿತ್ತನೆ ಬೀಜ ವಿತರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.


ದೇಶದ ಅನ್ನದಾತರಿಗೆ ಯಾವುದೇ ತೊಂದರೆ ಆಗದಂತೆ ಬಿತ್ತನೆ ಬೀಜ ಹಾಗೂ ಗೊಬ್ಬರ ನೀಡುವುದರ ಜತೆಗೆ ಮುಂಜಾಗೃತ ಕ್ರಮಗಳನ್ನು ಅನುಸರಿಸುವಂತೆ ಜಾಗೃತಿ ಮೂಡಿಸಬೇಕು. ರೈತರು ಕೂಡ ಗಡಿಬಿಡಿ ಮಾಡದೇ ತಜ್ಞರ ಸಲಹೆ ಪಡೆದು ಗುಣಮಟ್ಟದ ಬೀಜ ಪಡೆದು ಉತ್ತಮ ಇಳುವರಿ ತೆಗೆದು ಹೆಚ್ಚಿನ ಲಾಭ ಪಡೆದು ತಮ್ಮ ಕುಟುಂಬದ ಆರ್ಥಿಕ ಮಟ್ಟ ದ್ವಿಗುಣಗೊಳಿಸಬೇಕು ಎಂದು ಸಲಹೆ ನೀಡಿದರು.

ವಿಧಾನ ಪರಿಷತ್ ಸದಸ್ಯ ಡಾ. ಚಂದ್ರಶೇಖರ ಪಾಟೀಲ್ ಮಾತನಾಡಿ, ಮುಂಗಾರು ಹಂಗಾಮಿನಲ್ಲಿ ರೈತರು ಬಿತ್ತನೆ ಪ್ರಕ್ರಿಯೆ ಕೈಗೊಳ್ಳುವಾಗ ಭೂಮಿಯಲ್ಲಿ ಅವಶ್ಯಕ ತೇವಾಂಶವನ್ನು ಕಡ್ಡಾಯವಾಗಿ ಖಚಿತ ಪಡಿಸಿಕೊಂಡು ಬಿತ್ತನೆ ಮಾಡಬೇಕು. ಇಲ್ಲವಾದಲ್ಲಿ ಬೀಜಗಳು ಸರಿಯಾಗಿ ಮೊಳಕೆಯೊಡೆಯದೇ ಉತ್ತಮ ಬೆಳೆ ಪಡೆಯಲು ಸಾಧ್ಯವಾಗುವುದಿಲ್ಲ ಎಂದರು.

ತಾಲೂಕು ವ್ಯಾಪ್ತಿಯ ಪಟ್ಟಣ ಸೇರಿ ಗ್ರಾಮೀಣ ಭಾಗದಲ್ಲಿ ಈಗಾಗಲೇ ಉತ್ತಮ ಮಳೆಯಾಗಿದೆ. ರೈತರ ಅನುಕೂಲಕ್ಕೆ ತಕ್ಕಂತೆ ಅಧಿಕಾರಿಗಳು ಬೀಜ ವಿತರಣೆ ಮಾಡಬೇಕು. ಕಳಪೆ ಗುಣಮಟ್ಟದ ಬೀಜ ವಿತರಣೆ ಮಾಡುವಂತಿಲ್ಲ. ಒಂದು ವೇಳೆ ಬೀಜ ಕಳಪೆ ಇರುವುದು ಗಮನಕ್ಕೆ ಬಂದರೆ ಅಧಿಕಾರಿಗಳ ವಿರುದ್ಧ ಸೂಕ್ತ ಕಾನೂನುಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಮುಂಗಾರು ಹಂಗಾಮಿನ ಬಿತ್ತನೆ ಪ್ರಕ್ರಿಯೆಗೆ ಸಂಬಂಧಿಸಿದಂತೆ ಖಾಸಗಿ ಅಂಗಡಿಗಳಲ್ಲಿ ರೈತರು ದುಬಾರಿ ಬೆಲೆಯಲ್ಲಿ ಬೀಜ ಖರೀದಿಸಬಾರದು. ಪಟ್ಟಣ ಸೇರಿ ಗ್ರಾಮೀಣ ಭಾಗದಲ್ಲಿ ಖಾಸಗಿ ವ್ಯಕ್ತಿಗಳು ದುಬಾರಿ ಬೆಲೆಯಲ್ಲಿ ಬಿತ್ತನೆ ಬೀಜ ವಿತರಣೆ ಮಾಡುತ್ತಿರುವುದನ್ನು ಗಮನಕ್ಕೆ ಬಂದರೆ ಮಾಹಿತಿ ನೀಡಿ ಅವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದರು. ಈ ಸಂದರ್ಭದಲ್ಲಿ ಕೃಷಿ ಸಮಾಜ ಅಧ್ಯಕ್ಷ ವಿಶ್ವನಾಥ ಪಾಟೀಲ್ ಮಾಡಗೂಳ, ಕೃಷಿ ಸಮಾಜ ಉಪಾಧ್ಯಕ್ಷ ದಸ್ತಗೀರ್ ಓತಗಿ, ಗ್ರೇಡ್-2 ತಹಸೀಲ್ದಾರ್ ಗೀತಾ, ರೈತ ಸಂಘದ ಅಧ್ಯಕ್ಷ ಸತೀಷ ನನ್ನೂರೆ, ಕರಬಸಪ್ಪ ಹುಡಗಿ, ಜ್ಞಾನೇಶ್ವರ ಭೋಸ್ಲೆ, ಕಲ್ಲಪ್ಪ ಇಟಗಿ, ಗುರುಲಿಂಗಪ್ಪ ಮೇಲ್ದೊಡ್ಡಿ, ಗಿರೀಶ ಪಾಟೀಲ್, ಕೃಷಿ ಸಹಾಯಕ ನಿರ್ದೇಶಕ ಶರಣಕುಮಾರ, ಸಿಬ್ಬಂದಿಗಳಾದ ಮಕರಹರ್ಷ, ಸತೀಷ, ಉದಯಕುಮಾರ, ಪ್ರಶಾಂತ, ಮಹೇಶ ಸೇರಿ ಸ್ಥಳೀಯ ರೈತ ಮುಖಂಡರು ಉಪಸ್ಥಿತರಿದ್ದರು.

# ವೈಭವದ ಬನಶಂಕರಿ ಜಾತ್ರಾ ಮಹೋತ್ಸವ





ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್ : ತಾಲೂಕಿನ ದುಬಲಗುಂಡಿ ಗ್ರಾಮದಲ್ಲಿ ದೇವಾಂಗ ಹಟಗಾರ ಸಮಾಜದ ವತಿಯಿಂದ ಸೋಮವಾರ ಐತಿಹಾಸಿ ಬನಶಂಕರಿ ದೇವಿಯ ಜಾತ್ರಾ ಮಹೋತ್ಸವ ವೈಭವದಿಂದ ಜರುಗಿತು. ಬೆಳಗ್ಗೆಯಿಂದ ದೇವಸ್ಥಾನದಲ್ಲಿ ದೇವಿಗೆ ಕುಂಕುಮ ಅರ್ಚನೆ, ಹಾಲಿನ ಅಭಿಷೇಕ, ತುಪ್ಪದ ಅಭಿಷೇಕ, ಪುಷ್ಪಾರ್ಚನೆ ಸೇರಿ ವಿವಿಧ ಪೂಜಾ ಕಾರ್ಯಕ್ರಮಗಳು ಜರುಗಿದವು. ಬಳಿಕ ಬೃಹತ್ ಅನ್ನದಾಸೋಹಕ್ಕೆ ಚಾಲನೆ ನೀಡಲಾಯಿತು. ಭಕ್ತಾಧಿಗಳು ಸರತಿ ಸಾಲಿನಲ್ಲಿ ನಿಂತು ಪ್ರಸಾದ ಸ್ವೀಕರಿಸಿದರು. ಸಂಜೆ ಐತಿಹಾಸಿಕ ಭವಾನಿ ದೇವಸ್ಥಾನದಲ್ಲಿ ಧಾರ್ಮಿಕ ಪರಂಪರೆಯಂತೆ ವಿಶೇಷ ಪೂಜೆ ಸಲ್ಲಿಸಿ ಬನಶಂಕರಿ ದೇವಿ ಜಾತ್ರಾ ಮಹೋತ್ಸವದ ಮೆರವಣಿಗೆಗೆ ಅದ್ದೂರಿಯಾಗಿ ಚಾಲನೆ ನೀಡಲಾಯಿತು. ಮೆರವಣಿಗೆ ದಾರಿಯುದ್ದಕ್ಕೂ ಭಕ್ತಾಧಿಗಳು ಸರತಿ ಸಾಲಿನಲ್ಲಿ ನಿಂತು ದೇವಿಗೆ ಕಾಯಿ, ಕರ್ಪೂರ ಅರ್ಪಿಸಿ ದರ್ಶನ ಪಡೆದರು. ಐತಿಹಾಸಿಕ ಭವಾನಿ ಮಾತೆ ದೇವಸ್ಥಾನದಿಂದ ಮೆರವಣಿಗೆ ಛತ್ರಪತಿ ಶಿವಾಜಿ ಮಾಹಾರಾಜ ವೃತ್ತ, ಸುಭಾಷಚಂದ್ರ ಬೋಷ್ ವೃತ್ತ, ಸರ್ದಾರ್ ವಲ್ಲಭಭಾಯಿ ಪಟೇಲ್ ವೃತ್ತ, ಬಸವೇಶ್ವರ ಮಂದಿರ, ವೀರಭದ್ರೇಶ್ವರ ರಥ ಮೈದಾನ, ಜೋಡ ಬಸವೇಶ್ವರ ದೇವಸ್ಥಾನ, ಬೀದರ್ ಬಸ್ ಬಿಲ್ದಾಣ, ಗ್ರಾಪಂ. ಕಚೇರಿ, ಐತಿಹಾಸಿಕ ವೀರಭದ್ರೇಶ್ವರ ದೇವಸ್ಥಾನ ಸೇರಿ ಗ್ರಾಮದ ಪ್ರಮುಖ ಬೀದಿಗಳಲ್ಲಿ ಮಹಿಳಾ ಭಕ್ತಾಧಿಗಳ ಕುಂಭ ಕಳಸ ಮೆರವಣಿಗೆ ವೈಭವದಿಮದ ಜರುಗಿತು. ಈ ಸಂದರ್ಭದಲ್ಲಿ ದೇವಾಂಗ ಹಟಗಾರ ಸಮಾಜದ ಮುಖಂಡರು, ಗ್ರಾಮದ ಗಣ್ಯರು ಸೇರಿ ದುಬಲಗುಂಡಿ ಸುತ್ತಮುತ್ತಲಿನ ಗ್ರಾಮಗಳ ಭಕ್ತಾಧಿಗಳು ಉಪಸ್ಥಿತರಿದ್ದರು.

# ಚಿಟಗುಪ್ಪ: ಗ್ರೇಡ್ 2 ತಹಶೀಲ್ದಾರ್ ಅಮಾನತಿಗೆ ಆಗ್ರಹಿಸಿ ಪ್ರತಿಭಟನೆ




ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:-ಇಲ್ಲಿಯ ತಹಸೀಲ್ ಕಚೇರಿಯ ಶಿರಸ್ತೇದಾರ ಸುಭಾಷಚಂದ್ರ ನಿಡಗುಂದಿ ಮಾರಣಾಂತಿಕ ಹಲ್ಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಪಟ್ಟಣದಲ್ಲಿ ಸೋಮವಾರ ವೀರಶೈವ ಲಿಂಗಾಯತ ಸಮಾಜ ಹಾಗೂ ನಾಗರಿಕರಿಂದ ಬೃಹತ್ ಪ್ರತಿಭಟನೆ ಮೆರವಣಿಗೆ ಗಣೇಶ ದೇವಸ್ಥಾನದಿಂದ ಆರಂಭವಾಗಿ ತಹಸೀಲ್ ಕಚೇರಿವರೆಗೆ ಜರುಗಿತ್ತು. ಕಂದಾಯ ಸಚಿವ ಕೃಷ್ಣಭೈರೇಗೌಡ ಇವರ ಹೆಸರಿನ ಮೇಲೆ ಬರೆದ ಮನವಿ ಪತ್ರವನ್ನು ತಹಶೀಲ್ದಾರ್ ಅವರಿಗೆ ಸಲ್ಲಿಸಲಾಯಿತ್ತು. ಈ ಮನವಿ ಪತ್ರದಲ್ಲಿ ಗ್ರೇಡ್ 2 ತಹಸೀಲ್ದಾರ್ ಜಯಶ್ರೀ ಇವರನ್ನು ಅಮಾನತುಗೊಳಿಸಿ ಬಂಧಿಸಬೇಕು ಹಾಗೂ ಇತರ ಅರೋಪಿಗಳನ್ನು ಶೀಘ್ರದಲೇ ಬಂದಿಸಬೇಕೆಂದು ಪ್ರತಿಭಟನಾಕಾರರು ಸಚಿವರಿಗೆ ಬರೆದ ಮನವಿ ಪತ್ರದಲ್ಲಿ ಆಗ್ರಹಿಸಿದ್ದಾರೆ. ಈ ಸಂದರ್ಭದಲ್ಲಿ ಮಲ್ಲಿಕಾರ್ಜುನ ಪಾಟೀಲ್, ವೀರೇಶ ತುಗಾಂವ, ರವಿ ಶಿವಪೂಜಿ, ಮುಜಾಫರ್ ಪಟೇಲ್, ವಿಜಯಕುಮಾರ್ ಚಿಟಗುಪ್ಪಕ್ಕರ್, ಡಾ. ರಾಜಶೇಖರ ಕೋರವಾರ, ಸಿದ್ರಾಮ ಗೌಳಿ, ಬಾಬಾ ಆರ್.ಸಿ.ಸಿ., ಡಾ. ರವಿ ಸ್ವಾಮಿ ನಿರ್ಣಾ, ಸುಭಾಷ ಕುಂಬಾರ್, ಅಮೀತ ಹೊಸದೊಡ್ಡಿ, ಉದಯ ಬಬಡಿ, ನಿಲೇಶ ಮಳ್ಳಿ, ಶರಣು ಗಡಮಿ, ಪರಮೇಶ್ವರ್ ಬಬಡಿ, ರಾಶೀದ್ ಪಟೇಲ್, ಆಕಾಶ ಗುತ್ತೆದಾರ್, ಶಾಮರಾವ ಭುತ್ತಾಳೆ, ಮಂಜುನಾಥ್ ಸ್ವಾಮಿ ಫಾತ್ಮಪುರ್, ಮಲ್ಲಪ್ಪ ಭಾಲ್ಕಿ, ಶರಣಬಸವ ಕಾಳಗಿ, ಶಾಂತು ಚಾಮರೆಡ್ಡಿ, ಕರೇಪ್ಪ ಗಡಮಿ, ಮಹೇಶ ಮಹಾಜನ್, ಡಾ. ಬಿ.ಎನ್. ರೆಡ್ಡಿ, ವಿಜಯಕುಮಾರ್ ಕಲ್ಲೂರ್, ಪ್ರಕಾಶ ಗೌಳಿ, ಪ್ರಶಾಂತ ಮೈನಳ್ಳಿ, ದತ್ತು ಗೌಳಿ, ಗುಂಡು-ರೆಡ್ಡಿ ರಂಗಾರೆಡ್ಡಿ, ಪ್ರವೀಣ ರಾಜಾಪುರ್, ಸಚಿನ ಮಠಪತಿ, ಅಣ್ಣೇಪ ಇಸ್ಲಾಂಪುರ್ ಇಟಗಾ, ಕಂಠಯ್ಯಾ ಸ್ವಾಮಿ, ಚಂದ್ರಕಾಂತ ಮಠಪತಿ, ವಿಜಯಕುಮಾರ್ ಉಡಬಾಳ, ರಾಜು ತಂಗಾ ಮುಸ್ತರಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಅಂತರಂಗ ರಣರಂಗವಾಗದಿರಲಿ - ಹಾರಕೂಡ ಶ್ರೀ.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :- ಮೆ 26 ಆಂತರ್ಯ ಹದವಾದಷ್ಟು ಜೀವನ ಮುದುಗೊಳ್ಳುತ್ತದೆ ಹಾಗಾಗಿ ಯಾವತ್ತೂ ಅಂತರಂಗ ರಣರಂಗವಾಗದಂತೆ ಎಚ್ಚರ ವಹಿಸಬೇಕು ಎಂದು ಹಾರಕೂಡದ ಡಾ. ಚನ್ನವೀರ ಶಿವಾಚಾರ್ಯರು ನುಡಿದರು.

ತಾಲೂಕಿನ ಹಾರಕೂಡ ಶ್ರೀಮಠದಲ್ಲಿ ಹಾರಕೂಡ ಗ್ರಾಮದ ಶೀಲವಂತ ಪರಿವಾರದಿಂದ ಆಯೋಜಿಸಿದ ಗುರು ವಂದನೆ ಹಾಗೂ 819ನೇ ತುಲಾಭಾರ ಸಮಾರಂಭದ ಸಾನಿಧ್ಯ ವಹಿಸಿ ಮಾತನಾಡಿದ ಶ್ರೀಗಳು ಮನಸ್ಸಿನ ಸುದ್ದಿಕರಣಕ್ಕಾಗಿ ಸತ್ಸಂಗ, ಸದ್ವಿಚಾರ, ಸದಾಚಾರಗಳನ್ನು ರೂಢಿಸಿಕೊಂಡಾಗ ಬದುಕು ಸರಳವಾಗುತ್ತದೆ.

ಆಲೋಚನೆಗಳು ಉನ್ನತೀಕರಣಗೊಂಡಾಗ ಸಾತ್ವಿಕ ವೈಭವ ಅನುಭವಿಸಲು ಸಾಧ್ಯವಾಗುತ್ತದೆ.

ಗುರುಸೇವೆಯಿಂದ ಮೌಲ್ಯಾಧರಿತ ಬದುಕು ಸಾಧ್ಯವಾಗುತ್ತದೆ.

ಹಾರಕೂಡ ಗ್ರಾಮದ ಶೀಲವಂತ ಪರಿವಾರದಿಂದ ಆಯೋಜಿಸಿದ ಗುರುವಂದನೆ ಹಾಗೂ ತುಲಾಭಾರ ಸೇವೆಯಿಂದ ಲಿಂ. ಚನ್ನಬಸವ ಶಿವಯೋಗಿಗಳು ಯಾವತ್ತೂ ಆ ಪರಿವಾರಕ್ಕೆ ಶ್ರೀರಕ್ಷೆ ನೀಡಲಿ, ಸರ್ವರಿಗೂ ಸನ್ಮಂಗಳವಾಗಲಿ ಎಂದು ಶುಭ ಹಾರೈಸಿದರು.


ಕಾರ್ತಿಕಸ್ವಾಮಿ ಯಲದಗುಂಡಿ ಪ್ರಾರ್ಥನಾ ಗೀತೆ ಹಾಡಿದರು.

ಕಲ್ಯಾಣಿ ಶೀಲವಂತ ಸಂಗೀತ ಸೇವೆ ಸಲ್ಲಿಸಿದರು.

ಈ ಸಂದರ್ಭದಲ್ಲಿ

ಬಿ. ಕೆ. ಹಿರೇಮಠ, ಮಲ್ಲಿನಾಥ ಹಿರೇಮಠ ಹಾರಕೂಡ, ಮೇಘರಾಜ ನಾಗರಾಳೆ, ಸಿದ್ರಾಮಪ್ಪ ಗುದಗೆ, ವೀರಣ್ಣ ಶೀಲವಂತ, ವಿಜಯಕುಮಾರ ಸಂಗೋಳಗೆ, ಪಂಡಿತರಾವ ದೇಗಾಂವ, ಚನ್ನಪ್ಪ ದಾಮಾ ಸೇರಿದಂತೆ ಅನೇಕರು ಭಾಗವಹಿಸಿದ್ದರು. ಅಂಬಾರಾಯ ಊಗಾಜಿ ಸ್ವಾಗತಿಸಿ. ನಿರೂಪಿಸಿದರು. ಚನ್ನಪ್ಪ ಶೀಲವಂತ ವಂದಿಸಿದರು.

# ಶ್ರೀದೇವಿ ಸ್ತ್ರೀ ಶಕ್ತಿ ಸಂಘ ನ್ಯಾಯ ಬೆಲೆ ಅಂಗಡಿಯವರು ಅಧಿಕಾರಿಗಳ ಆದೇಶಕ್ಕೆ ನಿರ್ಲಕ್ಷ್ಯ




ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ಪಟ್ಟಣದ 23ನೇ ವಾರ್ಡಿನ ಫಾತ್ಮಪುರ್ ಮತ್ತು 22ನೇ ವಾರ್ಡಿನ ಪ್ರಿಯಾದರ್ಶನಿ ಎರೆಡು ಕಾಲೋನಿಗಳಲ್ಲಿ 8 ದಿವಸ ಪಡಿತರ ಧಾನ್ಯ ನೀಡಬೇಕು ಎಂದು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಉಪನಿರ್ದೇಶಕರ ನಿರ್ದೇಶನದಂತೆ ಏಪ್ರಿಲ್ 21ರಂದು ಫಾತ್ಮಪುರ್ ಮತ್ತು ಪ್ರಿಯಾದರ್ಶನಿ ಕಾಲೋನಿಗಳಲ್ಲಿ ವಾರದ 8 ದಿನ ನ್ಯಾಯ ಬೆಲೆ ಅಂಗಡಿ ಸಂಖ್ಯೆ 1963 ಶ್ರೀದೇವಿ ಸ್ತ್ರೀ ಶಕ್ತಿ ಸಂಘ ಮತ್ತು ನ್ಯಾಯ ಬೆಲೆ ಅಂಗಡಿ ಸಂಖ್ಯೆ 124 ಇವರು ಪಡಿತರ ಧಾನ್ಯ ನೀಡಬೇಕು ಎಂದು ಆದೇಶಿಸಿದ್ದಾರೆ. ಆದರೆ ಕೇವಲ ನ್ಯಾಯ ಬೆಲೆ ಅಂಗಡಿ ಸಂಖ್ಯೆ124 ವಿ.ಎಸ್.ಎಸ್.ಎನ್ ಅಂಗಡಿ ಅವರು ಮಾತ್ರ ಪಡಿತರ ಧಾನ್ಯ ವಿತರಿಸುತ್ತಿದ್ದಾರೆ. ಶ್ರೀದೇವಿ ಸ್ತ್ರೀ ಶಕ್ತಿ ಸಂಘ ನ್ಯಾಯ ಬೆಲೆ ಅಂಗಡಿ ಅವರು ಅಧಿಕಾರಿಗಳ ಆದೇಶ ಪಾಲಿಸುತ್ತಿಲ್ಲಾ ಎಂದು ಗ್ರಾಹಕರು ತಿಳಿಸಿದ್ದಾರೆ. ಯಥಾಸ್ಥಿತಿ ಮೊದಲಿನ ಹಾಗೆ ಚಿಟಗುಪ್ಪ ಪಟ್ಟಣಕ್ಕೆ ತೆರಳಿ ಪಡಿತರ ಧಾನ್ಯ ತರುತ್ತಿದ್ದೇವೆ.

ಒಂದು ಕಣ್ಣಿಗೆ ಸುಣ್ಣ ಇನ್ನೊಂದು ಕಣ್ಣಿಗೆ ಬೆಣ್ಣೆಯ ಪರಿಸ್ಥಿತಿ ಒದಗಿ ಬಂದಿದೆ ಎಂದು ಪಡಿತರ ಚೀಟಿ ಗ್ರಾಹಕರು ಪತ್ರಿಕೆಗೆ ತಿಳಿಸಿದ್ದಾರೆ. ಕೂಡಲೇ ಸಂಬಂಧ ಪಟ್ಟ ಅಧಿಕಾರಿಗಳು ಈ ಕಡೆ ಗಮನ ಹರಿಸಿ ಗ್ರಾಹಕರಿಗೆ ನ್ಯಾಯ ಒದಗಿಸಬೇಕು ಎಂದು ಆಗ್ರಹಿಸಿದ್ದಾರೆ.

ಮಲ್ಲಮ್ಮ ನುಡಿ ವಾರ್ತೆ

## ವಚನ....




ಬಯಲ ಭವಕ್ಕೆ ಭವಿಯಾಗಿ ಕತ್ತಲೆಯಲ್ಲಿ ಬಂದು ನವ ಮಾಸ ಸೋಹಂ ಸೋಹಂ ಎಂದು ಗರ್ಭದಲ್ಲಿ ಪರಿತಪಿಸಿದೆ.

ಬ್ರಹ್ಮಾಂಡದಿಂದ ಅಂಡತತ್ವವಾಗಿ ಉದಿಸಿ ಪಿಂಡವಾಗಿ ಬೆಳೆದು ಬಯಲ ಬ್ರಹ್ಮಾಂಡದಲ್ಲಿ ಅಸ್ತಿತ್ವವದ ಆಕಾರವಾಗಿ ವ್ಯಕ್ತಿತ್ವದ ನೆನಹು ಕೊಟ್ಟು ಪರಾತತ್ವಕ್ಕೆ ನೆಲೆ ಕಟ್ಟಿದನಯ್ಯಾ ಮುಕ್ತೇಶ್ವರ.

-ವಿಶ್ವನಾಥ ಮುಕ್ತಾ ಬಸವಕಲ್ಯಾಣ

# ಕ ಕಾ ಪ ಧ್ವನಿ ಸಂಘಟನೆಯ 3ನೇ ಪತ್ರಕರ್ತರ ಅತಿ ವಿಜೃಂಭಣೆಯಿಂದ ನಡೆದ ರಾಜ್ಯ ಸಮ್ಮೇಳನ: ಜಾನಸನ ಘೋಡೆ



ಮಲ್ಲಮ್ಮ ನುಡಿ ವಾರ್ತೆ

ಬೀದರ.ಮೇ.25:ಮಾಧ್ಯಮ ಅಕಾಡೆಮಿ ಪುರಸ್ಕೃತರಾದ ಬಂಗ್ಲೆಮಲ್ಲಿಕಾರ್ಜುನಸ್ಥಾಪಿತ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಧ್ವನಿ ಸಂಘಟನೆ 3ನೇ ಪತ್ರಕರ್ತರ ರಾಜ್ಯ ಸಮ್ಮೇಳನ ಬೆಂಗಳೂರಿನ ಜೆ.ಸಿ ರಸ್ತೆ ಬಳಿ ಇರುವ ಕನ್ನಡ ಮತ್ತು ಸಂಸ್ಕೃತ ಇಲಾಖೆಯ ರವೀಂದ್ರಕಲಾಕ್ಷೇತ್ರದಲ್ಲಿ ಶನಿವಾರ ದಿನಾಂಕ 24 –05–2025 ರಂದು ಜರುಗಿದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಧ್ವನಿ ಸಂಘಟನೆಯ 3ನೇ ಪತ್ರಕರ್ತರ ರಾಜ್ಯ ಸಮ್ಮೇಳನ ವಿವಿಧಕ್ಷೇತ್ರಗಳಲ್ಲಿ ಸಾಧನೆಗೈದ ಸಾಧಕರಿಗೆ ರಾಜ್ಯ ಪ್ರಶಸ್ತಿ ಪ್ರಧಾನ ಹಾಗೂ ವಿಚಾರ ಸಂಕೀರ್ಣ ಹಾಗೂ ಸಮಾರೋಪ ಸಮಾರಂಭ ದಿವ್ಯ ಸಾನಿಧ್ಯ ಮಹರ್ಷಿ ಡಾ॥ ಆನಂದ ಗುರೂಜೀ, ಸಂಸ್ಥಾಪಕರು ಬ್ರಹ್ಮರ್ಷಿ ಆನಂದ ಸಿದ್ದಿ ಪೀಠ, ಸಾದಳ್ಳಿ ಶ್ರೀ ಪರಮ ಪೂಜ್ಯ ಷಡಕ್ಷರಿ ಶಿವಯೋಗಿ ಡಾ? ಮುರುಘರಾಜೇಂದ್ರ ಮಹಾಸ್ವಾಮೀಜಿ ಪೀಠಾಧಿಪತಿಗಳು ಜಿಡಗಾ ಮಠ ಶ್ರೀ ಪರಮ ಪೂಜ್ಯ ಹವಾ ಮಲ್ಲಿನಾಥ ಮಹರಾಜ್ ನಿರ್ಗುಡಿ, ರಾ. ಅಧ್ಯಕ್ಷರು ಜೈ ಭಾರತ ಮಾತಾ ಸೇವಾ ಸಮಿತಿ ಉದ್ಘಾಟನೆ:– ಮಾನ್ಯ ಶ್ರೀ ಸಂತೋಷ ಹೆಗಡೆ, ನಿವೃತ್ತ ಸುಪ್ರೀಂ ಕೋರ್ಟ್‌ನ ನ್ಯಾಯಾಧೀಶರು, ಬೆಂಗಳೂರು. ಪ್ರಸ್ತಾವಿಕ ನುಡಿ:– ಬಂಗ್ಲೆಮಲ್ಲಿಕಾರ್ಜುನ, ರಾಜ್ಯಾಧ್ಯಕ್ಷರು, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಧ್ವನಿ, ಬೆಂಗಳೂರು. ಅಧ್ಯಕ್ಷತೆ:– ಮಾನ್ಯ ಶ್ರೀ ಕೆ.ವಿ. ಪ್ರಭಾಕರ್ ಮಾನ್ಯ ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರು, ಬೆಂಗಳೂರು ಕಾ.ನಿ.ಪ. ಧ್ವನಿ ಚಾರಿಟೆಬಲ್ ಟ್ರಸ್ಟ್ ಚಾಲನೆ:– ಮಾನ್ಯ ರುದ್ರಣ್ಣ ಹರ್ತಿಕೋಟೆ, ಆಯುಕ್ತರು ಕರ್ನಾಟಕ ಮಾಹಿತಿ ಆಯೋಗ, ಬೆಂ. ಕನ್ನಡ ಪ್ರಭ ಪತ್ರಿಕೆ–ಯ ಹಿರಿಯ ಪತ್ರಕರ್ತರಾದ ಜಗಳೂರು ಲಕ್ಷ್ಮಣರಾವ್ ರವರ ಅಭಿನಂದನಾ ಗ್ರಂಥ ಬಿಡುಗಡೆ ಹಾಗೂ ಸನ್ಮಾನ :– ಮಾನ್ಯಶ್ರೀ ಜಿ.ಬಿ. ವಿನಯ ಕುಮಾರ್ ಎಂ.ಡಿ. ಇನ್ ಸೈಟ್ ಕೋಚಿಂಗ್ ಸೆಂಟರ್ ಹಾಗೂ ಹೋರಾಟಗಾರರು ಪತ್ರಕರ್ತರ ಕುಟುಂಬಕ್ಕೆ ಚೆಕ್ ವಿತರಣೆ:– ಮಾನ್ಯಶ್ರೀ ವಿಶ್ವ.ಎನ್ ಸಿ.ಇ.ಓ, ವಿಶ್ವಾಸ್ ವರ್ಲ್ಡ್ ಟೆಕ್ ಪ್ರೈವೇಟ್ ಲಿಮಿಟೆಡ್,ಬೆಂ.ಮಾನ್ಯ ಶ್ರೀ ಪುಟ್ಟಣ್ಣ ವಿಧಾನಪರಿಷತ್ ಸದಸ್ಯರು, ಬೆಂ. ಹಾಗೂ ಮಾನ್ಯಶ್ರೀ ಮುಂಡ್ರಿಗಿ ನಾಗರಾಜ ಅಧ್ಯಕ್ಷರುಲಿಡ್ಕರ್ ನಿಗಮ.ಬೆಂ.ಶ್ರೀ ರಾಜು ಮಹೇಂದ್ರಕರ ಹಾಗೂ ಶ್ರೀ ಶ್ವೇತಾ ನಾಯ್ಕ ಇವರು ಮಾಧ್ಯಮ ಕ್ಷೇತ್ರಕೆ ಸಲ್ಲಿಸಿರುವ ಸೇವೆಯನ್ನು ಪರಿಗಣಿಸಿ ಕರ್ನಾಟಕ ಮಾಧ್ಯಮ ರತ್ನ ರಾಜ್ಯ ಪ್ರಶಸ್ತಿಯನ್ನು ನೀಡಿ ಸನ್ಮಾನಿಸಿ ಗೌರವಿಸಲಾಗಿದೆ ಹಾಗೂ. ಸಹನಾ ಬಿ ಆರ್ ಮತ್ತು ಶಶಿಕಲಾ ಲಂಗೋಟಿ ಇವರು ಸಮಾಜಕ್ಕೆ ಸಲ್ಲಿಸಿರುವ ಸೇವೆಯನ್ನು ಪರಿಗಣಿಸಿ ಕರುನಾಡ ಸಾಧಕ ರತ್ನ ರಾಜ್ಯ ಪ್ರಶಸ್ತಿಯನ್ನು ನೀಡಿ ಸನ್ಮಾನಿಸಿ ಗೌರವಿಸಲಾಗಿದೆ ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಧ್ವನಿ ಸಂಘಟನೆ ರಾಜ್ಯ ಕಾರ್ಯದರ್ಶಿ ಜಾನಸನ ಘೋಡೆ ತಿಳಿಸಿದ್ದಾರೆ.

## ನಿಸರ್ಗ ಕಾನ್ವೆಂಟ್ ಸ್ಕೂಲ್‌ನಲ್ಲಿ ಪ್ರಾರಂಭೋತ್ಸವ



ಮಲ್ಲಮ್ಮ ನುಡಿ ವಾರ್ತೆ

ಬೀದರ.ಮೇ.26:ನಗರದ ಓಡವಾಡದ ಅನಂತಶಯನ ಮಂದಿರ ಬಳಿ ಸೋಲಪುರ ರಸ್ತೆಯಲ್ಲಿ ಇರುವ ನಿಸರ್ಗ ಕಾನ್ವೆಂಟ್ ಸ್ಕೂಲ್‌ನಲ್ಲಿ ಶಾಲಾ ಪ್ರಾರಂಭೋತ್ಸವ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮ ಈಚೆಗೆ ನಡೆಯಿತು.

ಕಾರ್ಯಕ್ರಮವನ್ನು ಉದ್ಘಾಟಿಸಿದ ಮಾಜಿ ಸಚಿವ ಬಂಡೆಪ್ಪ ಕಾಶೆಂಪುರ ಮಾತನಾಡಿ, ಮಕ್ಕಳಿಗೆ ಶಿಕ್ಷಣದ ಜತೆ ಒಳ್ಳೆಯ ಸಂಸ್ಕಾರ ಕಲಿಸುವುದು ಬಹಳ ಅವಶ್ಯಕವಾಗಿದೆ ಎಂದು ಹೇಳಿದರು.

ಜಿಲ್ಲೆಯ ಮಕ್ಕಳು ಶೈಕ್ಷಣಿಕ ಪ್ರಗತಿ ಸಾಧಿಸಬೇಕು. ರಾಜ್ಯ ಹಾಗೂ ರಾಷ್ಟ್ರಮಟ್ಟದಲ್ಲಿ ಹೆಸರು ಮಾಡಬೇಕು ಎಂದು ತಿಳಿಸಿದರು.

ಕೋವಿಡ್ ವೇಳೆ ಸೇವೆ ಸಲ್ಲಿಸಿದ ಗಾದಗಿ,ಮಾಳೆಗಾಂವ್ ಹಾಗೂ ಅಷ್ಟೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಆಶಾ ಕಾರ್ಯಕರ್ತೆಯರನ್ನು ಸನ್ಮಾನಿಸಲಾಯಿತು.

ಸ್ಕೂಲ್ ಕಾರ್ಯದರ್ಶಿ ಗುಂಡಪ್ಪ ಮಲ್ಕನೋರ ಅಧ್ಯಕ್ಷತೆ ವಹಿಸಿದ್ದರು. ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಮೃತರಾವ್ ಚಿಮಕೋಡೆ, ಗಾಂಧಿಗಂಜ್ ಸಹಕಾರ ಬ್ಯಾಂಕ್ ಅಧ್ಯಕ್ಷ ವಿಜಯಕುಮಾರ ಪಾಟೀಲ ಗಾದಗಿ, ಕಲಬುರಗಿ–ಬೀದರ್–ಯಾದಗಿರಿ ಹಾಲು ಒಕ್ಕೂಟದ ಮಾಜಿ ಅಧ್ಯಕ್ಷ,ಹಾಲಿ ನಿರ್ದೇಶಕ ಮಲ್ಲಿಕಾರ್ಜುನ ಬಿರಾದಾರ, ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಘಟಕದ ಅಧ್ಯಕ್ಷ ಸುರೇಶ ಚನಶೆಟ್ಟಿ, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಬಾಬುರಾವ್ ಮಲ್ಕಾಪುರ, ಡಾ. ಮಲ್ಲಿಕಾರ್ಜುನ ಜಿ.ಬಿ. ರವಿ ಬಿರಾದಾರ, ಶಿವಕುಮಾರ ಖಿಂಡಿ, ಕಸ್ತೂರಿ ಜಾಪಟ್ಟೆ, ಪ್ರಕಾಶ ಖಿಂಡಿ, ರಾಹುಲ್ ಮೋರೆ, ಶಾರುಲತಾ ಸಂಪತ್, ಆನಂದಕುಮಾರ ಉದಾನೆ, ವೀರಶೆಟ್ಟಿ ಪಾಟೀಲ, ಕಲ್ಯಾಣರಾವ್ ಅಡಸಾರೆ ಇದ್ದರು. ಅಕ್ಷತಾ ಸ್ವಾಗತಿಸಿದರು. ನಾಗನಾಥ ಬಿರಾದಾರ ನಿರೂಪಿಸಿದರು. ಗೀತಾ ವಂದಿಸಿದರು.

## ವಚನ ಮಂಟಪ ಕಾರ್ಯಕ್ರಮ ಇಂದು

ಮಲ್ಲಮ್ಮ ನುಡಿ ವಾರ್ತೆ

ಬೀದರ.ಮೇ.26:ಜಾಗತಿಕ ಲಿಂಗಾಯತ ಮಹಾಸಭಾದ ಜಿಲ್ಲಾ ಘಟಕದ ವತಿಯಿಂದ ಇಲ್ಲಿಯ ಗಾಂಧಿಗಂಜ್‌ನ ಬಸವೇಶ್ವರ ದೇವಸ್ಥಾನದಲ್ಲಿ ಮೇ 27 ರಂದು ಸಂಜೆ 6ಕ್ಕೆ ಮಾಸಿಕ 'ವಚನ ಮಂಟಪ' ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಪತ್ರಕರ್ತ ಶಶಿಕಾಂತ ಶೆಂಬೆಳ್ಳಿ ಉದ್ಘಾಟಿಸುವರು. ಕೂಡಲಸಂಗಮದ ಬಸವ ಧರ್ಮ ಪೀಠಾಧ್ಯಕ್ಷೆ ಮಾತೆ ಡಾ. ಗಂಗಾದೇವಿ ದಿವ್ಯ ಸಾನಿಧ್ಯ,ಜಾಗತಿಕ ಲಿಂಗಾಯತ ಮಹಾಸಭಾದ ಜಿಲ್ಲಾ ಘಟಕದ ಅಧ್ಯಕ್ಷ ಬಸವರಾಜ ಧನ್ನೂರ ಅಧ್ಯಕ್ಷತೆ ವಹಿಸುವರು.

ಬಸವಗಿರಿಯ ಪ್ರಭುದೇವ ಸ್ವಾಮೀಜಿ 'ಕರ್ತನಟ್ಟಿದಡೆ ಮರ್ತ್ಯದಲ್ಲಿ ಮಹಾ ಮನೆಯ ಕಟ್ಟಿದೆ' ವಿಷಯ ಕುರಿತು ಅನುಭಾವ ಮಂಡಿಸುವರು.

ಸರ್ಕಾರಿ ಮತ್ತು ಅರೆ ಸರ್ಕಾರಿ ನೌಕರರ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ರಾಜೇಂದ್ರಕುಮಾರ ಗಂದಗೆ, ಕರ್ನಾಟಕ ಸಿವಿಲ್ ಎಂಜಿನಿಯರ್ಸ್ ಕೌನ್ಸಿಲ್ ಸದಸ್ಯ ಹಾವಶೆಟ್ಟಿ ಪಾಟೀಲ, ಗಾಂಧಿಗಂಜ್‌ನ ದಿ ಗ್ರೇನ್ ಆಯಿಂಡ್ ಸೀಡ್ಸ್ ಮರ್ಚಂಟ್ಸ್ ಅಸೋಸಿಯೇಷನ್ ಖಜಾಂಚಿ ಬಂಡೆಪ್ಪ ಗಡ್ಡೆ, ಜಾಗತಿಕ ಲಿಂಗಾಯತ ಮಹಾಸಭಾದ ಜಿಲ್ಲಾ ಘಟಕದ ಗೌರವ ಸಲಹೆಗಾರ ಶರಣಪ್ಪ ಮೈಲೂರಕರ್ ಲಾಡಗೇರಿ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು.

ಕಲಾವಿದ ಆದಿತ್ಯ ಶಿವಕುಮಾರ ಪಾಂಚಾಳ ವಚನ ಗಾಯನ ನಡೆಸಿಕೊಡುವರು.ಗಾಂಧಿಗಂಜ್‌ನ ಚನ್ನಬಸವ ಟ್ರೇಡಿಂಗ್ ಕಂಪನಿಯ ಮುಖ್ಯಸ್ಥ ರಾಜಕುಮಾರ ಹಜ್ಜರಗಿ ಭಕ್ತಿದಾಸೋಹಿಯಾಗಿರುವರು ಎಂದು ಜಾಗತಿಕ ಲಿಂಗಾಯತ ಮಹಾಸಭಾದ ಪ್ರಕಟಣೆ ತಿಳಿಸಿದೆ.

# ಧರ್ಮ, ಸಮಾಜ ಕಟ್ಟಿದ್ದ ಅಕ್ಕ:ಹುಲಸೂರುಶ್ರೀ




ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 26 :ಅಕ್ಕ ಅನ್ನಪೂರ್ಣಾತಾಯಿ ಶಾಲಾ, ಕಾಲೇಜುಗಳನ್ನು ಕಟ್ಟಲಿಲ್ಲ. ಧರ್ಮ,ಸಮಾಜವನ್ನು ಕಟ್ಟಿದ್ದರು. ಶೇ 100ಕ್ಕೆ 100 ರಷ್ಟು ಧರ್ಮ ಪ್ರಚಾರಕರಾಗಿದ್ದರು ಎಂದು ಹುಲಸೂರಿನ ಶಿವಾನಂದ ಸ್ವಾಮೀಜಿ ಬಣ್ಣಿಸಿದರು.

ಇಲ್ಲಿಯ ಬಸವಗಿರಿಯಲ್ಲಿ ಶನಿವಾರ ಸಂಜೆ ನಡೆದ ಅಕ್ಕ ಅನ್ನಪೂರ್ಣಾತಾಯಿ ಪ್ರಥಮ ಸ್ಮರಣೋತ್ಸವದ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿದರು.

ಹೆಣ್ಣು ಹೆಣ್ಣಲ್ಲ, ಹೆಣ್ಣು ರಕ್ಕಸಿಯಲ್ಲ, ಹೆಣ್ಣು ಸಾಕ್ಷಾತ್ ಕಪಿಲಸಿದ್ಧ ಮಲ್ಲಿಕಾರ್ಜುನ ಎಂಬ ಸಿದ್ಧರಾಮೇಶ್ವರರ ವಚನ ಅಕ್ಕ ಅನ್ನಪೂರ್ಣಾತಾಯಿಗೆ ಅನ್ವಯಿಸುತ್ತದೆ. ಅವರು ಬಸವ ತತ್ವಗಳಿಗೆ ಆದರ್ಶರಾಗಿ ಬದುಕಿದ್ದರು ಎಂದು ಹೇಳಿದರು.

ಅಕ್ಕನವರ ಹೆಸರಲ್ಲಿ ರಾಷ್ಟ್ರಮಟ್ಟದ ಪ್ರಶಸ್ತಿ ನೀಡುವ ವ್ಯವಸ್ಥೆಯಾಗಬೇಕು. ಅದನ್ನು ಮಹಿಳಾ ಸಾಧಕರಿಗೆ ಕೊಟ್ಟು ಪ್ರೋತ್ಸಾಹಿಸಬೇಕು ಎಂದು ಸಲಹೆ ಮಾಡಿದರು.

ಅಕ್ಕನವರು ಕೂಡಲಸಂಗಮದ ಬಸವಣ್ಣನವರ ಐಕ್ಯಮಂಟಪದಲ್ಲಿ ಸ್ವತಃ ನಿರಂಜನ ಜಂಗಮ ದೀಕ್ಷೆ ಪಡೆದು, ಪ್ರಭುದೇವ ಸ್ವಾಮೀಜಿ ಅವರಿಗೂ ನಿರಂಜನ ದೀಕ್ಷೆ ನೀಡಿದ್ದು ದಾಖಲಾತ್ಮಕ ಸಂಗತಿ ಎಂದರು.

ಲಿಂಗಾಯತ ಮಹಾ ಮಠದ ಪ್ರಭುದೇವ ಸ್ವಾಮೀಜಿ ಮಾತನಾಡಿ, ಅಕ್ಕನವರು ನಮ್ಮೆಲ್ಲರ ಮನದ ಮೈಲಿಗೆ ತೊಳೆಯಲು ಬಂದವರು. ಪರಸ್ಪರ ಪ್ರೀತಿಸಲು ಕಲಿಸುವ ವಚನಗಳ ಸೆರಗು ಹಿಡಿದು ನಾವು ನಡೆಯಬೇಕಿದೆ. ಇಂದು ಅಕ್ಕನವರ ಉಸಿರಿಲ್ಲ. ಆದರೆ, ಹೆಸರಿದೆ. ಅವರ ಆದರ್ಶಗಳು ನಮ್ಮ ಮುಂದಿವೆ ಎಂದು ಹೇಳಿದರು.

ಅಕ್ಕ ಬದುಕಿನ ಕೊನೆ ಉಸಿರೆಳೆಯುವ ಮುನ್ನ 116 ದಿನ ಪ್ರವಚನದ ಬಾವನ್ನ ಬಸವಣ್ಣ ಪುಸ್ತಕ ಪ್ರಕಟವಾಗಬೇಕೆಂಬ ಇಚ್ಛೆ ಭಾಲ್ಕಿ ಶ್ರೀಗಳಿಗೆ ಹೇಳಿದ್ದು ಅವರ ಸಮರ್ಪಣೆ ಔನತ್ಯ ತೋರಿಸುತ್ತದೆ ಎಂದು ತಿಳಿಸಿದರು.

ವಿಶ್ರಾಂತ ಜಿಲ್ಲಾ ನ್ಯಾಯಾಧೀಶ ಸುಭಾ???ಚಂದ್ರ ನಾಗರಾಳೆ ಮಾತನಾಡಿ, ಅಕ್ಕ ಆಕಾಶದ ಧ್ರುವತಾರೆ. ಪುಣ್ಯದಂತೆ ಬಂದು ಜ್ಞಾನದಂತೆ ಹೋದರು. ಅವರು ಹಚ್ಚಿದ ಜ್ಯೋತಿ ನಂದಲು ಸಾಧ್ಯವಿಲ್ಲ. ಇನ್ನೂ ಪ್ರಖರವಾಗಿ ಬೆಳಗಲಿದೆ ಎಂದು ಹೇಳಿದರು.

ಲಿಂಗಾಯತ ಮಹಾ ಮಠದ ಕಾರ್ಯದರ್ಶಿ ಚನ್ನಬಸವ ಹಂಗರಗಿ, ಮಾಣಿಕಪ್ಪ ಗೋರನಾಳೆ ಅವರು ಅಕ್ಕನವರೊಂದಿಗಿನ ತಮ್ಮ ಒಡನಾಟ, ಅಕ್ಕನವರ ಮಾನವೀಯ ಗುಣಗಳ ಕುರಿತು ಹೇಳಿದಾಗ ಸಭೆಯಲ್ಲಿದ್ದವರ ಕಣ್ಣುಗಳು ತೇವವಾದವು. ಪೂರ್ಣಚಂದ್ರ ಮೈನಾಳೆ ನಿರ್ದೇಶನದಲ್ಲಿ ನೃತ್ಯಾಂಗನಾ ನಾಟ್ಯ ಶಾಲೆಯ ಮಕ್ಕಳು ಪ್ರದರ್ಶಿಸಿದ ನಾಲ್ಕು ವಚನ ನೃತ್ಯಗಳು ಸಭಿಕರ ಮನ್ನಣೆ ಪಡೆದವು. ಠಾಣಾಕುಶನೂರದ ಸಿದ್ಧಲಿಂಗ ಸ್ವಾಮೀಜಿ, ಸಾಯಗಾಂ???ನ ಶಿವಾನಂದ ಸ್ವಾಮೀಜಿ, ಹುಡಗಿಯ ಚನ್ನಮಲ್ಲದೇವರು ಸಮ್ಮುಖ ವಹಿಸಿದ್ದರು. ಕಲಬುರಗಿ ಜಿಲ್ಲಾ ಪಂಚಾಯಿತಿಯ ಯೋಜನಾಧಿಕಾರಿ ಶರಣಬಸವ ಮಠಪತಿ ಅಧ್ಯಕ್ಷತೆ ವಹಿಸಿದ್ದರು. ಸಾಹಿತಿ ರಮೇಶ ಮಠಪತಿ ಮತ್ತಿತರರು ಇದ್ದರು. ಅಭಿಷೇಕ ಮಠಪತಿ ಸ್ವಾಗತಿಸಿದರು.

**ಗಮನ ಸೆಳೆದ ಅಕ್ಕನ ಐಕ್ಯ ಮಂಟಪ ಅಲಂಕಾರ**

ಶರಣ–ಶರಣೆಯರ ಗೌರವ ಸಮರ್ಪಣೆಯ ಕೇಂದ್ರವಾದ ಅಕ್ಕ ಅನ್ನಪೂರ್ಣತಾಯಿ ಅವರ ಐಕ್ಯ ಮಂಟಪವನ್ನು ಬಗೆ ಬಗೆಯ ಹೂವುಗಳಿಂದ ವಿಶೇಷವಾಗಿ ಅಲಂಕರಿಸಲಾಗಿತು. ಎರಡು ಕ್ವಿಂಟಲ್ ಹೂವುಗಳ ಅಲಂಕಾರ ಜನಮನ ಸೆಳೆಯುತ್ತಿತ್ತು. ಬಂದವರೆಲ್ಲ ಗೌರವ ಸಮರ್ಪಿಸಿ, ಐಕ್ಯ ಮಂಟಪದೆದುರು ಸೆಲ್ಫಿ ತೆಗೆದುಕೊಳ್ಳುತ್ತಿದ್ದ ದೃಶ್ಯ ಬೆಳಿಗ್ಗೆಯಿಂದ ತಡರಾತ್ರಿವರೆಗೂ ಸಾಗಿತ್ತು.

**ಅನ್ನಪೂರ್ಣ ಯೋಜನೆ: ರೋಗಿಗಳಿಗೆ ಪ್ರಸಾದ**

'ಅನ್ನಪೂರ್ಣ' ಯೋಜನೆಯಡಿ ನಗರದ ಬ್ರಿಮ್ಸ್ ಆಸ್ಪತ್ರೆಯಲ್ಲಿ ಶನಿವಾರ ರೋಗಿಗಳಿಗೆ ಅನ್ನ ಪ್ರಸಾದ ವಿತರಿಸಲಾಯಿತು.

ಅಕ್ಕ ಅನ್ನಪೂರ್ಣತಾಯಿ ಪ್ರಥಮ ಸ್ಮರಣೋತ್ಸವದ ಸವಿ ನೆನಪಿಗಾಗಿ ಲಿಂಗಾಯತ ಮಹಾ ಮಠ ಹಾಗೂ ರೋಟರಿ ಕ್ಲಬ್ ಆಫ್ ಬೀದರ್ ನ್ಯೂ ಸೆಂಚುರಿ ವತಿಯಿಂದ 'ಅನ್ನಪೂರ್ಣ' ಯೋಜನೆಗೆ ಚಾಲನೆ ನೀಡಲಾಗಿದೆ. ಯೋಜನೆಯಡಿ ಲಿಂಗಾಯತ ಮಹಾ ಮಠದ ವತಿಯಿಂದ ನಿರಂತರ ಪ್ರಸಾದ ವಿತರಣೆಗಾಗಿ ರೋಟರಿ ಕ್ಲಬ್ ಆಫ್ ಬೀದರ್ ನ್ಯೂ ಸೆಂಚುರಿಯು ಮಠಕ್ಕೆ ರೂ. 6 ಲಕ್ಷದ ವಾಹನ ಕೊಡುಗೆಯಾಗಿ ನೀಡಿದೆ.

## ಕರ್ನಾಟಕ ಸಿವಿಲ್ ಇಂಜನಿಯರ್ ಪರಿಷತ್‌ಗೆ ಹಾವಶೆಟ್ಟಿ ನೇಮಕ



ಬೀದರ. ಮೇ. 26 : ರಾಜ್ಯ ಸರ್ಕಾರ ಹೊಸದಾಗಿ ಕರ್ನಾಟಕ ವೃತ್ತಿಪರ ಸಿವಿಲ್ ಇಂಜಿನಿಯರ್‌ಗಳ ಪರಿಷತ್ (ಕರ್ನಾಟಕ ಪ್ರೊಫೆಷನಲ್ ಸಿವಿಲ್ ಇಂಜಿನಿರ್ಸ್ಸ ಕೌನ್ಸಿಲ್) ಸ್ಥಾಪನೆ ಮಾಡಿದ್ದು,ಕಲಬುರಗಿ ವಿಭಾಗದಿಂದ ಇಲ್ಲಿಯ ಹಿರಿಯ ಸಿವಿಲ್ ಇಂಜಿನಿಯರ್ ಹಾವಶೆಟ್ಟಿ ಪಾಟೀಲ್ ಅವರಿಗೆ ಇದರ ಸದಸ್ಯರನ್ನಾಗಿ ನೇಮಿಸಲಾಗಿದೆ.

ಒಟ್ಟು 18 ಸದಸ್ಯರನ್ನು ಹೊಂದಿರುವ ಪರಿಷತ್ ಇದಾಗಿದೆ. ಇದರಲ್ಲಿ 10 ಸದಸ್ಯರಿಗೆ ರಾಜ್ಯದ ನಾಲ್ಕು ವಲಯದಿಂದ ಚುನಾಯಿತ ಮೂಲಕ ಹಿರಿಯ ಸಿವಿಲ್ ಇಂಜಿನಿರ್ಸ್ಗಳನ್ನು ರಾಜ್ಯ ಸರ್ಕಾರ ನೇಮಕ ಮಾಡಿದೆ. ಕಲಬುರಗಿ ವಲಯದ ಇಬ್ಬರಲ್ಲಿ ಹಾವಶೆಟ್ಟಿ ಪಾಟೀಲ್ ಒಬ್ಬರಾಗಿದ್ದಾರೆ. ಎರಡು ವರ್ಷಗಳ ಅವಧಿಗಾಗಿ ಈ ನೇಮಕ ಮಾಡಿ ಲೋಕೋಪಯೋಗಿ ಇಲಾಖೆ (ಕಟ್ಟಡಗಳು) ಸರ್ಕಾರದ ಅಧೀನ ಕಾರ್ಯದರ್ಶಿ ಎಂ.ಜಿ.ರಾಜಶೇಖರ ಶುಕ್ರವಾರ ಆದೇಶ ಹೊರಡಿಸಿದ್ದಾರೆ.

ಕರ್ನಾಟಕ ವೃತ್ತಿಪರ ಸಿವಿಲ್ ಇಂಜಿನಿಯರ್‌ಗಳ ಮಸೂದೆ–2024ಕ್ಕೆ ಒಂದು ವರ್ಷದ ಹಿಂದೆಯೇ ರಾಜ್ಯ ಸರ್ಕಾರ ವಿಧಾನಸಭೆಯಲ್ಲಿ ಅನುಮೋದಿಸಿತ್ತು. ಇದಾದ ಬಳಿಕ ಅಧಿಕೃತವಾಗಿ ಈ ಪರಿಷತ್ತಿಗೆ ಸದಸ್ಯರ ನೇಮಕ ಪ್ರಕ್ರಿಯೆ ನಡೆಸಿದೆ. ಇನ್ಮುಂದೆ ವೃತ್ತಿಪರ ಸಿವಿಲ್ ಇಂಜಿನಿಯರ್‌ಗಳು ಈ ಪರಿಷತ್ತಿನ ಅಡಿಯಲ್ಲಿ ನೋಂದಾಯಿತರಾಗಬೇಕು. ಪ್ರಮಾಣಪತ್ರ ಹೊಂದಿರುವ ಸಿವಿಲ್ ಇಂಜಿನಿರ್ಸ್ಗಳು ಪ್ರಮಾಣೀಕರಿಸಿದ ವಿನ್ಯಾಸ, ಕಟ್ಟಡಗಳನ್ನು ಮಾತ್ರ ಅಧಿಕೃತ ಎಂದು ಪರಿಗಣಿಸಲಾಗುವುದು. ಕಟ್ಟಡಗಳ ಗುಣಮಟ್ಟತೆ, ಉತ್ತಮ ಕಾಮಗಾರಿ ಉದ್ದೇಶದ ಜೊತೆಯಲ್ಲಿಯೇ ವೃತ್ತಿಪರ ಸಿವಿಲ್ ಇಂಜಿನಿರ್ಸ್ಗಳಿಗೆ ಸೂಕ್ತ ತರಬೇತಿ, ತಾಂತ್ರಿಕ ಮಾರ್ಗದರ್ಶನ ಇನ್ನಿತರೆ ಕಾರ್ಯಚಟುವಟಿಕೆಗಳನ್ನು ನಡೆಸಲು ರಾಜ್ಯ ಸರ್ಕಾರ ಪರಿಷತ್ ಸ್ಥಾಪಿಸಿದೆ. ಪರಿಷತ್ ಮೊದಲ ತಂಡದಲ್ಲೇ ಜಿಲ್ಲೆಯಿಂದ ಹಾವಶೆಟ್ಟಿ ಪಾಟೀಲ್ ಅವರಿಗೆ ಸ್ಥಾನ ಸಿಕ್ಕಿರುವುದು ವಿಶೇಷವಾಗಿದೆ.

ಬೆಂಗಳೂರು ವಲಯದಿಂದ ನಾಲ್ವರು, ಬೆಳಗಾವಿ, ಕಲಬುರಗಿ, ಮೈಸೂರು ವಲಯದಿಂದ ತಲಾ ಇಬ್ಬರು ಚುನಾಯಿತ ಸದಸ್ಯರಿಗೆ ಪರಿಷತ್ತಿನಲ್ಲಿ ಸ್ಥಾನ ಕಲ್ಪಿಸಲಾಗಿದೆ. ನಗರಾಭಿವೃದ್ಧಿ ಇಲಾಖೆ ಬಿಬಿಎಂಪಿ ಮುಖ್ಯ ಅಭಿಯಂತರ, ರಾಜ್ಯ ನಗರ ಯೋಜನಾ ಇಲಾಖೆ ಅಪರ ನಿರ್ದೇಶಕ,ವಿಟಿಯು ಬೆಂಗಳೂರು ಕಾಲೇಜಿನ ಪ್ರಾಚಾರ್ಯ, ಜಲಸಂಪನ್ಮೂಲ ಇಲಾಖೆ ಮುಖ್ಯ ಅಭಿಯಂತರ, ಲೋಕೋಪಯೋಗಿ ಇಲಾಖೆಯ ಯೋಜನೆ ಮತ್ತು ರಸ್ತೆಗಳ ಆಸ್ತಿ ನಿರ್ವಹಣಾ ಕೇಂದ್ರದ ಮುಖ್ಯ ಅಭಿಯಂತರ ಸೇರಿ ಎಂಟು ಅಧಿಕಾರಿಗಳನ್ನು ಸಹ ಸರ್ಕಾರ ತಂಡಕ್ಕೆ ನಾಮನಿರ್ದೇಶನ ಮಾಡಿದೆ.

ಹಾವಶೆಟ್ಟಿ ಪಾಟೀಲ್ ಅವರು ಕಳೆದ ಮೂರು ದಶಕಗಳಿಂದ ಗಡಿ ಜಿಲ್ಲೆಯಲ್ಲಿ ವೃತ್ತಿಪರ ಸಿವಿಲ್ ಇಂಜಿನಿಯರ್ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ. ಎರಡು ಸಲ ಅಸೋಷಿಯೇಷನ್ ಆಫ್ ಕನ್ಸಲ್ಟಿಂಗ್ ಇಂಜಿನಿರ್ಸ್ (ಎಸಿಇ) ಜಿಲ್ಲಾಧ್ಯಕ್ಷರಾಗಿ ಕೆಲಸ ಮಾಡಿದ್ದಾರೆ. ಇಂಡಿಯನ್ ಕಾಂಕ್ರಿಟ್ ಇನ್ಸಿಟ್ಯೂಟ್(ಐಸಿಐ) ಕಲ್ಯಾಣ ಕರ್ನಾಟಕ ವಿಭಾಗದ ಅಧ್ಯಕ್ಷರಾಗಿ ಸದ್ಯ ಕಾರ್ಯನಿರ್ವಹಿಸುತ್ತಿದ್ದಾರೆ. ಎಸಿಸಿಇಐ ಎಮಿನೆಂಟ್ ಇಂಜಿನಿಯರ್, ವಿಶ್ವೇಶ್ವರಯ್ಯ ಸದ್ಭಾವನಾ ರಾಷ್ಟ್ರೀಯ ಪ್ರಶಸ್ತಿ ಸೇರಿ ಹಲವು ಪುರಸ್ಕಾರಗಳಿಗೆ ಭಾಜನರಾಗಿದ್ದಾರೆ. ವೃತ್ತಿಪರ ಸಿವಿಲ್ ಇಂಜಿನಿಯರ್ ಪರಿಷತ್ತಿಗೆ ರಾಜ್ಯ ಸರ್ಕಾರ ಇವರನ್ನು ನೇಮಿಸಿದ್ದಕ್ಕಾಗಿ ಸಿವಿಲ್ ಇಂಜಿನಿಯರ್ ಬಳಗ ಸಂತಸ ವ್ಯಕ್ತಪಡಿಸಿ, ಅಭಿನಂದನೆ ಸಲ್ಲಿಸಿದೆ.

## ಪ್ರತಿಭಾ ಪುರಸ್ಕಾರ ಅರ್ಜಿ ಅಹ್ವಾನ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮೇ.26: ತಾಲೂಕಿನ ಸರಕಾರಿ ನೌಕರರ ಮಕ್ಕಳಿಗೆ ಪ್ರತಿಭಾ ಪುರಸ್ಕಾರಕ್ಕಾಗಿ ಆನ್ ಲೈನ್ ಮೂಲಕ ಅರ್ಜಿ ಅಹ್ವಾನಿಸಲಾಗಿದೆ ಎಂದು ತಾಲೂಕು ಸರಕಾರಿ ನೌಕರರ ಸಂಘದ ಅಧ್ಯಕ್ಷ ಚಂದ್ರಶೇಖರ ಬನ್ನಾಳೆ ತಿಳಿಸಿದ್ದಾರೆ.

ರಾಜ್ಯ ಸರಕಾರಿ ನೌಕರರ ಸಂಘದ ವತಿಯಿಂದ 2024–25ನೆಯ ಸಾಲಿನಲ್ಲಿ ಎಸ್ಸೆಸ್ಸೆಲ್ಸಿ ಮತ್ತು ದ್ವಿತೀಯ ಪಿಯುಸಿಯಲ್ಲಿ ಶೇ.90ಕ್ಕಿಂತ ಅಧಿಕ ಅಂಕ ಗಳಿಸಿದ ಸರಕಾರಿ ನೌಕರರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಲಾಗುತ್ತಿದ್ದು,ಅರ್ಜಿ ಸಲ್ಲಿಸಲು ಇದೇ ಮೇ.31 ಕೊನೆಯ ದಿನವಾಗಿದ್ದು ಅರ್ಹ ಮಕ್ಕಳು ಅಗತ್ಯ ದಾಖಲಾತಿಯೊಂದಿಗೆ ನಿಗದಿತ ದಿನದೊಳಗೆ ಅರ್ಜಿ ಸಲ್ಲಿಸಬಹುದಾಗಿದೆ. https://ksgeanews.blogspot.com ಲಿಂಕ್ ಮೂಲಕ ಅರ್ಜಿ ಸಲ್ಲಿಸಲು ಪ್ರಕಟಣೆಯಲ್ಲಿ ಕೋರಿದ್ದಾರೆ.

## ಬಿಜೆಪಿಗರ ಪ್ರತಿಭಟನೆ ಹಾಸ್ಯಾಸ್ಪದ, ಅವರಿಗೆ ನೈತಿಕ ಹಕ್ಕಿಲ್ಲ: ಡಾ.ಶರಣಪ್ರಕಾಶ್ ಪಾಟೀಲ್



ಕಲಬುರಗಿ:ಮೇ.26:ಬಿಜೆಪಿಗರು ಅಧಿಕಾರ ಕಳೆದುಕೊಂಡು ಬುದ್ಧಿ ಭ್ರಷ್ಟರಾಗಿದ್ದಾರೆ, ಅವರಿಗೆ ಯಾವ ವಿಷಯದಲ್ಲಿ ಪ್ರತಿಭಟನೆ ಮಾಡಬೇಕೆನ್ನುವುದು ಗೊತ್ತಾಗುತ್ತಿಲ್ಲ,ಅವರ ಕಲಬುರಗಿ ಚಲೋ ಪ್ರತಿಭಟನೆ ಒಂದು ಹಾಸ್ಯಾಸ್ಪದವಾಗಿದೆ ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ಹೇಳಿದ್ದಾರೆ.ನಗರದ ಕಾಂಗ್ರೆಸ್ ಕಚೇರಿಯಲ್ಲಿ ಸುದ್ದಿಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಇಲ್ಲಿನ ಜಿಲ್ಲಾ ಉಸ್ತುವಾರಿ ಪ್ರಿಯಾಂಕ್ ಖರ್ಗೆ ಅವರನ್ನೇ ನಾಯಿ ಎಂದು ಬೈದು ಮತ್ತೆ ಅವರ ಕ್ಷೇತ್ರಕ್ಕೆ ಹೋಗಿದ್ದಾರೆ, ಅಲ್ಲಿನ ಕಾರ್ಯಕರ್ತರು ಪ್ರಿಯಾಂಕ್ ಖರ್ಗೆ ಅವರನ್ನು ನಾರಾಯಣ ಸ್ವಾಮಿ ಯಾಕೆ ಬೈದಿದ್ದಾರೆ ಎನ್ನುವುದನ್ನು ಸ್ವಾಭಾವಿಕವಾಗಿ ಪ್ರಶ್ನೆ ಮಾಡಿದ್ದಾರೆ. ಅದಕ್ಕೆ ನಾರಾಯಣಸ್ವಾಮಿ ತಾನೇ ವಿಕ್ಟಿಮ್ ತರಹ ಆಡುತ್ತಿದ್ದಾರೆ, ಇಲ್ಲಿ ವಿಕ್ಟಿಮ್ ಇರೋದು ಪ್ರಿಯಾಂಕ್ ಖರ್ಗೆ ಎಂದು ವಿವರಿಸಿದ ಅವರು, ನಾರಾಯಣಸ್ವಾಮಿಯವರು ಪ್ರಿಯಾಂಕ್ ಖರ್ಗೆ ಅವರಿಗೆ ನಾಯಿ ಎಂದು ಬೈಯ್ದಿದ್ದಕ್ಕೆ ಕಲಬುರಗಿ ಪತ್ರಕರ್ತರೇ ಸಾಕ್ಷಿ ಎಂದರು.ಬಿಜೆಪಿಗರು ಕಲಬುರಗಿಯಲ್ಲಿ ಈವರೆಗೆ ಇದು ನಾಲ್ಕನೆಯ ಪ್ರತಿಭಟನೆ ಆಗಿದೆ, ಅವರು ಯಾರೂ ಸಹ ಇಲ್ಲಿಯವರೆಗೆ ಜನರ ಸಮಸ್ಯೆಗಳಿಗೆ ಸ್ಪಂದಿಸಲು ಮುಂದೆ ಬಂದಿಲ್ಲ, ಜನರಿಗೋಸ್ಕರ ಮತ್ತು ಇಲ್ಲಿನ ಅಭಿವೃದ್ಧಿಯ ಸಲುವಾಗಿ ಇಲ್ಲಿಯತನಕ ಯಾವುದೇ ಪ್ರತಿಭಟನೆ ಮಾಡಿಲ್ಲ, ಬದಲಾಗಿ ಅವರು ಪ್ರತಿ ಸಲ ಸಚಿವ ಪ್ರಿಯಾಂಕ್ ಖರ್ಗೆ ಅವರನ್ನೇ ಟಾರ್ಗೆಟ್ ಮಾಡಿಕೊಂಡು ಪ್ರತಿಭಟನೆ ಮಾಡುತ್ತಿದ್ದಾರೆ. ಬಿಜೆಪಿಗರಿಗೆ ಖರ್ಗೆ ಕಂಡ್ರೆ ಭಯವಾಗುತ್ತಿದೆ ಎಂದು ಗೊತ್ತಾಗುತ್ತಿದೆ ಎಂದ ಅವರು, ನಾವು ಕೂಡ ವಿಪಕ್ಷ ಸ್ಥಾನದಲ್ಲಿದ್ದೆವು. ಆದರೆ ಇವರ ತರಹ ಒಬ್ಬ ವ್ಯಕ್ತಿಯನ್ನೇ ಟಾರ್ಗೆಟ್ ಮಾಡಿ ಬೈಯುವುದು, ಪ್ರತಿಭಟನೆ ಮಾಡುವುದು ಮಾಡಿಲ್ಲ. ಬಿಜೆಪಿಗರಿಗೆ ಕಲಬುರಗಿಯಲ್ಲಿ ಪ್ರತಿಭಟನೆ ಮಾಡುವುದಕ್ಕೂ ನೈತಿಕ ಹಕ್ಕಿಲ್ಲ ಎಂದು ವಾಗ್ದಾಳಿ ನಡೆಸಿದ್ದಾರೆ.ನಾರಾಯಣಸ್ವಾಮಿ ಕಲಬುರಗಿಗೆ ಬಂದು ಸಚಿವರ ಕಾರ್ಯ ವೈಖರಿ ಬಗ್ಗೆ ಟೀಕೆ ಟಿಪ್ಪಣಿ ಮಾಡಲಿ ಪರವಾಗಿಲ್ಲ, ಆದರೆ ಇವರು ಅದನ್ನ ಬಿಟ್ಟು ಪತ್ರಿಕಾಗೋಷ್ಠಿಯಲ್ಲಿ ಉಸ್ತುವಾರಿ ಸಚಿವರನ್ನು ನಾಯಿ ಎಂದು ಬೈಯ್ಯುವುದು ಸರಿಯಲ್ಲ, ಇಂತಹ ಹೇಳಿಕೆ ನೀಡಿ ಬಿಜೆಪಿಗೆ ಮುಜುಗರ ತಂದಿರುವ ಬಗ್ಗೆ ಅವರ ಪಕ್ಷದ ನಾಯಕ–ರೇ ಸುಮ್ಮನೆ ಕುಳಿತಿದ್ದಾರೆ. ಈವರೆಗೆ ನಾರಾಯಣಸ್ವಾಮಿ ಅವರು ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕನ ಸ್ಥಾನದ ತಕ್ಕಂತೆ ಅವರು ನಡೆದುಕೊಂಡಿಲ್ಲ, ಹಾಗಾಗಿ ಕೂಡಲೇ ಅವರನ್ನು ವಿರೋಧ ಪಕ್ಷ ನಾಯಕನ ಸ್ಥಾನದಿಂದ ವಜಾ ಮಾಡಬೇಕು ಎಂದು ಆಗ್ರಹಿಸಿದರು. ಕಲಬುರಗಿ ರಿಪಬ್ಲಿಕ್ ಮಾಡುತ್ತಿದ್ದಾರೆ ಎಂಬ ಬಿ.ಶ್ರೀರಾಮುಲು ಅವರ ಆರೋಪಕ್ಕೆ ಪ್ರತಿಕ್ರಿಯಿಸಿದ ಅವರು, ರಿಪಬ್ಲಿಕ್ ಆಫ್ ಬಳ್ಳಾರಿ ಮಾಡಿರುವ ಅವರು ನಮಗೆ ಬಂದು ಪಾಠ ಮಾಡುತ್ತಿದ್ದಾರೆ, ಬಳ್ಳಾರಿ ಕೊಳ್ಳೆ ಹೊಡೆದು ಜೈಲುಪಲಾಗಿರುವ ಜನಾರ್ದನ ರೆಡ್ಡಿ ಜೊತೆಗಿದ್ದ ರಾಮುಲು ನಮಗೆ ಬುದ್ಧಿ ಹೇಳಲು ಯಾವುದೇ ನೈತಿಕತೆ ಇಲ್ಲ ಎಂದು ತಿರುಗೇಟು ನೀಡಿದರು.

ಸುದ್ದಿಗೋಷ್ಠಿಯಲ್ಲಿ ಕಾಂಗ್ರೆಸ್ ಜಿಲ್ಲಾಧ್ಯಕ್ಷ,ಎಂಎಲ್ಸಿ ಜಯದೇವ ಗುತ್ತೇದಾರ್, ಶಾಸಕಿ ಖನೀಜ್ ಫಾತೀಮಾ, ಅಲ್ಲಮಪ್ರಭು ಪಾಟೀಲ್, ಸುಭಾಷ್ ರಾಥೋಡ್, ರಾಜಗೋಪಾಲ ರೆಡ್ಡಿ, ಡಾ.ಕಿರಣ್ ದೇಶಮುಖ್, ಮಹಾಂತಪ್ಪ ಸಂಗಾವಿ ಸೇರಿದಂತೆ ಮತ್ತಿತರರು ಇದ್ದರು.

# ಚಲವಾದಿ ನಾರಾಯಣ ಸ್ವಾಮಿ ವಿಧಾನ ಪರಿಷತ್ ಸದಸ್ಯತ್ವ ಸ್ಥಾನವನ್ನು ರದ್ದುಗೊಳಿಸುವಂತೆ ಡಿ.ಜಿ ಸಾಗರ ಒತ್ತಾಯ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ ನಾಗರೀಕ ಹೋರಾಟ ಸಮಿತಿ ವತಿಯಿಂದ ಸುದ್ದಿಗೋಷ್ಠಿ ಮಾತನಾಡಿದ ಡಿ ಜಿ ಸಾಗರ್ ಕಲ್ಬುರ್ಗಿ. ಸಚಿವರಾದ ಶ್ರೀ ಪ್ರಿಯಾಂಕ್ ಖರ್ಗೆ ರವರನ್ನು ವೈಯಕ್ತಿಕವಾಗಿ ನಿಂದನೆ ಮಾಡಿ, ಹೀಯಾಳಿಸಿ, ಅಸಂವಿಧಾನಿಕವಾಗಿ ಮಾತನಾಡಿದ ಚಲುವಾದಿ ನಾರಾಯಣಸ್ವಾಮಿಯ ವಿಧಾನ ಪರಿಷತ್ ಸದಸ್ಯತ್ವ ಸ್ಥಾನವನ್ನು ರದ್ದುಗೊಳಿಸುವಂತೆ ಆಗ್ರಹಿಸಿ ಬೃಹತ್ ಪ್ರತಿಭಟನಾ ಮೆರವಣಿಗೆ ಹಮ್ಮಿಕೊಂಡಿರುವ ಕುರಿತು.

ವಿಧಾನ ಪರಿಷತ್ ಚಿಂತಕರ ಛಾವಡಿ ಎಂದು ಹೇಳಲಾಗುತ್ತದೆ. ಅಂತಹ ಸ್ಥಾನಕ್ಕೆ ಅಗೌರವಾಗಿ ನಡೆದುಕೊಳ್ಳುತ್ತಿರುವ ಚಲವಾದಿ ನಾರಾಯಣ ಸ್ವಾಮಿಗೆ ಪ್ರಜಾಸತಾತ್ಮಕವಾಗಿ ವಿರೋಧ ಮಾಡುವುದಕ್ಕೂ ಬರದೆ. ಒಬ್ಬ ಪ್ರಭಾವಿ ಸಮುದಾಯದ ಸಚಿವರಾದ ಪ್ರಿಯಾಂಕ್ ಖರ್ಗೆ ರವರನ್ನು ದಿನಾಂಕ:21-05-2025ರಂದು ಕಲಬುರಗಿ ಜಿಲ್ಲೆಗೆ ಬಂದಾಗ ಪತ್ರಿಕಾಗೋಷ್ಠಿ ಮಾಡಿ 'ನಾಯಿ" ಎಂದು ಸಂಭೋಧಿಸಿರುವುದು ಇವರ ಬೌದ್ಧಿಕ ಮಟ್ಟ ಹಾಗೂ ಸಂಸ್ಕೃತಿ ಎಂಥದ್ದು ಎಂದು ತೋರಿಸುತ್ತದೆ. ಇಂತಹ ಅನಾಗರಿಕ ಮತ್ತು ಯೋಗ್ಯವಲ್ಲದ ವ್ಯಕ್ತಿಯನ್ನು ವಿಧಾನ ಪರಿಷತ್ ಸ್ಥಾನದಲ್ಲಿ ಮುಂದುವರೆಸುತ್ತಿರುವ ಬಿ.ಜೆ.ಪಿ.ಗೆ ನಾಚಿಕೆಯಾಗಬೇಕು.

ಖರ್ಗೆ ಕುಟುಂಬ ಎಂದರೆ "ಕಲ್ಯಾಣ-ಕರ್ನಾಟಕ ಭಾಗದಲ್ಲಿ ಬಹಳ ಪ್ರಖ್ಯಾತಿಗಳಿಸಿದ ಸುಸಂಸ್ಕೃತ ಮನೆತನ. ಈ ಕುಟುಂಬವು ಸುದಿರ್ಘ ಕಾಲ ರಾಜಕೀಯ ಜೀವನದಲ್ಲಿ ಯಾವುದೇ ಕಪ್ಪು ಚುಕ್ಕೆ ಇಲ್ಲದೆ ಮೌಲ್ಯಯುತ ರಾಜಕಾರಣ ಮಾಡುತ್ತಾ ಬರುತ್ತಿರುವುದೆ ರಾಜಕೀಯದಲ್ಲಿ ನಿಂತ ನಿದರ್ಶನವಾಗಿದೆ. ಖರ್ಗೆ ಕುಟುಂಬದ ಬಗ್ಗೆ ಇಡಿ ಭಾರತ ದೇಶ ಮತ್ತು ಕರ್ನಾಟಕ ರಾಜ್ಯದಲ್ಲಿ ಅಪಾರವಾದ ಎಲ್ಲಾ ಸಮುದಾಯದ ಅಭಿಮಾನಿಗಳನ್ನು ಹೊಂದಿರುವಂತಹ ಮನೆತನವಾಗಿದೆ. ಚಲುವಾದಿ ನಾರಾಯಣ ಸ್ವಾಮಿ ಬಿ.ಜೆ.ಪಿ. ಮತ್ತು ಆರ್.ಎಸ್.ಎಸ್. ಗುಲಾಮಗಿರಿ ಮಾಡುತ್ತಾ ಎ.ಐ.ಸಿ.ಸಿ. ಅಧ್ಯಕ್ಷರು ಹಾಗೂ ರಾಜ್ಯ ಸಭೆಯ ವಿರೋಧ ಪಕ್ಷದ ನಾಯಕರಾದ ಡಾ. ಮಲ್ಲಿಕಾರ್ಜುನ ಖರ್ಗೆ ಮತ್ತು ಸಚಿವ ಪ್ರಿಯಾಂಕ್ ಖರ್ಗೆ ರವರ ರಾಜಕೀಯ ಬೆಳವಣಿಗೆಯನ್ನು ಸಹಿಸದೆ ಅವರ ಕುಟುಂಬವನ್ನು ಗುರಿಯಾಗಿಸಿಕೊಂಡು ಅವರನ್ನು ವೈಯಕ್ತಿಕ ನಿಂದನೆ ಮಾಡಿ, ರಾಜಕೀಯ ತೇಜೋವಧೆಗೆ ಮುಂದಾಗಿದ್ದು, ಚಲುವಾದಿ ನಾರಾಯಣ ಸ್ವಾಮಿ ಇವರ ಧ್ವನಿಯ ಹಿಂದೆ ಬಿ.ಜೆ.ಪಿ. ಮತ್ತು ಆರ್.ಎಸ್. ಎಸ್. ಕೆಲಸ ಮಾಡುತ್ತಿದೆ ಎಂಬುವುದು ಚಲುವಾದಿ ನಾರಾಯಣಸ್ವಾಮಿ ತಲೆಯ ಮೇಲೆ ಚಡ್ಡಿ ಹೊತ್ತಾಗಲೇ ಅದು ಜಗಜ್ಜಾಹಿರವಾಗಿದೆ. ಇಂತಹ ಆನಾಗರಿಕ ಚಲುವಾದಿ ನಾರಾಯಣಸ್ವಾಮಿ ರವರನ್ನು ಕಲಬುರಗಿ ಜಿಲ್ಲೆಗೆ ಭೇಟಿ ನೀಡಿದಾಗಲೆಲ್ಲಾ ಸಚಿವ ಪ್ರಿಯಾಂಕ್ ಖರ್ಗೆರವರ ವಿರುದ್ಧ ಸುಖಾ ಸುಮ್ಮನೆ ಆರೋಪ ಮಾಡುವುದು ಅವರನ್ನು ನಿಂದಿಸುವುದು ನಿರಂತರವಾಗಿ ಅವರ ವಿರುದ್ಧ ಹೇಳಿಕೆ ನೀಡುತ್ತಿದ್ದು, ಇದು ಕಲಬುರಗಿ ಸಾಮಾನ್ಯ ಜನರ ನೆಮ್ಮದಿ ಮತ್ತು ಶಾಂತಿಗೆ ಧಕ್ಕೆ ತರುವಂತಹ ಪ್ರಯತ್ನ ಸತತವಾಗಿ ನಡೆಯುತ್ತಿದೆ. ಇಂಥಹವನಿಂದ ಕಲಬುರಗಿ ಜಿಲ್ಲೆಯ ಶಾಂತಿ ಸುವ್ಯವಸ್ಥೆ ಹಾಳಾಗುತ್ತಿದೆ. ಇಂಥಹ ರಾಜಕೀಯ ವ್ಯಕ್ತಿಯಿಂದ ಜನ ಸಾಮಾನ್ಯರಲ್ಲಿ ಗಲಭೆಗಳು ಉಂಟಾಗುವ ಸಂಭವ ಹೆಚ್ಚಾಗಿರುತ್ತದೆ. ಇಂಥಹವರಿಂದ ಒಬ್ಬ ಪ್ರಬುದ್ಧ ರಾಜಕಾರಣೆಯನ್ನು ಅತ್ಯಂತ ಕೇವಲವಾಗಿ ಮತ್ತು ನಾಯಿಗೆ ಹೋಲಿಸಿ ನಿಂದನೆ ಮಾಡಿದ್ದನ್ನು ಬಹಳ ಕಠೋರವಾಗಿ ಖಂಡಿಸಿ ಇದೇ ತಿಂಗಳ 31-05-2025 ರಂದು ಬೆಳಗ್ಗೆ 11.00 ಗಂಟೆಗೆ ಕಲಬುರಗಿ ನಗರದ ಜಗತ್ ವೃತ್ತದಿಂದ ಮಾನ್ಯ ಜಿಲ್ಲಾಧಿಕಾರಿಗಳ ಕಛೇರಿ ವರೆಗೆ ಬೃಹತ್ ಪ್ರತಿಭಟನೆ ಮೆರವಣಿಗೆ ಮೂಲಕ ತೆರಳಿ ಚೆಲುವಾದಿ ನಾರಾಯಣ ಸ್ವಾಮಿಯ ವಿಧಾನ ಪರಿಷತ್ ಸ್ಥಾನವನ್ನು ರದ್ದುಗೊಳಿಸುವಂತೆ ಆಗ್ರಹಿಸಿ ಮಾನ್ಯ ಜಿಲ್ಲಾಧಿಕಾರಿಳ ಮೂಲಕ ಸರಕಾರಕ್ಕೆ ಮನವಿ ಸಲ್ಲಿಸಲಾಗುವುದು. ಈ ಬೃಹತ್ ಪ್ರತಿಭಟನೆಯಲ್ಲಿ ಜಿಲ್ಲೆಯ ಜನರು ಸಹಸ್ರಾರು ಸಂಖ್ಯೆಯಲ್ಲಿ ಭಾಗವಹಿಸಿ ಪ್ರತಿಭಟನೆಯನ್ನು ಯಶಸ್ವಿಗೊಳಿಸಬೇಕೆಂದು ಈ ಪತ್ರಿಕಾ ಗೋಷ್ಠಿಯ ಮೂಲಕ ಮನವಿ ಮಾಡಿಕೊಳ್ಳುತ್ತೇವೆ. ಡಾ. ವಿಠಲ್ ದೊಡ್ಡಮನಿ ದಲಿತ ಹಿರಿಯ ಮುಖಂಡರು ಡಾ.ಡಿ.ಜಿ.ಸಾಗರ ದಲಿತ ಹಿರಿಯ ಮುಖಂಡರು ಇತರರು ಉಪಸ್ಥಿತರಿದ್ದರು.

# ಸಂಗಡಿಗರ ಸಮೇತ ತುಳುಜಾಪೂರ ದರ್ಶನ ಪಡೆದ ರಮೇಶ್ ಪವರ್ ಬೋರಬಂಡ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ,ಮೇ.24- ಗುರುಮಠಕಲ್ ತಾಲೂಕಿನ ಕಾಕಲವಾರ ಗ್ರಾಮಪಂಚಾಯಿತಿ ಸದಸ್ಯ ರಮೇಶ ಪವರ್ ಬೋರಬಂಡ ಅವರು ಅನೇಕ ಜನಪರ, ಧಾರ್ಮಿಕ ಹಾಗೂ ಸಮಾಜಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸುವದಲ್ಲದೆ ತನ್ನ ಸ್ವಂತ ಖರ್ಚಿನಲ್ಲಿ ಬಡ ವಿಧ್ಯಾರ್ಥಿಗಳ ಶಾಲಾಮಕ್ಕಳಿಗೆ ನೋಟ್‌ಬುಕ್ ವಿತರಿಸಿದ್ದಾರೆ. ಇದು ಅಲ್ಲದೆ ತಮ್ಮ ಸ್ವಗ್ರಾಮದಿಂದ ಅಂದರೆ ಬೋರಬಂಡಾ ಗ್ರಾಮದಿಂದ ಗ್ರಾಮಸ್ಥರೊಂದಿಗೆ ಸುಕ್ಷೇತ್ರ ತುಳಜಾಪುರ ಶ್ರೀಮಾತೆ ಅಂಭ ಭವಾನಿ ದರ್ಶನ ಪಡೆಯಲು ಗುರುವಾರ ದಿನ ಪ್ರಯಾಣ ಮಾಡಿ ಶುಕ್ರವಾರ ಮುಂಜಾನೆ ಸಮಯ ದೇವಿಯ ದರ್ಶನ ಪಡೆದರು. ಇಂತಹ ಪುಣ್ಯ ಕಾರ್ಯಕ್ರಮ ಕ್ಷೇತ್ರಗಳ ದರ್ಶನಗಳನ್ನು ಸ್ವತಃ ತಮ್ಮ ಸ್ವಂತ ಖರ್ಚಿನಲ್ಲಿ ಮಾಡಿಸುತ್ತಿರುವುದು ಪೂರ್ವ ಜನ್ಮದ ಪುಣ್ಯ ಎಂದು ಗ್ರಾಮಸ್ಥರು ಹೇಳಿ ಕೊಂಡಾಡುತ್ತಿದ್ದಾರೆ. ಸುಕ್ಷೇತ್ರ ತುಳುಜಾ ಭವಾನಿ ಮಾತೆಯ ದರ್ಶನ ಪಡೆಯಲು ತಮ್ಮ ಸ್ವಂತ ಖರ್ಚಿನಲ್ಲಿ 61 ಜನ ಮಹಿಳೆಯರು, 11ಜನ ಬಾಲಕರು ಹಾಗೂ 5 ಜನ ಗ್ರಾಮದ ಹಿರಿಯ ಮುಖಂಡರನ್ನು ಕರೆದು ಕೊಂಡು ಹೋಗಿ ದರುಶನ ಪಡೆದು ಬಂದಿದ್ದಾರೆ. ಇಂತಹ ಜನರಪರ ಧಾರ್ಮಿಕ, ಸಾಮಾಜಿಕ ಕಾರ್ಯಕ್ರಮಗಳಲ್ಲಿ ಇನ್ನೂ ಹೆಚ್ಚಿನ ಆಸಕ್ತಿ ತೋರಿ ಭಗವಂತನ ಕೃಪೆಗೆ ಪಾತ್ರರಾಗಿರೆ-ಂದು ಗ್ರಾಮಸ್ಥರು ಹೇಳಿದರು. ಈ ವೇಳೆ ಮುಖಂಡರಾದ ಕಾಶಿನಾಥ ರಾಠೋಡ್, ಸೂರ್ಯ ನಾಯಕ, ವಾಸುಬಾರಿ ಕಾರುಬಾರಿ, ಶರಣು ರಾಠೋಡ್, ಕೀಶನ್ ನಾಯಕ ಹಾಗೂ ಇತರರು ಇದ್ದರು.

# ಸಮಾಜದಲ್ಲಿ ಶಾಂತಿ ಕದಡುವ ಕೆಲಸ ಮಾಡಿದಲ್ಲಿ ಕಠಿಣ ಕ್ರಮ ಡಿವೈಎಸ್‌ಪಿ ಸಂಗಮನಾಥ ಹಿರೇಮಠ



ಮಲ್ಲಮ್ಮ ನುಡಿ ವಾರ್ತೆ

ಸೇಡಂ, ಮೇ. 26. ಕಾನೂನು ಉಲ್ಲಂಗಿಸಿದ್ದಲ್ಲಿ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕಾಗುತ್ತದೆ. ಎಂದು ಡಿವೈಎಸ್‌ಪಿ ಸಂಗಮನಾಥ ಹಿರೇಮಠ್ ರೌಡಿಗಳಿಗೆ ಖಡಕ್ ಎಚ್ಚರಿಕೆ.

ಪಟ್ಟಣದ ಪೊಲೀಸ್ ಠಾಣೆಯಲ್ಲಿ ಸೋಮವಾರ ರೌಡಿಗಳ್ ಪರೇಡ್ ನಡೆಸಿದ ಅವರು ಈಗಾಗಲೇ ನಿಮ್ಮ ಮೇಲೆ ವಿವಿಧ ಪ್ರಕರಣಗಳು ದಾಖಲಾಗಿದ್ದರಿಂದ ರೌಡಿಲಿಸ್ಟ್‌ನಲ್ಲಿ ನಿಮ್ಮ ಹೆಸರು ದಾಖಲಾಗಿದೆ. ನಿಮ್ಮ ಮೇಲೆ ಪೊಲೀಸ್ ಇಲಾಖೆ ಸದಾ ಕಣ್ಣಿಟ್ಟು ಜಾಗೃತ ವಹಿಸುತ್ತದೆ. ಕಾನೂನು ಮೀರಿ ಜನ ಸಾಮಾನ್ಯರ ಮೇಲೆ ಹಲ್ಲೆ ದರೋಡೆ ಕೊಲೆ ಮಾಡುವುದಾಗಲಿ ಹೊಡೆದಾಟ ಮಾಡುವುದಾಗಲಿ ಸಾಮಾಜಿಕ ವ್ಯವಸ್ಥೆಯಲ್ಲಿ ಶಾಂತಿ ಕದಡುವ ಕೆಲಸ ಮಾಡಿದ್ದಲ್ಲಿ ಕಠಿಣ ಕ್ರಮಕ್ಕೆ ಮುಂದಾಗಬೇಕಾಗುತ್ತದೆ ಎಂದು ಸೂಚಿಸಿದರು.

ನಿಮ್ಮನ್ನೇ ನಂಬಿ ತಂದೆ ತಾಯಿ ಪತ್ನಿ ಮಕ್ಕಳು ಕುಟುಂಬ ವಿರುತ್ತದೆ. ಅವರ ನಂಬಿಕೆಗೆ ತಕ್ಕಂತೆ ಹಾಗೂ ಸಮಾಜದಲ್ಲಿ ಉತ್ತಮ ನಾಗರಿಕರಾಗಿ ಜೀವನ ನಡೆಸಬೇಕು. ಇದರಿಂದ ಸುಂದರ ಸಮಾಜ ನೆಲೆಸಲು ಸಾಧ್ಯವಾಗುತ್ತದೆ ಎಂದರು.

ಈ ವೇಳೆಯಲ್ಲಿ ಮಹಾದೇವ ದಿಡ್ಡಿಮನಿ, ಸಿಪಿಐ ಸೇಡಂ ಉಪೇಂದ್ರ ಕುಮಾರ ಪಿಎಸ್‌ಐ ಸೇಡಂ, ರಾಜಶೇಖರ ಪಿಎಎಸ್‌ಐ ಕುರುಕುಂಟ, ಅಂಬುಬಾಯಿ

ಪಿಎಸ್‌ಐ ಮಳಖೇಡ ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು

**IN THE COURT OF THE ADDL CIVIL JUDGE AND JMFC AT BASA-VAKALYAN**

**Crl.Misc No.570/2025**

Petitioners ...... Mastan

V/s

Respondnt .....The Tahasildar Basavakalyan

Sub: For Issue of Death Certificate.

PETITION u/sec 13(3) OF BIRTH AND DEATH REGISTRATION ACT 1969

**PAPER PUBLICATION**

Whereas the above named petitioner has filed petition under section 13(3) of birth & Death Registration Act 1969 for issue the direction to respondent to give death certificate of petitioner mother by name "SHANKAREVVA W/o NINGAPPA" who was died on 10/11/2012 in the hous at village mudabi, tq:Basavakalyan, Dist:Bidar.

Hnce this paper publication is issue to all concerned person to fil necessary objecation if any on 26/06/2025 at 11:00 A.M.

Given under my hand seal of the court on this 26/06/2025

//By order of the court//
Chief Ministerial office
Addl. Civil Judge & JMFC
Court Basavakalyan

# ಕಾಶ್ಮೀರ ಭಾರತದ ಅವಿಭಾಜ್ಯ ಅಂಗ




ಮಲ್ಲಮ್ಮ ನುಡಿ ವಾರ್ತೆ

ಸೈದಾಪುರ:ಮೇ.24:ಪಟ್ಟಣದಲ್ಲಿ ಗುರುವಾರ ಹಮ್ಮಿಕೊಂಡಿದ್ದ ತಿರಂಗಾ ಯಾತ್ರೆಯಲ್ಲಿ ಭಾಗವಹಿಸಿದ್ದ ಜನರು ದೇಶ ಭಕ್ತಿಯನ್ನು ಸಾರುವ ಘೋಷಣೆಗಳ ಜತೆಗೆ ದೂದ್ ಮಾಂಗೋ ಖೀರ್ ದೇಂಗೆ, ಕಾಶ್ಮೀರ ಮಾಂಗೋ ಚೀರ್ ದೇಂಗೆ ಎಂದು ಉದ್ಘೋಷಿಸುವ ಮೂಲಕ ಗಡಿ ಕಾಯುವ ಸೈನಿಕರ ಜತೆಗೆ ಈ ರಾಷ್ಟ್ರದ ಪ್ರತಿಯೊಬ್ಬ ನಾಗರಿಕರು ಜತೆಗಿದ್ದೇವೆ ಎಂಬ ಸಂದೇಶವನ್ನು ರವಾನಿಸಲಾಯಿತು.

ಪ್ರವಾಸಕ್ಕೆಂದು ಪಹಲ್ಗಾಮ್‌ಗೆ ತೆರಳಿದ್ದ ಅಮಾಯಕರ ಬಲಿ ಪಡೆದ ಪಾಕ್ ಪೋಷಿತ ಉಗ್ರರರನ್ನು ನಿರ್ನಾಮ ಮಾಡಲು ಭಾರತೀಯ ಸೇನೆಯ ಆಪರೇಷನ್ ಸಿಂಧೂರ ವಿಜಯೋತ್ಸವದ ನಿಮಿತ್ತ ನಮ್ಮ ಸೈನಿಕರಿಗೆ ಅಭಿನಂದನೆ ಹಾಗೂ ಆತ್ಮಸ್ಥೈರ್ಯವನ್ನು ತುಂಬುವ ನಿಟ್ಟಿನಲ್ಲಿ ಹಮ್ಮಿಕೊಂಡಿದ್ದ ತಿರಂಗಾ ಯಾತ್ರೆ ಯಶಸ್ವಿಯಾಯಿತು.

ಪಟ್ಟಣದ ರೈಲು ನಿಲ್ದಾಣದಿಂದ ಹೋರಾಟ ತಿರಂಗಾ ಯಾತ್ರೆಯೂ ಬಸವೇಶ್ವರ ವೃತ್ತದ ಮೂಲಕ ಕನಕ ವೃತ್ತವನ್ನು ತಲುಪಿತು. ಕಡೇಚೂರು ಸಂಸ್ಥಾನ ಮಠದ ಗುರುಮೂರ್ತಿ ಶಿವಾಚಾರ್ಯರು, ಸಿದ್ಧ ಚೇತನಾಶ್ರಮ ಸಿದ್ದಾರೂಢ ಮಠದ ಸೋಮೇಶ್ವರಾಂದ ಸ್ವಾಮಿಗಳು, ಬಿಜೆಪಿ ಜಿಲ್ಲಾಧ್ಯಕ್ಷ ಬಸವರಾಜ ವಿಭೂತಿಹಳ್ಳಿ, ಯಾದಗಿರಿ ನಗರಸಭೆ ಅಧ್ಯ-ಕ್ಷೆ ಲಲಿತಾ ಅನಪುರ, ಯುವ ಮುಖಂಡ ಮಹೇಶರೆಡ್ಡಿಗೌಡ ಮುದ್ನಾಳ, ಎಪಿಎಂಸಿ ಮಾಜಿ ಅಧ್ಯಕ್ಷ ಭೀಮನಗೌಡ ಕ್ಯಾತನಾಳ, ಪ್ರಕಾಶಗೌಡ ಸೈದಾಪುರ, ಮಲ್ಲನಗೌಡ ದುಪ್ಪಲ್ಲಿ, ನರಸಿಂಹಲು ನೀರಟ್ಟಿ, ಸುರೇಶ ಆನಂಪಲ್ಲಿ, ನಿತಿನ್ ತಿವಾರಿ, ಭೀಮಣ್ಣ ಮಡಿವಾಳ, ಮಲ್ಲರೆಡ್ಡಿ ಖಾನಾಪುರ, ಶರಣು ಯಲ್ಹೇರಿ, ಮಲ್ಲುಗೌಡ ಸೈದಾಪುರ, ಪರ್ವತರೆಡ್ಡಿ ದದ್ದಲ್, ಕೆ.ಬಿ ಗೋವರ್ಧನ್, ಗ್ರಾಪಂ ಮಾಜಿ ಅಧ್ಯಕ್ಷ ಮಾಳಪ್ಪ ಅರಕೇರಿ, ರಾಜು ದೊರೆ, ಮಲ್ಲೇಶ ನಾಯಕ ಕೂಡ್ಲೂರು, ವಿಶ್ವನಾಥ ಯಾದವ ಬದ್ದೇಪಲ್ಲಿ, ಮಧುಸೂದನರಾವ ಕುಲ್ಕರ್ಣಿ, ಹಳ್ಳೆಪ್ಪ ಕಿಲ್ಲನಕೇರಾ, ಆನಂದ ಮೀರಿಯಲ, ಸಿದ್ದು ಪೂಜಾರಿ, ಅರ್ಜುನ ಚವ್ಹಾಣ, ಜಿತೇಂದ್ರ ಬಾಡಿಯಾಳ, ಪ್ರಭು ಗೂಗಲ್, ಬಸ್ಸು ನಾಯಕ್, ಸುರೇಶ ಬೆಳಗುಂದಿ, ಸಾಗರ ಹುಲ್ಲೇರ ಸೇರಿದಂತೆ ಇತರರಿದ್ದರು.

ಮಾಜಿ ಸೈನಿಕ ಮಲ್ಲರೆಡ್ಡಿಗೆ ಸನ್ಮಾನ: ಭಾರತೀಯ ಸೇನೆಯಲ್ಲಿ ಸುದೀರ್ಘ ಸೇವೆ ಸಲ್ಲಿಸಿ ನಿವೃತ್ತಿ ಪಡೆದ ಮಾಜಿ ಸೈನಿಕ ಮಲ್ಲರೆಡ್ಡಿ ಅವರನ್ನು ಸಿದ್ದಚೇತನಾಶ್ರಮ ಸಿದ್ದಾರೂಢ ಮಠದ ಪೀಠಾಧಿಪತಿ ಸೋಮೇಶ್ವರಾನಂದ ಸ್ವಾಮಿಗಳು ಸನ್ಮಾನಿಸಿದರು.

# ಕನ್ನಡದಲ್ಲಿ ನಾಮಫಲಕ ಅಳವಡಿಸುವಂತೆ ಕರವೇ ಅಧ್ಯಕ್ಷ ಡಾ. ರಾಮಚಂದ್ರ ಗುತ್ತೇದಾರ ಮನವಿ



ಮಲ್ಲಮ್ಮ ನುಡಿ ವಾರ್ತೆ

ಸೇಡಂ. ಮೇ. 26. ನಗರದ ಡಿವಿಜನಲ್ ರೈಲ್ವೆ ಮ್ಯಾನೇಜರ್ ಸಿಕಂದರಾಬಾದ ರೈಲ್ವೆ ಸ್ಟೇಷನ್ ಮಾಸ್ಟರ್ ಸೇಡಂ ರವರ ಮುಖಾಂತರ ಸೇಡಂ ಪಟ್ಟಣದಲ್ಲಿರುವ ರೈಲು ಹಳಿ ಗೇಟ್ ಗಳ ಹತ್ತಿರ ತೆಲುಗು ಮತ್ತು ಹಿಂದಿಬಾಷೆಯಲ್ಲಿ ನಾಮಫಲಕವನ್ನು ಹಾಕಲಾಗಿದ್ದು ಅದರ ಬದಲು ಕನ್ನಡದಲ್ಲಿ ನಾಮಫಲಕ ಹಾಕಬೇಕು ಸೇಡಂ ರೈಲ್ವೆ ನಿಲ್ದಾಣದಲ್ಲಿ ರೈಲು ವಾಹನ ಸಂಖ್ಯೆ 17663/17664 ಪ್ರಭನಿ ರೈಲುವಾಹನ ರಾಯಚೂರುವರೆಗೆ ವಿಸ್ತರಣೆ ಮಾಡಿದರು ಆದರೆ ಕೆಲವು ದಿನಗಳಿಂದ ಈ ರೈಲು ಸ್ಥಗಿತಗೊಳಿಸಿದ್ದು ಅತಿ ಶೀಘ್ರದಲ್ಲಿ ರೈಲುವಾಹನವನ್ನು ಪ್ರಾರಂಭಿಸಬೇಕು ಮತ್ತು ಎಲ್.ಟಿ. ಟಿ. ರೈಲು ಸಂಖ್ಯೆ18519/1520 ವಾಹನವನ್ನು ಸೇಡಂ ರೈಲು ನಿಲ್ದಾಣದಲ್ಲಿ ನಿಲ್ಲಿಸಿ ಪ್ರಯಾಣಿಕರಿಗೆ ಅನುಕೂಲ ಮಾಡಿಕೊಡಬೇಕೆಂದು ಸಂಬಂಧಿಸಿದಂತೆ ಅಧಿಕಾರಿಗಳಿಗೆ ದೂರವಾಣಿ ಮುಖಾಂತರ ಹೇಳಿದರು ಕೇಳುತ್ತಿಲ್ಲ . ಇದು ಅಲ್ಲದೆ ಪ್ರಭನಿ ಎಕ್ಸ್‌ಪ್ರೆಸ್ ರೈಯಚೂರು ವರೆಗೆ ವಿಸ್ತರಣೆ ಮಾಡಲು ಅನೇಕ ಬಾರಿ ನಿರಂತರ ಐದು ವರ್ಷಗಳಿಂದ ಹೋರಾಟ ಮಾಡಿದರು ಅದಕ್ಕೆ ಪ್ರತಿಯಾಗಿ ಸ್ವಲ್ಪ ದಿನ ಮಾತ್ರ ಮಾತ್ರ ರೈಲು ವಾಹನ ರಾಯಚೂರುವರೆಗೆ ವಿಸ್ತರಣೆ ಮಾಡುತ್ತಾರೆ ಮತ್ತು ಯಥಾ ಸ್ಥಿತಿ ಸ್ಥಗಿತ ಮಾಡುತ್ತಾರೆ.

ಈ ರೈಲು ವಾಹನಗಳ ಗೋಸ್ಕರ ಸಂಬಂಧಪಟ್ಟ

ಡಿ ಆರ್ ಎಂ ಗೆ ಜನರಲ್ ಮ್ಯಾನೇಜರ್ ಗೆ ಲೋಕಸಭಾ ಸದಸ್ಯರಿಗೆ ಸಚಿವರಿಗೆ ಎಂಎಲ್ ಎಗಳಿಗೆ ಮನವಿ ಕೊಟ್ಟರು ಇನ್ನೂ ಸ್ಪಂದನೆ ನೀಡುತ್ತಿಲ್ಲ ಇದು ಅಲ್ಲದೆ ಎಲ್ ಟಿ ಟಿ ರೈಲುವಾಹನ ಸೇಡಂ ನೆಲದ ಅನೇಕ ಪ್ರಯಾಣಿಕರಿಗೆ ಅನುಕೂಲವಿದೆ ಆದರೆ ಆ ರೈಲು ಗೋಸ್ಕರ ಎಷ್ಟು ಹೋರಾಟ ಮಾಡಿದರು ಎಲ್ ಟಿ ಟಿ ರೈಲ್ವೇ ಸೇಡಂ ರೈಲು ನಿಲ್ದಾಣದಲ್ಲಿ ನಿಲ್ಲಿಸುತ್ತಿಲ್ಲ ಅತಿ ಶೀಘ್ರದಲ್ಲಿ ನಮ್ಮ ಬೇಡಿಕೆಗಳಿಗೆ ಸ್ಪಂದಿಸದಿದ್ದರೆ ಎಂಟು ದಿವಸದೊಳಗಾಗಿ ಸೇಡಂ ರೈಲು ನಿಲ್ದಾಣದಲ್ಲಿ ರೈಲು ಹಳಿಗಳ ಮೇಲೆ ಮಲಗಿ ಉಗ್ರ ಹೋರಾಟ ಮಾಡಲಾಗುತ್ತದೆ ಎಂದು ಈ ಮನವಿ ಮೂಲಕ ತಿಳಿಸಿರುತ್ತೇವೆ ಸೇಡಂ ರೈಲ್ವೆ ನಿಲ್ದಾಣ ಎದುರುಗಡೆ ಕರವೇ ತಾಲೂಕ ಅಧ್ಯಕ್ಷರಾದ ಶ್ರೀ ಡಾ. ರಾಮಚಂದ್ರ ಗುತ್ತೇದಾರ್ ನೇತೃತ್ವದಲ್ಲಿ ಪ್ರತಿಭಟನೆ ಮಾಡಿ ಮಾನ್ಯಶ್ರೀ ಚಂದ್ರಶೇಖರ್ ಪಾಟೀಲ್ ಸ್ಟೇಷನ್ ಮಾಸ್ಟರ್ ಅವರಿಗೆ ಮನವಿ ಕೊಟ್ಟು ನಂತರ ಈಗಾಗಲೇ ಸೇಡಂ ಪಟ್ಟಣದಲ್ಲಿರುವ ಮುಖ್ಯ ರೈಲ್ವೆ ಗೇಟ್ ಗಳ ಮೇಲೆ ತೆಲುಗು ಅಳಿಸಿ ಕನ್ನಡ ನಾಮಪಲಕಗಳನ್ನು ಬರೆಸಿದ್ದೇವೆ, ಜೂನ್ ಒಂದರಿಂದ ನಾಂದೇಡ್ ತಾಂಡೂರ್ ಪ್ರಭಾನ್ ಎಕ್ಸ್ ಪ್ರೆಸ್ ರೈಚೂರ್ ವರೆಗೆ ವಿಸ್ತರಣೆ ಮಾಡಲು ಅಧಿಸೂಚನೆ ಬರವಣಿಗೆಯಲ್ಲಿ ನೀಡಿದ್ದಾರೆ ಈ ಪ್ರತಿಭಟನೆಯಲ್ಲಿ ಶ್ರೀನಿವಾಸ್ ರೆಡ್ಡಿ ಮದ್ನ ದೇವಕುಮಾರ್ ಚಂದ್ರಶೇಖರ್ ಪೂಜಾರಿ ಭೀಮಯ್ಯ ಗುತ್ತೇದಾರ್ ಗುಂಡಪ್ಪ ಪೂಜಾರಿ ಚಂದ್ರಶೇಖರ್ ಮಡಿವಾಳ್ ರವಿ ಸಿಂಗ್. ರಘು. ಸುಭಾಷ್ ಕಿರಣ ಪಾಟಿಲ. ಪವನ ಕುಲಕರ್ಣಿ. ಮಸ್ತಾನ್. ಅನಿಲ ಮುಕುಂದ ಬಂದೇಂಪಲ್ಲಿ. ನರಸಿಂಹ ಹಡಪದ. ಇನ್ನು ಹಲವಾರು ಸಾರ್ವಜನಿಕರು ಈ ಹೋರಾಟದಲ್ಲಿ ಭಾಗವಹಿಸಿದರು.

# ಕೊಟ್ಟ ಗಡುವು ಮುಗಿಯಿತು ಇಂದಿನಿಂದ ಅನಿರ್ದಿಷ್ಟಾವಧಿ ಮುಷ್ಕರ.! ಕೆ.ಪ್ರಭಾಕರ್




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಪೌರ ನೌಕರರ ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ರಾಜ್ಯ ಸರ್ಕಾರಕ್ಕೆ ನೀಡಿದ 45 ದಿನಗಳ ಗಡುವು ಈಗ ಮುಗಿದಿದೆ, ರಾಜ್ಯಾದ್ಯಂತ ಮೇ 27 ಇಂದಿನಿಂದ ಅನಿರ್ದಿಷ್ಟಾವಧಿ ಮುಷ್ಕರ ನಡೆಸಲಾಗುವುದು ಎಂದು ರಾಜ್ಯ ಪೌರ ನೌಕರರ ಸಂಘದ ಅಧ್ಯಕ್ಷ ಕೆ.ಪ್ರಭಾಕರ್ ತಿಳಿಸಿದರು.

ಅವರು ಸೋಮವಾರದಂದು ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿ ಮುಷ್ಕರಕ್ಕೆ ಕನ್ನಡ ಪರ ಸಂಘಟನೆಗಳು, ದಲಿತ ಪರ ಸಂಘಟನೆಗಳು, ಎಸ್ಸಿಎಸ್ಟಿ ನೌಕರರ ಸಂಘ, ವಿವಿಧ ಸಂಘಟನೆಗಳು ಬೆಂಬಲಿಸಲಿದ್ದು ಈ ಮುಷ್ಕರದಲ್ಲಿ ಕುಡಿಯುವ ನೀರು ಸರಬರಾಜು ಐದು ದಿನದವರೆಗೆ ಇದ್ದು, ಎಲ್ಲಾ ಕಾರ್ಯಗಳು ಸ್ಥಗಿತಗೊಳ್ಳುವವು ಎಂದು ತಿಳಿಸಿದ ಅವರು ಈಗ ನಮ್ಮ ತಾಳ್ಮೆ ಕಟ್ಟೆ ಹೊಡೆದಿದೆ, ದಲಿತರಿಗೆ ಅನ್ಯಾಯ ಮಾಡುತ್ತಿದ್ದು, ಇಂದು ಮೇ 27ರಂದು ಬೀದರನಲ್ಲಿ ಪೌರಾಡಳಿತ ಸಚಿವ ರಹೀಮ್ ಖಾನ್ ಅವರಿಗೆ ಘೇರಾವ್ ಹಾಕಲಾಗುವುದು,

ಪೌರ ನೌಕರರನ್ನು ಗುತ್ತಿಗೆ ಪದ್ಧತಿಯಿಂದ ಮುಕ್ತಗೊಳಿಸಿ, ಸರ್ಕಾರಿ ನೌಕರರೆಂದು ಘೋಷಿಸಿ, ಹೊರಗುತ್ತಿಗೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರ ನೌಕರರನ್ನು ಸರ್ಕಾರಿ ನೌಕರ-ರೆಂದು ಘೋಷಿಸಿ ಅವರಿಗೆ ಕೆಜಿಐಡಿ, ಜಿಪಿಎಫ್, ಜ್ಯೋತಿ ಸಂಜೀವಿನಿ ಹಾಗೂ ಸು.25 ವರ್ಷಗಳಿಂದ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ವಾಟರ್ ಮ್ಯಾನ್, ಕಂಪ್ಯೂಟರ್ ಆಪರೇಟರ್, ವಾಹನ ಚಾಲಕರು, ಬೀದಿ ದೀಪ ನಿರ್ವಹಣೆ ಕಾರ್ಮಿಕರು ಸೇರಿದಂತೆ ಇನ್ನಿತರ ಪೌರ ನೌಕರರನ್ನು ಗುತ್ತಿಗೆ ಪದ್ಧತಿಯಿಂದ ಮುಕ್ತಿಗೊಳಿಸಿ ಕಾಯಂಗೊಳಿಸಬೇಕು, ರಾಜ್ಯದಲ್ಲಿರುವ ಎಲ್ಲ ಮಹಾನಗರ ಪಾಲಿಕೆ, ಪುರಸಭೆ ಹಾಗೂ ನಗರಸಭೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹೊರಗುತ್ತಿಗೆ ನೌಕರರನ್ನು ಖಾಯಂಗೊಳಿಸಿ ರಾಜ್ಯ ಸರ್ಕಾರಿ ನೌಕರರಿಗೆ ದೊರಕುವ ಎಲ್ಲಾ ಸೌಲಭ್ಯಗಳನ್ನು ಒದಗಿಸುವದು ಸೇರಿದಂತೆ ಕಳೆದ 45 ದಿನಗಳಲ್ಲಿ ಬೇರೆ ಬೇರೆ ಹಂತದ ಹೋರಾಟಗಳು ಮುಗಿದಿದ್ದು ಇಂದಿನಿಂದ ಅನಿರ್ದಿಷ್ಟಾಧಿ ಪ್ರಾರಂಭವಾಗುತ್ತದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಕೊಪ್ಪಳ ಜಿಲ್ಲಾ ಪೌರ ನೌಕರರ ಸಂಘದ ರಾಜ್ಯ ಪರಿಷತ್ ಸದಸ್ಯ ದುರ್ಗಪ್ಪ ಕಂದಾರಿ, ಶಾಖಾ ಅಧ್ಯಕ್ಷ ಮೈಲಪ್ಪ ಕಾರಟಗಿ, ಕಾರ್ಯದರ್ಶಿ ಭೀಮಣ್ಣ, ಸಹ ಕಾರ್ಯದರ್ಶಿ ಯಮನೂರಪ್ಪ ಮಂಗಳಪುರ, ಸದಸ್ಯ ದೇವರಾಜ್ ಕಿನ್ನಾಳ ಉಪಸ್ಥಿತರಿದ್ದರು.

# ಬಳ್ಳಾರಿ ಜಿಲ್ಲೆಯಲ್ಲಿ ಕೃಷಿ ಚಟುವಟಿಕೆ ಚುರುಕು ಕೃಷಿ ಇಲಾಖೆಯಿಂದ ಬಿತ್ತನೆ ಬೀಜ ಪೂರೈಕೆಗೆ ಕ್ರಮ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 26–ಜಿಲ್ಲೆಯಲ್ಲಿ ಈ ಬಾರಿ ಮುಂಗಾರು ಪೂರ್ವದಲ್ಲಿ ಉತ್ತಮ ಮಳೆಯಾಗುತ್ತಿದ್ದು, ಕೃಷಿ ಚಟುವಟಿಕೆಗಳು ಚುರುಕು ಪಡೆದುಕೊಂಡಿವೆ. ಮಳೆಯು ರೈತ ಸಮುದಾಯದಲ್ಲಿ ಮಂದಹಾಸ ಮೂಡಿಸಿದೆ. ಇದಕ್ಕೆ ಪೂರಕವಾಗಿ ಕೃಷಿ ಇಲಾಖೆಯು ರಿಯಾಯಿತಿ ದರದಲ್ಲಿ ಬಿತ್ತನೆ ಬೀಜ ಪೂರೈಸಲು ಸಜ್ಜಾಗಿದೆ.

ಉತ್ತಮ ಮಳೆ ಹಿನ್ನಲೆ ರೈತರು ಕೃಷಿ ಭೂಮಿ ಹದಗೊಳಿಸುವ ಕಾರ್ಯಗಳಲ್ಲಿ ತೊಡಗಿದ್ದಾರೆ. ರಂಟೆ–ಕುಂಟೆ ಹೊಡೆಯುವುದು, ರೋಟವೇಟರ್, ಎತ್ತುಗಳ ನೇಗಲು ಹೊಡೆಯುತ್ತಿದ್ದಾರೆ.

ಜಿಲ್ಲೆಯಲ್ಲಿ ವಾರ್ಷಿಕ 599.5 ಮಿ.ಮೀ ವಾಡಿಕೆ ಮಳೆಯಿದ್ದು, ಕಳೆದ ವರ್ಷ ಮೇ 20 ರವರೆಗೆ 53.6 ಮಿ.ಮೀ ಮಳೆಯಾಗಿದೆ. ಪ್ರಸ್ತುತ ವರ್ಷ 88.4 ಮಿ.ಮೀ ಮಳೆಯಾಗಿ ಸುಮಾರು ಶೇ.64 ರಷ್ಟು ಮಳೆ ಹೆಚ್ಚಾಗಿ ಸುರಿದಿದೆ.

ಮುಂಗಾರು ಹಂಗಾಮಿಗೆ ಜಿಲ್ಲೆಯಲ್ಲಿ 1,63,753 ಹೆಕ್ಟೇರ್ ಪ್ರದೇಶ ಬಿತ್ತನೆಯಾಗುವ ಗುರಿ ಹೊಂದಿದ್ದು, ಭತ್ತ 89,000 ಹೆ., ಮೆಕ್ಕೆಜೋಳ 20,000 ಹೆ., ಹತ್ತಿ 35,000 ಹೆ., ತೊಗರಿ 4,500 ಹೆ., ಜೋಳ 5,000 ಹೆ., ಶೇಂಗ 2,500 ಹೆ., ತೃಣಧಾನ್ಯಗಳು 2,300 ಹೆ., ಸೂರ್ಯಕಾಂತಿ 1,000 ಹೆ., ಮತ್ತು ಕಬ್ಬು 1000 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆಯಾಗುವ ನಿರೀಕ್ಷೆ ಹೊಂದಲಾಗಿದೆ.

ಕೃಷಿ ಇಲಾಖೆ ಜಿಲ್ಲೆಯ 13 ರೈತ ಸಂಪರ್ಕ ಕೇಂದ್ರ ಮತ್ತು 02 ಹೆಚ್ಚುವರಿ ಕೇಂದ್ರ ಸೇರಿ ಒಟ್ಟು 15 ಕೇಂದ್ರಗಳ ಮೂಲಕ ವಿವಿಧ ಬೆಳೆಯ ಬಿತ್ತನೆ ಬೀಜಗಳನ್ನು ಸಹಾಯಧನದಡಿ ವಿತರಿಸಲು ವ್ಯವಸ್ಥೆ ಮಾಡಿಕೊಂಡಿದೆ.

ಜಿಲ್ಲೆಯಲ್ಲಿ ಬಿತ್ತನೆ ಬೀಜ ಹಾಗೂ ರಸಗೊಬ್ಬರದ ದಾಸ್ತಾನು ಸಮರ್ಪಕವಾಗಿದ್ದು, ರೈತರು ಬಿತ್ತನೆ ಬೀಜ ಮತ್ತು ರಸಗೊಬ್ಬರಗಳ ಆಭಾವದ ಬಗ್ಗೆ ಯಾವುದೇ ಅತಂಕಕ್ಕೆ ಒಳಗಾಗುವ ಅಗತ್ಯವಿಲ್ಲ.

ಮುಂಗಾರು ಹಂಗಾಮಿಗೆ ಒಟ್ಟು 1,08,100 ಮೆಟ್ರಿಕ್ ಟನ್ ರಸಗೊಬ್ಬರ ಬೇಡಿಕೆಯಿದ್ದು, ಪ್ರಸ್ತುತ 40,228 ಮೆಟ್ರಿಕ್ ಟನ್ ರಸಗೊಬ್ಬರ ದಾಸ್ತಾನಿದೆ. ಹಂತ ಹಂತವಾಗಿ ಬೇಡಿಕೆ ಅನುಗುಣವಾಗಿ ಉಳಿದ ರಸಗೂಬ್ಬರ ಕಾಲಕಾಲಕ್ಕೆ ಸರಬರಾಜು ಆಗಲಿದೆ. ಜಿಲ್ಲೆಗೆ ಮುಂಗಾರು ಹಂಗಾಮಿನಲ್ಲಿ ಒಟ್ಟು 11766 ಕ್ವಿಂಟಾಲ್ ಬಿತ್ತನೆ ಬೀಜದ ಬೇಡಿಕೆ ಇದ್ದು, 11800 ಕ್ವಿಂಟಾಲ್ ಲಭ್ಯವಿದೆ.

ಜಿಲ್ಲೆಯಲ್ಲಿ ಕೃಷಿ ಪರಿಕರಗಳ ಪರಿವೀಕ್ಷರ ತಂಡಗಳನ್ನು ರಚಿಸಿ ಬಿತ್ತನೆ ಬೀಜ, ರಸಗೊಬ್ಬರ ಮತ್ತು ಕೀಟನಾಶಕಗಳ ಗುಣಮಟ್ಟ ಹಾಗೂ ಬೆಲೆ ನಿಯಂತ್ರಣಕ್ಕೆ ಕ್ರಮವಹಿಸಲಾಗಿದೆ.

ಕೃಷಿ ಪರಿಕರ ಮಾರಾಟಗಾರರು ಗುಣಮಟ್ಟದ ಬಿತ್ತನೆ ಬೀಜ, ರಸಗೊಬ್ಬರ ಮತ್ತು ಕೀಟನಾಶಕಗಳನ್ನೇ ಮಾರಾಟ ಮಾಡಬೇಕು ತಪ್ಪಿದಲ್ಲಿ ಕಾನೂನು ರೀತ್ಯ ಕಠಿಣ ಕ್ರಮ ಜರುಗಿಸಲಾಗುವುದು.

*ರಸಗೊಬ್ಬರ ಬೇಡಿಕೆ (ಏಪ್ರಿಲ್ ನಿಂದ ಸೆಪ್ಟೆಂಬರ್ ವರೆಗೆ) ಮತ್ತು ದಾಸ್ತಾನು (ಮೇ 20 ರಂತೆ):*

ಡಿಎಪಿ: 15,237 ಮೆಟ್ರಿಕ್ ಟನ್ ಬೇಡಿಕೆ ಇದ್ದು, 2735.9 ಮೆಟ್ರಿಕ್ ಟನ್ ದಾಸ್ತಾನಿದೆ.

ಎಂಒಪಿ: 2,293 ಮೆಟ್ರಿಕ್ ಟನ್ ಬೇಡಿಕೆ ಇದ್ದು, 2615.2 ಮೆಟ್ರಿಕ್ ಟನ್ ದಾಸ್ತಾನಿದೆ.

ಕಾಂಪ್ಲೆಕ್ಸ್: 45,580 ಮೆಟ್ರಿಕ್ ಟನ್ ಬೇಡಿಕೆ ಇದ್ದು, 20880.9 ಮೆಟ್ರಿಕ್ ಟನ್ ದಾಸ್ತಾನಿದೆ.

ಯೂರಿಯಾ: 44,350 ಮೆಟ್ರಿಕ್ ಟನ್ ಬೇಡಿಕೆ ಇದ್ದು, 13,491.8 ಮೆಟ್ರಿಕ್ ಟನ್ ದಾಸ್ತಾನಿದೆ.

ಎಸ್‌ಎಸ್‌ಪಿ: 542 ಮೆಟ್ರಿಕ್ ಟನ್ ಬೇಡಿಕೆ ಇದ್ದು, 504.2 ಮೆಟ್ರಿಕ್ ಟನ್ ದಾಸ್ತಾನಿದೆ.

ಒಟ್ಟು: 1,08,102 ಮೆಟ್ರಿಕ್ ಟನ್ ಬೇಡಿಕೆ ಇದ್ದು, 40228.3 ಮೆಟ್ರಿಕ್ ಟನ್ ದಾಸ್ತಾನಿದೆ.

**ಬಿತ್ತನೆ ಬೀಜ ಬೇಡಿಕೆ ಮತ್ತು ದಾಸ್ತಾನು:**

ಭತ್ತ: 4,000 ಕ್ವಿಂಟಾಲ್ ಬೇಡಿಕೆ ಇದ್ದು, 4,300 ಕ್ವಿಂಟಾಲ್ ದಾಸ್ತಾನಿದೆ.

ಮೆಕ್ಕೆಜೋಳ: 3,600 ಕ್ವಿಂಟಾಲ್ ಬೇಡಿಕೆ ಇದ್ದು, 4,000 ಕ್ವಿಂಟಾಲ್ ದಾಸ್ತಾನಿದೆ.

ತೊಗರಿ: 660 ಕ್ವಿಂಟಾಲ್ ಬೇಡಿಕೆ ಇದ್ದು, 660 ಕ್ವಿಂಟಾಲ್ ದಾಸ್ತಾನಿದೆ.

ನೆಲಕಡಲೆ: 2,800 ಕ್ವಿಂಟಾಲ್ ಬೇಡಿಕೆ ಇದ್ದು, 3,000 ಕ್ವಿಂಟಾಲ್ ದಾಸ್ತಾನಿದೆ.

ಜೋಳ: 210 ಕ್ವಿಂಟಾಲ್ ಬೇಡಿಕೆ ಇದ್ದು, 210 ಕ್ವಿಂಟಾಲ್ ದಾಸ್ತಾನಿದೆ.

ಒಟ್ಟು 11,766 ಕ್ವಿಂಟಾಲ್ ಬೇಡಿಕೆ ಇದ್ದು, 11,800 ಕ್ವಿಂಟಾಲ್ ದಾಸ್ತಾನಿದೆ.

ರೈತರು ಅಧಿಕೃತ ಪರಿಕರ ಮಾರಾಟಗಾರರಿಂದಲೇ ಬಿತ್ತನೆ ಬೀಜ, ರಸಗೊಬ್ಬರ, ಕೀಟನಾಶಕ ಮತ್ತು ಇತರೆ ಕೃಷಿ ಪರಿಕರಗಳನ್ನು ಖರೀದಿಸಬೇಕು.

**–ಟಿ.ಸೋಮಸುಂದರ್, ಜಂಟಿ ಕೃಷಿ ನಿರ್ದೇಶಕ.**

# ಎಸ್‌ಐಓ ವತಿಯಿಂದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನ




ಮಲ್ಲಮ್ಮ ನುಡಿ ವಾರ್ತೆ.

ಬಸವಕಲ್ಯಾಣ : ಮೆ 26 ಇಲ್ಲಿನ ವರ್ಷಾ ಫಂಕ್ಷನ್ ಹಾಲ್ ನಲ್ಲಿ ಎಸ್ ಐ ಓ ವತಿಯಿಂದ 2024 –25 ನೇ ಸಾಲಿನಲ್ಲಿ ಎಸ್. ಎಸ್. ಎಲ್. ಸಿ ಹಾಗೂ ಪಿ.ಯು.ಸಿ.ಯಲ್ಲಿ ಅತಿ ಹೆಚ್ಚಿನ ಅಂಕ ಪಡೆದ ಪ್ರಥಮ ಹಾಗೂ ದ್ವಿತೀಯ ಸ್ಥಾನ ಪಡೆದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಜಮಾತೆ ಇಸ್ಲಾಮಿಕ್ ಹಿಂದ ಅಧ್ಯಕ್ಷರಾದ ಅಸ್ಲಾಂ ಜನಾಬ. ಜಿಲ್ಲಾ ಎಸ್.ಐ.ಓ. ಅಧ್ಯಕ್ಷ ಜಾವಿದ ಮತಿನ ತಾಲೂಕ ಅಧ್ಯಕ್ಷ ಡಾ. ಜಬಿಉಲ್ಲಾ ಖಾನ್ ವಸಿ ಮೌಲಾನಾ ಅಲ್ ಅಸಿರೋದ್ದಿನ್ ರೌಫ್ ಅಲಿ. ಪತ್ರಕರ್ತರಾದ ನಾಗಪ್ಪಾ ನಿಣ್ಣೆ. ಐಟಾ ಅಧ್ಯಕ್ಷ ಇಮಾಮುದ್ದೀನ್ ಕ್ಯಾಂಪಸ್ ಕಾರ್ಯದರ್ಶಿ ಶೇಕ್ ಜಮೀರ್ ಅಸುದುಲ್ಲಾ ಖಾನ್ ಸುಹೇಬ್ ಪಟೇಲ್ ಅಲ್ಲದೆ ರುಕ್ಸಾನಾ ತಹಸೀನ್ ಮುಕ್ಸಾನಾ ಫಾತಿಮಾ ಸೇರಿದಂತೆ ಅನೇಕರು ಭಾಗವಹಿಸಿದರು.

# ಕಾರ್ಖಾನೆಗಳ ವಿರುದ್ಧ ಕನ್ನಡ ಆಂಗ್ಲ ಭಾಷೆಯಲ್ಲಿ ಗೋಡೆ ಬರಹ; ಪ್ರತಿಭಟನೆ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ನಗರದ ಪಕ್ಕದಲ್ಲಿಯೇ ಸ್ಥಾಪನೆಗೊಳ್ಳುತ್ತಿರುವ ಬಲ್ಡೋಟಾ, ಕಿರ್ಲೋಸ್ಕರ್, ಕಲ್ಯಾಣ ಸೇರಿ ಇತರೆ ಕಾರ್ಖಾನೆಗಳ ಆರಂಭ, ವಿಸ್ತರಣೆ ವಿರೋಧಿಸಿ ಕೊಪ್ಪಳ ಜಿಲ್ಲಾ ಬಚಾವೋ ಆಂದೋಲನ ಮತ್ತು ಪರಿಸರ ಹಿತರಕ್ಷಣಾ ವೇದಿಕೆ ಸದಸ್ಯರು ಇಂದು ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ಗೋಡೆ ಬರಹದ ಮೂಲಕ ಕ್ವಿಟ್ ಬಲ್ಡೋಟಾ ಪ್ರತಿಭಟನೆ ನಡೆಸಿದರು. ಕಾರ್ಖಾನೆ ವಿರುದ್ಧ ಜನಾಂದೋಲನದ ಭಾಗವಾಗಿ ನಡೆಯುತ್ತಿರುವ ಹೋರಾಟ ತೀವ್ರಗೊಳಿಸಲಾಗಿದೆ, ಇಂದು ಕಿನ್ನಾಳ ರಸ್ತೆ ಅಂಡರ್ ಪಾಸ್ ಬ್ರಿಡ್ಜ್, ಭಾಗ್ಯನಗರ ಬ್ರಿಡ್ಜ್ ಮುಂತಾದ ಕಡೆಗೆ ಆಕ್ರೋಶದ ಗೋಡೆ ಬರಹ ಆರಂಭಿಸಲಾಗಿದೆ. ಕೊಪ್ಪಳದ ವಿವಿದೆಡೆ ಮತ್ತು ಬಾದಿತ ಪ್ರದೇಶಗಳ ಹಳ್ಳಿಗಳಲ್ಲಿ ಕಾರ್ಖಾನೆಗಳಿಂದ ಆಗುತ್ತಿರುವ ಹಾನಿಯ ಬಗ್ಗೆ ಜನಜಾಗೃತಿ ಗೋಡೆ ಬರಹಗಳನ್ನು ಬರೆಯಲಾಗುತ್ತಿದೆ. ಗೋಡೆ ಬರಹದ ನಂತರ ಹೊಸ ಬಗೆಯ ಪ್ರತಿಭಟನೆ ಮಾಡುವದು, ಸರಕಾರಕ್ಕೆ ಜನರ ಅಭಿಪ್ರಾಯ ತಿಳಿಸುವ ನಿಟ್ಟಿನಲ್ಲಿ ಹೋರಾಟ ರೂಪಿಸಲಾಗುತ್ತದೆ ಎಂದು ತಿಳಿಸಿದ್ದಾರೆ. ಈ ವೇಳೆ ಕಾರ್ಖಾನೆ ವಿರುದ್ಧ ಘೋಷಣೆ ಕೂಗಿ ತಮ್ಮ ವಿರೋಧವನ್ನು ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಕೊಪ್ಪಳ ಜಿಲ್ಲಾ ಬಚಾವೋ ಆಂದೋಲನ ಮತ್ತು ಪರಿಸರ ಹಿತರಕ್ಷಣಾ ವೇದಿಕೆ ಜಂಟಿ ಕ್ರಿಯಾ ವೇದಿಕೆಯ ಪ್ರೊ. ಅಲ್ಲಮಪ್ರಭು ಬೆಟ್ಟದೂರ್, ಕೆ. ಬಿ. ಗೋನಾಳ, ಬಸವರಾಜ ಶೀಲವಂತರ್, ಮಹಾಂತೇಶ್ ಕೊತಬಾಳ, ಮಂಜುನಾಥ ಜಿ. ಗೊಂಡಬಾಳ, ಶರಣು ಗಡ್ಡಿ, ರಮೇಶ ತುಪ್ಪದ, ಸಂತೋಷ ದೇಶಪಾಂಡೆ, ಡಾ. ಶ್ರೀನಿವಾಸ ಹ್ಯಾಟಿ, ಡಾ. ಮಂಜುನಾಥ ಸಜ್ಜನ್, ಶರಣು ಡೊಳ್ಳಿನ, ಮುದುಕಪ್ಪ ಹೊಸಮನಿ ಸೇರಿ ಅನೇಕರು ಇದ್ದರು. ಕಲಾವಿದರಾದ ರಾಜು ತೇರದಾಳ, ಕೃಷ್ಣಾ ಚಿತ್ರಗಾರ, ಸಾಹಿತ್ಯ ಗೊಂಡಬಾಳ ಗೋಡೆ ಬರಹ ಬರೆದರು.

## ಕಾರ್ಮಿಕರ ದಿನಾಚರಣೆ ಕಾರ್ಯಕ್ರಮದಲ್ಲಿ ನ್ಯಾ.ರಾಜೇಶ್ ಎನ್.ಹೊಸಮನೆ

# ಜೀನ್ಸ್ ಗಾರ್ಮೆಂಟ್ ಕಾರ್ಮಿಕರು ಜಾಗೃತರಾಗಿ ಸರ್ಕಾರದ ಸೌಲಭ್ಯ ಪಡೆದುಕೊಳ್ಳಬೇಕು



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 26: ಜೀನ್ಸ್ ಗಾರ್ಮೆಂಟ್ ಕಾರ್ಮಿಕರು ಜಾಗೃತರಾಗಿ ಸರ್ಕಾರದ ಸೌಲಭ್ಯ ಪಡೆದುಕೊಳ್ಳಬೇಕು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಅವರು ಹೇಳಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜೀನ್ಸ್ ಗಾರ್ಮೆಂಟ್ ಕಮ್ಯೂನಿಟಿ ಡೆವೆಲಪ್‌ಮೆಂಟ್ ಅಸೋಸಿಯೇಷನ್, ರೀಚ್ ಸಂಸ್ಥೆ, ಕಾನೂನು ಇಲಾಖೆ, ಕೈಮಗ್ಗ ಮತ್ತು ಜವಳಿ ಇಲಾಖೆ, ಜಿಲ್ಲಾ ಮಕ್ಕಳ ಮತ್ತು ರಕ್ಷಣಾ ಘಟಕ ಇವರ ಸಂಯುಕ್ತಾಶ್ರಯದಲ್ಲಿ ನಗರದ ಬಿಡಿಎಸ್ ತರಬೇತಿ ಕೇಂದ್ರದಲ್ಲಿ ಇತ್ತೀಚೆಗೆ ನಡೆದ ಕಾರ್ಮಿಕರ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

8 ಗಂಟೆಗಳ ದುಡಿಮೆಗಾಗಿ ನಡೆದ ಕಾರ್ಮಿಕರ ಹೋರಾಟದ ಭಾಗವಾಗಿ ಇಂದು ಜಗತ್ತಿನಾದ್ಯಂತ 194 ರಾಷ್ಟ್ರಗಳಲ್ಲಿ ಕಾರ್ಮಿಕರ ದಿನಾಚರಣೆ ಕಾರ್ಯಕ್ರಮ ಆಚರಿಸಲಾಗುತ್ತಿದೆ ಎಂದರು.

ಕಾರ್ಮಿಕರಿಗೆ ಗೌರವಯುತ ಬದುಕು ನೀಡಲು, ಕಾರ್ಮಿಕರ ಕಲ್ಯಾಣಕ್ಕಾಗಿ ಹಲವಾರು ಹಕ್ಕುಗಳನ್ನು ಜಾರಿಗೆ ತರಲಾಯಿತು. ನಮ್ಮ ದೇಶದ ಸಂವಿಧಾನದಡಿ ಕಾರ್ಮಿಕರಿಗೆ ಹಲವಾರು ಹಕ್ಕುಗಳನ್ನು ನೀಡಲಾಗಿದೆ. ಸಮಾನ ಕೆಲಸಕ್ಕೆ ಸಮಾನ ವೇತನ, ಕನಿಷ್ಠ ವೇತನ ಕಾಯಿದೆ, ಮಹಿಳೆಯರಿಗೆ ವಿಶೇಷ ಸೌಲಭ್ಯಗಳನ್ನು ನೀಡಲಾಗಿದೆ. ಇಂದು ಮಹಿಳೆಯರು ಎಲ್ಲಾ ಕ್ಷೇತ್ರಗಳಲ್ಲಿ ಸಮಾನವಾಗಿ ದುಡಿಯುತ್ತಿದ್ದಾರೆ. ಮಹಿಳೆ ಕಾರ್ಮಿಕರು ಮಾನಸಿಕವಾಗಿ ಹೆಚ್ಚು ಸದೃಢರಾಗಿದ್ದು, ಬಲಿಷ್ಠರಾಗುವ ಮೂಲಕ ಅಸಂಘಟಿತ ವಲಯದಲ್ಲಿನ ಮಹಿಳಾ ಕಾರ್ಮಿಕರು ತಮ್ಮ ಹಕ್ಕುಗಳನ್ನು ಪಡೆಯಲು ಹಾಗೂ ಸರ್ಕಾರದ ಸೌಲಭ್ಯಗಳನ್ನು ಪಡೆಯಲು ಮುಂದಾಗಬೇಕು ಎಂದು ಹೇಳಿದರು.

ಬಳ್ಳಾರಿ ಜಿಲ್ಲೆಯಲ್ಲಿ ಮಹಿಳಾ ಕಾರ್ಮಿಕರಿಗೆ ವಿಶೇಷವಾಗಿ ಜೀನ್ಸ್ ಗಾರ್ಮೆಂಟ್‌ಗಳಲ್ಲಿ ದುಡಿಯುವ ಮಹಿಳಾ ಕಾರ್ಮಿಕರು ಕಾರ್ಮಿಕ ಇಲಾಖೆಯಲ್ಲಿ ನೋಂದಣೆಯಾಗಿ ಸರ್ಕಾರದ ಸೌಲಭ್ಯ ಪಡೆಯಲು ಜಾಗೃತರಾಗಬೇಕು ಎಂದು ಕರೆ ನೀಡಿದರು.

ಜಿಲ್ಲಾ ಕಾರ್ಮಿಕ ಅಧಿಕಾರಿ ಸಿದ್ದಪ್ಪ ಖೈನೂರ ಅವರು ಮಾತನಾಡಿ, ಕಾರ್ಮಿಕ ಇಲಾಖೆಯು ಅಸಂಘಟಿತ ವಲಯದಲ್ಲಿ ದುಡಿಯುವವರಿಗಾಗಿ ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯನ್ನು ಸ್ಥಾಪಿಸಿದೆ. ಈ ಮಂಡಳಿಯಲ್ಲಿ ನೋಂದಣಿಯಾಗುವ ಕಾರ್ಮಿಕರಿಗೆ ಇಲಾಖೆಯು ಹಲವಾರು ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ನೀಡುತ್ತದೆ ಎಂದು ತಿಳಿಸಿದರು.

ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆಯಡಿ ಅಸಂಘಟಿತ ವಲಯಗಳಲ್ಲಿ ಬರುವ ಟೈಲರಿಂಗ್ ಮಾಡುವ ಕಾರ್ಮಿಕರು ನೋಂದಣಿಯಾಗಿ ಸೌಲಭ್ಯಗಳನ್ನು ಪಡೆಯಬಹುದು ಎಂದು ತಿಳಿಸಿದ ಅವರು, ಇಲಾಖೆಯ ಸೌಲಭ್ಯಗಳ ಕುರಿತು ಮಾಹಿತಿ ನೀಡಿದರು.

ಜಿಲ್ಲಾ ಬಾಲಕಾರ್ಮಿಕ ಯೋಜನಾಧಿಕಾರಿ ಮೌನೇಶ್ ಅವರು ಮಾತನಾಡಿ, ಕೈಗಾರಿಕೆಗಳು ಸೇರಿದಂತೆ ಜೀನ್ಸ್ ಉತ್ಪಾದನಾ ಯೂನಿಟ್‌ಗಳಲ್ಲಿ ಬಾಲಕಾರ್ಮಿಕರನ್ನು ದುಡಿಸಿಕೊಳ್ಳುವುದು ಕಾನೂನು ಅಪರಾಧವಾಗಿದ್ದು, ಪೋಷಕರು ತಮ್ಮ ಮಕ್ಕಳನ್ನು ಶಿಕ್ಷಣವಂತರನ್ನಾಗಿಸಬೇಕು. 14 ವಯಸ್ಸಿನ ಮಕ್ಕಳಿಗೆ ಸರ್ಕಾರವು ಉಚಿತ ಮತ್ತು ಕಡ್ಡಾಯ ಶಿಕ್ಷಣ ನೀಡುತ್ತಿದ್ದು, ಈ ನಿಟ್ಟಿನಲ್ಲಿ ಎಲ್ಲಾ ಕಾರ್ಮಿಕರು ತಮ್ಮ ಮಕ್ಕಳಿಗೆ ಶಿಕ್ಷಣ ನೀಡಲು ಸರ್ಕಾರದ ಯೋಜನೆಗಳನ್ನು ಬಳಸಿಕೊಳ್ಳುವಂತೆ ಮಾಹಿತಿ ನೀಡಿದರು.

ಜಿಲ್ಲಾ ಕಾರ್ಮಿಕ ಇನ್ಸ್‌ಪೆಕ್ಟರ್ ರಮೇಶ್ ಅವರು ಕಾರ್ಮಿಕ ಇಲಾಖೆಯಲ್ಲಿ ಸೌಲಭ್ಯ ಪಡೆಯಲು ಅನುಸರಿಸಬೇಕಾದ ಕ್ರಮಗಳ ಬಗ್ಗೆ ಮಾಹಿತಿ ನೀಡಿದರು.

ಇದೇ ವೇಳೆ ಗಾರ್ಮೆಂಟ್ ಮಹಿಳಾ ಕಾರ್ಮಿಕರಿಗೆ ಕಾರ್ಮಿಕ ಇಲಾಖೆಯಿಂದ ನೋಂದಣಿಯಾದವರಿಗೆ ಟೈಲರಿಂಗ್ ಕಾರ್ಡ್ ಗಳನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ ರೀಚ್ ಸಂಸ್ಥೆಯ ಜಿ.ಎನ್.ಸಿಂಹ, ಜೀನ್ಸ್ ಗಾರ್ಮೆಂಟ್ ಕಮ್ಯೂನಿಟಿ ಡೆವೆಲಪ್‌ಮೆಂಟ್ ಅಸೋಸಿಯೇಷನ್‌ನ ಅಧ್ಯಕ್ಷೆ ಸುನೀತಾ, ಅಸೋಸಿಯೇಷನ್‌ನ ಪದಾಧಿಕಾರಿಗಳಾದ ಜಾನ್ ಸುಧಾಕರ್, ರೆಹಮಾನ್, ಸತ್ಯನಾರಾಯಣ, ಗೌಷ್, ರೀಚ್ ಸಂಸ್ಥೆಯ ಜಿಲ್ಲಾ ಸಂಯೋಜಕ ಹನುಮಂತಪ್ಪ, ಪದಾಧಿಕಾರಿಗಳಾದ ಲಕ್ಮೀದೇವಿ, ಬಸಮ್ಮ, ಡಾ.ರಿಸ್ವಾಮಿ.ಹೆಚ್ ಸೇರಿದಂತೆ ಜೀನ್ಸ್ ಗಾರ್ಮೆಂಟ್ ಯೂನಿಟ್‌ಗಳಲ್ಲಿ ಕೆಲಸ ಮಾಡುವ ಮಹಿಳಾ ಕಾರ್ಮಿಕರು ಭಾಗವಹಿಸಿದ್ದರು.

## ಮೇ 31 ರ ವರೆಗೆ ವಿಶೇಷ ಲಸಿಕಾ ಅಭಿಯಾನ

# ಮಗುವಿನ ವಯಸ್ಸಿಗನುಸಾರವಾಗಿ ತಪ್ಪದೇ ಲಸಿಕೆ ಹಾಕಿಸಿ: ಡಿಹೆಚ್‌ಓ ಡಾ.ಯಲ್ಲಾ ರಮೇಶ್ ಬಾಬು




ಬಳ್ಳಾರಿ,ಮೇ 26–ಜಿಲ್ಲೆಯಲ್ಲಿ ಮೇ 26 ರಿಂದ 31 ರವರೆಗೆ ಒಂದು ವಾರ ವಿಶೇಷ ಲಸಿಕಾ ಅಭಿಯಾನ ನಡೆಯುತ್ತಿದ್ದು, ಮಗುವಿನ ಬಾಲ್ಯದಲ್ಲಿ ಬರಬಹುದಾದಂತಹ 12 ಮಾರಕ ರೋಗಗಳನ್ನು ತಡೆಗಟ್ಟಲು ಮಗುವಿನ ವಯಸ್ಸಿಗನುಸಾರವಾಗಿ ತಪ್ಪದೇ ಲಸಿಕೆ ಹಾಕಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಕರೆ ನೀಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ನಗರ ಪ್ರಾಥಮಿಕ ಆರೋಗ್ಯ ಕೇಂದ್ರ ಮಿಲ್ಲರ್‌ಪೇಟೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಶೇಷಾವಲಿ ದರ್ಗಾ ಬಡಾವಣೆಯ ಅಂಗನವಾಡಿ ಕೇಂದ್ರದಲ್ಲಿ ಮೇ 31 ರ ವರೆಗೆ ನಡೆಯುವ ವಿಶೇಷ ಲಸಿಕಾ ಅಭಿಯಾನದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಮಗುವಿನ ಜನನದ ನಂತರ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಬಾಲಕ್ಷಯ ತಡೆಗಟ್ಟಲು ಬಿಸಿಜಿ, ಪೋಲಿಯೋ ರೋಗ ತಡೆಗಟ್ಟಲು ಪೋಲಿಯೋ ಹನಿ, ಕಾಮಾಲೆ ರೋಗ ತಡೆಗಟ್ಟಲು ಹೆಪಟೈಟೀಸ್ ಹಾಗೂ ನವಜಾತ ಶಿಶುವಿನ ದೇಹದ ಒಳಗಡೆ ಆಂತರಿಕ ರಕ್ತಸ್ರಾವ ಸಾಧ್ಯತೆ ತಡೆಗಟ್ಟಲು ವಿಟಮಿನ್–ಕೆ ಚುಚ್ಚುಮದ್ದನ್ನು ಮೊದಲ ದಿನವೇ ನೀಡಲಾಗುತ್ತಿದೆ. ನಂತರ ವಯಸ್ಸಿಗೆ ಅನುಸಾರವಾಗಿ ಮಾರಕ ರೋಗಗಳನ್ನು ತಡೆಗಟ್ಟಲು ಒಂದು ವರ್ಷದೊಳಗಿನ ಎಲ್ಲಾ ಲಸಿಕೆಗಳನ್ನು ಉಚಿತವಾಗಿ ಹಾಕಲಾಗುತ್ತಿದೆ. ಪಾಲಕರು ತಮ್ಮ ಹತ್ತಿರದ ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿ ಮಗುವಿಗೆ ಹಾಕಿಸಬೇಕಾದ ಲಸಿಕೆಗಳನ್ನು ತಪ್ಪದೇ ಹಾಕಿಸಬೇಕು ಎಂದರು.

ಈಗಾಗಲೇ ಪ್ರತಿ ಗುರುವಾರ ಎಲ್ಲಾ ಗ್ರಾಮ, ವಾರ್ಡ್‌ಗಳಲ್ಲಿ ಲಸಿಕೆ ಹಾಕಲಾಗುತ್ತಿದ್ದು, ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಪ್ರತಿ ದಿನ ಲಸಿಕೆ ಹಾಕಲಾಗುತ್ತಿದೆ. ಮಗು ಲಸಿಕೆ ವಂಚಿತರಾಗಬಾರದೆಂಬ ಹಿನ್ನಲೆಯಲ್ಲಿ ಸರ್ಕಾರವು ಏಪ್ರಿಲ್, ಮೇ, ಜೂನ್ ಮೂರು ತಿಂಗಳ ಕಾಲ ನಿಗಧಿತ ಅವಧಿಯಲ್ಲಿ ಲಸಿಕೆ ಪಡೆಯದ ಹಾಗೂ ಒಂದು ಲಸಿಕೆಯನ್ನು ಪಡೆಯದೇ ಇರುವ ಮಕ್ಕಳನ್ನು ಗುರ್ತಿಸಿ ಲಸಿಕೆ ಹಾಕುವ ಕಾರ್ಯವನ್ನು ಮೇ 26 ರಿಂದ 31 ರ ವರೆಗೆ ಮಾಡಲಾಗುತ್ತಿದೆ ಎಂದು ತಿಳಿಸಿದರು. ಇತ್ತೀಚೆಗೆ ಕೆಲವು ಪ್ರದೇಶಗಳಲ್ಲಿ ಕಂಡುಬರುತ್ತಿರುವ ದಡಾರ ಪ್ರಕರಣಗಳ ನಿಯಂತ್ರಣಕ್ಕಾಗಿ ಮಗುವಿನ ವಯಸ್ಸು 9 ತಿಂಗಳು ತುಂಬಿದ ನಂತರ ಹಾಗೂ ಒಂದುವರೆ ವರ್ಷ ವಯಸ್ಸಿನಲ್ಲಿ ಎರಡು ಬಾರಿ ಲಸಿಕೆ ಹಾಕಿಸುವ ಮೂಲಕ ದಡಾರ ತಡೆಗಟ್ಟಬಹುದು ಎಂದರು.

ಮಗುವಿನ ಒಂದುವರೆ ತಿಂಗಳು, ಎರಡುವರೆ ತಿಂಗಳು ಹಾಗೂ ಮೂರುವರೆ ತಿಂಗಳ ವಯಸ್ಸಿನಲ್ಲಿ ಕ್ರಮವಾಗಿ ಗಂಟಲು ಮಾರಿ, ನಾಯಿಕೆಮ್ಮು, ಧನುರ್ವಾಯು ರೋಟ ವೈರಸ್, ಹೆಚ್ ಇನ್‌ಫ್ಲೂಯೆಂಜಾ, ಕಾಮಾಲೆಗಾಗಿ ಪೆಂಟಾವೈಲೆಂಟ್ ಲಸಿಕೆ, ರೋಟಾವೈರಸ್ ಅತಿಸಾರಬೇದಿಗೆ ನಿಮೋಕಾಕಲ್ ಲಸಿಕೆ ಹಾಕಲಾಗುತ್ತದೆ. ಅದೇರೀತಿಯಾಗಿ ಮಗುವಿನ ಒಂಬತ್ತು ತಿಂಗಳು ವಯಸ್ಸು ತುಂಬಿದ ನಂತರ ಮೆದುಳು ಜ್ವರ ರೋಗಕ್ಕೆ ಜಾಪನೀಸ್ ಎನ್ಸಲಿಟಿಸ್ ಲಸಿಕೆ, ದಡಾರ ರೂಬೇಲ್ಲಾ ರೋಗಕ್ಕೆ ಮಿಸಲ್ಸ್ ರೂಬೆಲ್ಲಾ ಲಸಿಕೆ, ಹಾಗೂ ಸಂಜೆಯ ಹೊತ್ತು ಕಂಡುಬರುವ ಇರುಳುಗಣ್ಣು ರೋಗಕ್ಕೆ ವಿಟಾಮಿನ್–ಎ ಅನ್ನಾಂಗ ದ್ರಾವಣ ನೀಡಲಾಗುತ್ತಿದ್ದು, ತಪ್ಪದೇ ಹಾಕಿಸಬೇಕು ಎಂದು ಅವರು ಹೇಳಿದರು.

ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ಹನುಮಂತಪ್ಪ ಅವರು ಮಾತನಾಡಿ, ಲಸಿಕೆ ನೀಡುವಲ್ಲಿ ಸಾರ್ವಜನಿಕರ ಅಭಿಪ್ರಾಯ ಮತ್ತು ಅನಿಸಿಕೆಗಳನ್ನು ಕ್ರೂಢೀಕರಿಸಿ ತಪ್ಪು ನಂಬಿಕೆಗಳ ಕುರಿತು ಜಾಗೃತಿ ನೀಡಲಾಗುತ್ತಿದ್ದು, ಗಾಳಿಸುದ್ದಿ ನಂಬಿ ಲಸಿಕೆ ಬೇಡವೆನ್ನುವವರಿಗೆ ವ್ಯಾಪಕವಾಗಿ ಮನೆ ಭೇಟಿ ಮೂಲಕ ಗುಂಪು ಸಭೆ, ಸಮುದಾಯ ಮುಖಂಡರ ಮೂಲಕ ಮಾಹಿತಿ ಒದಗಿಸಿ ಅವರಲ್ಲಿಯ ತಪ್ಪು ನಂಬಿಕೆಗಳನ್ನು ಹೋಗಲಾಡಿಸಿ ಎಲ್ಲಾ ಲಸಿಕೆಗಳನ್ನು ಹಾಕಿಸಬೇಕು ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ವಿಶ್ವ ಆರೋಗ್ಯ ಸಂಸ್ಥೆ ಬಳ್ಳಾರಿ ವಲಯ ಪ್ರತಿನಿಧಿ ಆರ್.ಎಸ್.ಶ್ರೀಧರ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಕ್ಷೇತ್ರ ಲಸಿಕಾ ಮೇಲ್ವಿಚಾರಕ ಕೋಟೇಶ್ವರಾವ್, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ರಾಜೇಶ್ವರಿ, ಆಶಾಕಾರ್ಯಕರ್ತೆ ತಾಯಮ್ಮ, ಅಂಗನವಾಡಿ ಕಾರ್ಯಕರ್ತೆ ಪುಷ್ಪ ಸೇರಿದಂತೆ ತಾಯಂದಿರು ಉಪಸ್ಥಿತರಿದ್ದರು.


# ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 26: ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ವತಿಯಿಂದ 2025ನೇ ಸಾಲಿನ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಪರೀಕ್ಷೆಗಳಲ್ಲಿ ಶೇ.90 ಕ್ಕಿಂತ ಹೆಚ್ಚಿನ ಅಂಕ ಪಡೆದ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಮಕ್ಕಳ ಪ್ರತಿಭಾ ಪುರಸ್ಕಾರಕ್ಕೆ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ಆನ್‌ಲೈನ್ ವೆಬ್ ಸೈಟ್ https://ksgeanews.blogspot.com ಗೆ ಭೇಟಿ ನೀಡಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಮೇ 31 ಕೊನೆಯ ದಿನ. ಅರ್ಜಿಗಳನ್ನು ಅಗತ್ಯ ದಾಖಲೆಗಳೊಂದಿಗೆ ಸಲ್ಲಿಸಬೇಕು ಎಂದು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯ ಉಪಾಧ್ಯಕ್ಷ ಹಾಗೂ ಜಿಲ್ಲಾಧ್ಯಕ್ಷರೂ ಆದ ಎಂ.ಎ.ಆಸೀಫ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದೋಣಿಮಲೈ: ಮೇ 28 ರಂದು ವಿದ್ಯುತ್ ವ್ಯತ್ಯಯ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 26–ಸಂಡೂರು ಜೆಸ್ಕಾಂ ವ್ಯಾಪ್ತಿಯ 110/33/11ಕೆ.ವಿ ದೋಣಿಮಲೈ ವಿದ್ಯುತ್ ವಿತರಣಾ ಕೇಂದ್ರದಲ್ಲಿ ಬ್ಯಾಟರಿ ಮೆಂಟೆನೆನ್ಸ್ ತುರ್ತು ನಿರ್ವಹಣಾ ಕಾಮಗಾರಿ ಹಮ್ಮಿಕೊಂಡಿರುವುದರಿಂದ ಮೇ 28 ರಂದು ಮಧ್ಯಾಹ್ನ 2 ರಿಂದ ಸಂಜೆ 5 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ.

ಸಂಡೂರು ಪಟ್ಟಣ ಸೇರಿದಂತೆ ಕೃಷ್ಣನಗರ ಗ್ರಾಮ ಪಂಚಾಯಿತಿ, ಸುಶೀಲಾನಗರ ಗ್ರಾಮಪಂಚಾಯಿತಿ, ಯಶವಂತನಗರ ಐಪಿಸೆಟ್ ಹಾಗೂ ಸಂಡೂರು ಪಟ್ಟಣದ ಸೀನ್ ಬಸಪ್ಪ ಕ್ಯಾಂಪ್, ನಂದಿಹಳ್ಳಿ, ಕಮತೂರು ನಾರಾಯಣಪುರ ಮತ್ತು ರಣಜಿತ್‌ಪುರ, ಭುಜಂಗನಗರ ಗ್ರಾಮ ಪಂಚಾಯತಿ, ದೇವಗಿರಿ ಗ್ರಾಮಪಂಚಾಯಿತಿ, ನರಸಿಂಗಾಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಒಳಪಡುವ ಪಂಚಾಯತಿಗಳಿಗೆ ಬರುವ ಗ್ರಾಮಗಳಲ್ಲಿ ಎನ್.ಜೆ.ವೈ ಮತ್ತು ಐ.ಪಿ.ಸೆಟ್ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯವಾಗಲಿದೆ ಎಂದು ಸಂಡೂರು ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ–ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಳಕೆಯಾದ ಪ್ಲಾಸ್ಟಿಕ್ ವಸ್ತುಗಳನ್ನು ಸೂಕ್ತ ವಿಲೇವಾರಿ ಮಾಡಲು ಜಿಪಂ ಸಿಇಒ ಸಲಹೆ

# ಜೂ.05 ರಂದು ವಿಶ್ವ ಪರಿಸರ ದಿನಾಚರಣೆಯ ಪ್ರಯುಕ್ತ ಪ್ಲಾಸ್ಟಿಕ್ ಮಾಲಿನ್ಯ ಕೊನೆಗೊಳಿಸಲು ಜಾಗೃತಿ ಅಭಿಯಾನ: ಮಹಮ್ಮದ್ ಹ್ಯಾರಿಸ್ ಸುಮೈರ್



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 26–ಪ್ರತಿ ವರ್ಷ ಜೂನ್ 5 ರಂದು ವಿಶ್ವ ಪರಿಸರ ದಿನವನ್ನು ಆಚರಿಸಲಾಗುತ್ತದೆ. “ಜಾಗತಿಕವಾಗಿ ಪ್ಲಾಸ್ಟಿಕ್ ಮಾಲಿನ್ಯವನ್ನು ಕೊನೆಗೊಳಿಸುವುದು" ಎಂಬ ಘೋಷವಾಕ್ಯದೊಂದಿಗೆ ಪ್ಲಾಸ್ಟಿಕ್ ಮಾಲಿನ್ಯವನ್ನು ಕೊನೆಗೊಳಿಸುವ ಮಹತ್ವವನ್ನು ತಿಳಿಸುವ ಉದ್ದೇಶದೊಂದಿಗೆ ಮೇ 22 ರಿಂದ ಜೂನ್ 05 ರವರೆಗೆ ಪೂರ್ವ ಅಭಿಯಾನವನ್ನು ಎಲ್ಲಾ ಗ್ರಾಮ ಪಂಚಾಯತಗಳಲ್ಲಿ ಹಮ್ಮಿಕೊಳ್ಳಲಾಗುವುದು ಎಂದು ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರಿಸ್ ಸುಮೈರ್ ಅವರು ತಿಳಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣೆಯು ಸ್ವಚ್ಛ ಭಾರತ್ ಮಿಷನ್ (ಗ್ರಾ) ಯೋಜನೆಯ ಘನ ತ್ಯಾಜ್ಯ ನಿರ್ವಹಣಾ ಪ್ರಯತ್ನಗಳ ಪ್ರಮುಖ ಭಾಗವಾಗಿದ್ದು, ಈ ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ ಜೂನ್ 05 ರ ವರೆಗೆ ಜಾಗೃತಿ ಅಭಿಯಾನದಲ್ಲಿ ಪ್ಲಾಸ್ಟಿಕ್ ತ್ಯಾಜ್ಯದಿಂದ ಆಗುವ ದುಷ್ಪರಿಣಾಮಗಳು ಹಾಗೂ ಇದರ ನಿರ್ಮೂಲನೆ ಮಾಡುವ ಸಂಬಂಧ ವಿವಿಧ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ವಿವಿಧ ಕಾರ್ಯಕ್ರಮ/ಚಟುವಟಿಕೆ ಶ್ರಮದಾನ, ಸಂವಾದ ಸಭೆಗಳನ್ನು ಆಯೋಜನೆ ಮಾಡಿ ಜನರಲ್ಲಿ ಜಾಗೃತಿ ಮೂಡಿಸುವುದಾಗಿದೆ.

ಈ ಅಭಿಯಾನದಲ್ಲಿ ವಿಶೇಷವಾಗಿ ಜಲಮೂಲಗಳ ಸುತ್ತು–ಮುತ್ತ ಸ್ವಚ್ಛಗೊಳಿಸುವುದು. ಗ್ರಾಮದಲ್ಲಿ ಬ್ಲಾಕ್ ಸ್ಪಾಟ್ (ಕಸ ಎಸೆಯುವ ಸ್ಥಳ) ಗುರುತಿಸಿ ಸ್ವಚ್ಛಗೊಳಿಸುವುದು. ಚರಂಡಿ ಸ್ವಚ್ಛಗೊಳಿಸುವುದು, ಅದರಲ್ಲಿ ಪ್ಲಾಸ್ಟಿಕ್ ಮತ್ತು ಇತರೆ ವಸ್ತುಗಳನ್ನು ಎಸೆಯದಂತೆ ತಿಳಿಸುವುದು. ಏಕ ಬಳಕೆಯ ಪ್ಲಾಸ್ಟಿಕ್ ವಸ್ತು, ಕವರ್‌ಗಳನ್ನು ಉತ್ಪಾದಿಸುವ, ಮಾರಾಟ ಮಾಡುವ, ಗ್ರಾಹಕರಿಗೆ ನೀಡುವ ಅಂಗಡಿ ಹೊಟೇಲ್, ಬೇಕರಿ, ಇತರೆ ವಾಣಿಜ್ಯ ಮಳಿಗೆಗಳಿಗೆ ತಪಾಸಣೆ ಮಾಡುವುದು.

ಬಳಕೆಯಾದ ಪ್ಲಾಸ್ಟಿಕ್ ವಸ್ತುಗಳನ್ನು ಸೂಕ್ತ ವಿಲೇವಾರಿ ಮಾಡುವುಂತೆ ಪ್ರೇರೆಣೆ, ಪ್ಲಾಸ್ಟಿಕ್ ತ್ಯಾಜ್ಯ ಸಂಗ್ರಹಣೆಯ ಮಾಡಿ ವಿಂಗಡಿಸಿ ವೈಜ್ಞಾನಿಕ ವಿಲೇವಾರಿ ಮಾಡುವುದಾಗಿದೆ.

ಅಭಿಯಾನದಲ್ಲಿ ಗ್ರಾಮ ಪಂಚಾಯತಿಯ ಚುನಾಯಿತ ಪ್ರತಿನಿಧಿಗಳು, ಯುವಕರು, ಮಹಿಳಾ ಸ್ವಸಹಾಯ ಸಂಘದ ಸದಸ್ಯರು, ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿ ಸದಸ್ಯರು ಮತ್ತು ಸ್ವಯಂ ಸೇವಕರು, ಗ್ರಾಮದ ಮುಖಂಡರು ಅಭಿಯಾನದಲ್ಲಿ ಭಾಗವಹಿಸಿ ಪ್ಲಾಸ್ಟಿಕ್ ಮುಕ್ತ ಗ್ರಾಮಗಳನ್ನಾಗಿ ರೂಪಿಸಲು ಸಹಕರಿಸಲು ಅವರು ಮನವಿ ಮಾಡಿದ್ದಾರೆ.

ಜಾಹೀರಾತಿಗಾಗಿ ಇಂದೇ ಸಂಪರ್ಕಿಸಿ:9449732000

# ಜೀವನದ ಸಾರ್ಥಕತೆಗೆ ದೃಢ ನಿರ್ಧಾರ ಅವಶ್ಯ-ಪ್ರೊ.ಕೊಕ್ಕನವರ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ26-ಜೀವನದಲ್ಲಿ ಎದುರಾಗುವ ಸವಾಲುಗಳನ್ನು ಎದುರಿಸಿ ದೃಢ ನಿರ್ಧಾರದಿಂದ ಸಾಧನೆ ಮಾಡುವ ಗುರಿಯನ್ನು ವಿದ್ಯಾರ್ಥಿಗಳು ಹಾಕಿಕೊಂಡು ಸತತ ಪರಿಶ್ರಮದಿಂದ ಗುರಿ ಸಾಧಿಸುವ ಛಲ ಬೆಳೆಸಿಕೊಳ್ಳಬೇಕು ಎಂದು ಜಮಖಂಡಿಯ ಪ್ರಾಧ್ಯಾಪಕ ವಾಯ್.ವಾಯ್.ಕೊಕ್ಕನವರ ಹೇಳಿದ್ದಾರೆ.

ತಾಲೂಕಿನ ಬೇವೂರ ಗ್ರಾಮದ ಪರಪ್ಪ ಸಜ್ಜನ ಕಲಾ ಮಹಾವಿದ್ಯಾಲಯದಲ್ಲಿ ಶನಿವಾರ ಜರುಗಿದ ಪಠ್ಯೇತರ ಚಟುವಟಿಕೆಗಳ ಸಮಾರೋಪ ಹಾಗೂ ಬಿ.ಎ.ಅಂತಿಮ ವರ್ಷದ ವಿದ್ಯಾರ್ಥಿಗಳ ಬೀಳ್ಕೊಡುಗೆ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಮಾತನಾಡಿದ ಅವರು, ಜೀವನ ಸಾಥ9ಕತೆಗೆ ದೃಢ ನಿರ್ಧಾರ ಅವಶ್ಯಕ ಎಂದರು.

ಸಮಯ ಪಾಲನೆ, ಶಿಸ್ತು, ಹಿರಿಯರನ್ನು ಗೌರವಿಸುವ ಗುಣಗಳನ್ನು ಬೆಳೆಸಿಕೊಳ್ಳಬೇಕು. ದೊರೆಯುವ ಅವಕಾಶಗಳನ್ನು ಸದುಪಯೋಗಪಡಿಸಿಕೊಂಡು ಮುನ್ನಡೆಯಬೇಕು ಎಂದ ಪ್ರೊ. ಕೊಕ್ಕನವರ, ಯುವಕರಿಗೆ ಶರೀರ ಸಂಪತ್ತು ಬಹಳಷ್ಟು ಮುಖ್ಯವಾಗಿದ್ದು, ಅದನ್ನು ಹಾಳು ಮಾಡಿಕೊಳ್ಳುವ ದಾರಿಯನ್ನು ತುಳಿಯಬಾರದು ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಆದರ್ಶ ವಿದ್ಯಾವರ್ಧಕ ಸಂಘದ ಸದಸ್ಯ ಪಿ.ಬಿ.ಹೊಸಳ್ಳಿ ಮಾತನಾಡಿ, ವಿದ್ಯಾರ್ಥಿಗಳು ಜೀವನದಲ್ಲಿ ಶಿಸ್ತು ರೂಢಿಸಿಕೊಂಡು ತಂದೆ, ತಾಯಿ,ಗುರುಗಳಲ್ಲಿ ಪೂಜ್ಯನೀಯ ಭಾವ ಹೊಂದಿ ಸಮಾಜಕ್ಕೆ ಆಸ್ತಿಯಾಗಿ ಬೆಳೆಯಬೇಕು ಎಂದು ಹೇಳಿದರು.

ಪ್ರಾಚಾರ್ಯ ಜಗದೀಶ ಭೈರಮಟ್ಟಿ ಪ್ರಾಸ್ತಾವಿಕವಾಗಿ ಮಾತನಾಡಿ, ಕಾಲೇಜಿನ ವಿದ್ಯಾರ್ಥಿಗಳು ವಿವಿಧ ಕ್ಷೇತ್ರಗಳಲ್ಲಿ ಮಾಡಿದ ಸಾಧನೆ, ಪ್ರಗತಿಯ ನೋಟ ತಿಳಿಸಿದರು. ಪ್ರೊ. ಎಸ್.ಬಿ.ಹಂಚಿನಾಳ, ವಿದ್ಯಾರ್ಥಿನಿ ಲಕ್ಷ್ಮೀ ಮಾಗನೂರ ಮಾತನಾಡಿದರು. ವಿದ್ಯಾರ್ಥಿ ಪ್ರತಿನಿಧಿಗಳಾದ ಸಂಗೀತಾ ಮಾಗನೂರ, ಮಯನೂರೇಶ ಮಾದರ, ಪ್ರೊ.ಬಿ.ಬಿ.ಬೇವೂರ, ಪ್ರೊ.ಎಸ್.ಎಸ್.ಆದಾಪೂರ, ಪ್ರೊ.ಡಿ.ವಾಯ್.ಬುಡ್ಡಿಯವರ ಹಾಗೂ ಡಾ.ಎ.ಎಂ.ಗೊರಚಿಕ್ಕನವರ ಪಾಲ್ಗೊಂಡಿದ್ದರು.

ಸಂಗೀತ ಸ್ಪರ್ಧೆಗಳಲ್ಲಿ ಹ್ಯಾಟ್ರಿಕ್ ಸಾಧನೆ ಮಾಡಿದ ವಿಜಯಲಕ್ಷ್ಮೀ ಬಡ್ಡಿವಡ್ಡರ ಹಾಗೂ ವಿವಿಧ ಚಟುವಟಿಕೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪತ್ರ, ಫಲಕ ನೀಡಿ ಅಭಿನಂದಿಸಲಾಯಿತು.

ವಿದ್ಯಾರ್ಥಿನಿಯರು ಪ್ರಾರ್ಥಿಸಿದರು. ಜಿ.ಎಸ್.ಗೌಡರ ನಿರೂಪಿಸಿದರು. ನಾಗಲಿಂಗೇಶ ಬೆಣ್ಣೂರ ವಂದಿಸಿದರು. ನಂತರ ವಿದ್ಯಾರ್ಥಿಗಳಿಂದ ಮನರಂಜನಾ ಕಾರ್ಯಕ್ರಮಗಳು ಜರುಗಿದವು.

# ಕನ್ನಡ ನಾಟಕಗಳ ವಿಭಿನ್ನ ನೆಲೆಗಳು ಕುರಿತ ರಾಜ್ಯಮಟ್ಟದ ಸಂಶೋಧನಾ ಕಮ್ಮಟ ಇಂದು

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.26-ನವನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಹಂಪಿ ಕನ್ನಡ ವಿಶ್ವವಿದ್ಯಾಲಯದ ನಾಟಕ ವಿಭಾಗ ಹಾಗೂ ಗುಳೇದಗುಡ್ಡದ ರಾಷ್ಟ್ರೀಯ ಸಂಶೋಧನಾ ವೇದಿಕೆ ಇವರ ಸಹಯೋಗದಲ್ಲಿ ಕನ್ನಡ ನಾಟಕಗಳ ವಿಭಿನ್ನ ನೆಲೆಗಳು ಕುರಿತು ರಾಜ್ಯಮಟ್ಟದ ಸಂಶೋಧನಾ ಕಮ್ಮಟ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಮೇ. 27 ರಂದು ನಡೆಯಲಿದೆ.

ಮಂಗಳವಾರ ಮುಂಜಾನೆ 9 ಗಂಟೆಗೆ ಹಂಪಿ ಕನ್ನಡ ವಿವಿ ಕುಲಪತಿ ಡಾ.ಡಿ.ವಿ.ಪರಮಶಿವಮೂರ್ತಿ ಕಮ್ಮಟ ಉದ್ಘಾಟಿಸುವರು. ಕಾಲೇಜಿನ ಪ್ರಾಂಶುಪಾಲ ಡಾ.ಅರುಣಕುಮಾರ ಗಾಳಿ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಕನ್ನಡ ವಿಶ್ವವಿದ್ಯಾಲಯ ನಾಟಕ ವಿಭಾಗದ ಮುಖ್ಯಸ್ಥ ಡಾ.ವೀರೇಶ ಬಡಿಗೇರ, ಮೋಡಿಲಿಪಿ ತಜ್ಞ ಡಾ.ಸಂಗಮೇಶ ಕಲ್ಯಾಣಿ ಆಗಮಿಸುವರು. ಪ್ರೊ.ಜಿ.ಜಿ.ಹಿರೇಮಠ ಆಶಯ ನುಡಿ ಹೇಳುವರು.

ನಂತರ ಕುವೆಂಪು ಅವರ ಶೂದ್ರ ತಪಸ್ವಿ ನಾಟಕ ಕುರಿತು ಮೊದಲ ಗೋಷ್ಠಿ ಪ್ರೊ.ಸಿದ್ಧಲಿಂಗೇಶ ಸಜ್ಜನಶೆಟ್ಟರ ಅಧ್ಯಕ್ಷತೆಯಲ್ಲಿ ನಡೆಯಲಿದ್ದು, ಪ್ರೊ.ಸದಾಶಿವ ದೊಡ್ಡಮನಿ ವಿಷಯ ಮಂಡಿಸುವರು. ಪ್ರೊ.ಶ್ರೀಹರಿ ಧೂಪದ ಅಧ್ಯಕ್ಷತೆಯಲ್ಲಿ ಡಾ.ಚಂದ್ರಶೇಖರ ಕಂಬಾರ ಅವರ ಶಿವರಾತ್ರಿ ನಾಟಕ ಕುರಿತು ಎರಡನೇ ಗೋಷ್ಠಿ ನಡೆಯಲಿದ್ದು, ಪ್ರೊ. ರಾಜಶೇಖರ ಬಿರಾದಾರ ವಿಷಯ ಮಂಡನೆ ಮಾಡುವರು.

ಡಾ.ಗಿರೀಶ ಕಾರ್ನಾಡರ ತಲೆದಂಡ ನಾಟಕ ಕುರಿತು ನಡೆಯುವ ಮೂರನೇ ಗೋಷ್ಠಿಯ ಅಧ್ಯಕ್ಷತೆಯನ್ನು ಸಾಹಿತಿ ವಿಜಯಶ್ರೀ ಇಟ್ಟಣ್ಣವರ ವಹಿಸಲಿದ್ದು, ಡಾ.ರುದ್ರೇಶ ಮೇಟಿ ವಿಷಯ ಮಂಡಿಸುವರು.

# ಮೀಸಲಾತಿ ಸಮೀಕ್ಷೆ 29ರವರೆಗೆ ವಿಸ್ತರಣೆ: ಸಮೀಕ್ಷಾ ಕಾರ್ಯ ಪರಿಶೀಲಿಸಿದ ಡಿಸಿ ಜಾನಕಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.26-ಜಮಖಂಡಿ ತಾಲೂಕಿನ ವಿವಿಧ ಮತಗಟ್ಟೆಗಳ ವ್ಯಾಪ್ತಿಯ ಮನೆಗಳಿಗೆ ಜಿಲ್ಲಾಧಿಕಾರಿ ಜಾನಕಿ ಕೆ.ಎಂ ಭಾನುವಾರ ಭೇಟಿ ನೀಡಿ ಒಳಮೀಸಲಾತಿ ಸಮೀಕ್ಷೆ ಕಾರ್ಯವನ್ನು ಪರಿಶೀಲಿಸಿದರು.

ಒಳಮೀಸಲಾತಿ ಜಾರಿಗಾಗಿ ನ್ಯಾ. ಎನ್.ನಾಗಮೋಹನದಾಸ್ ಏಕಸದಸ್ಯ ವಿಚಾರಣಾ ಆಯೋಗದ ನೇತೃತ್ವದಲ್ಲಿ ನಡೆಯುತ್ತಿರುವ ಪರಿಶಿಷ್ಟ ಜಾತಿಗಳ ಸಮಗ್ರ ಸಮೀಕ್ಷೆ ಹಿನ್ನೆಲೆಯಲ್ಲಿ ಜಿಲ್ಲೆಯ ಜಮಖಂಡಿ ತಾಲೂಕಿನ ಮತಗಟ್ಟೆ ಸಂಖ್ಯೆ 175, 176, 177 ಮತ್ತು 191 ವ್ಯಾಪ್ತಿಗಳಲ್ಲಿ ಬರುವ ಪರಿಶಿಷ್ಟ ಜಾತಿಯ ಮನೆಗಳಿಗೆ ಭೇಟಿ ನೀಡಿ ಪರಿಶಿಷ್ಟ ಜಾತಿ ಜನರ ಒಳಮೀಸಲಾತಿ ಸಮೀಕ್ಷೆ ನಡೆಸಿದ ಬಗ್ಗೆ ಪರಿಶೀಲನೆ ನಡೆಸಿದರು.

ಒಳಮೀಸಲಾತಿ ಕುರಿತು ದತ್ತಾಂಶಗಳನ್ನು ಸಂಗ್ರಹ ಕಾರ್ಯವನ್ನು ಮೇ 5 ರಿಂದ ಪ್ರಾರಂಭಿಸಲಾಗಿದ್ದು, ಮನೆ ಮನೆ ಭೇಟಿ ನೀಡಿ ನಡೆಸಲಾಗುತ್ತಿರುವ ಸಮೀಕ್ಷೆಯ ಅವಧಿಯನ್ನು ಮೇ 26 ರಿಂದ 29ರವರೆಗೆ ಆಯೋಗ ವಿಸ್ತರಣೆ ಮಾಡಿದೆ. ಸಮೀಕ್ಷಾ ಬ್ಲಾಕ್ ವ್ಯಾಪ್ತಿಯಲ್ಲಿ 3 ದಿನಗಳ ಕಾಲ ಮೇ 30 ರಿಂದ ಜೂನ್ 1 ವರೆಗೆ ಮರುನಿಗದಿಪಡಿಸಲಾಗಿದೆ. ಆನ್ಲೈನ್ ಮೂಲಕ ಸ್ವಯಂ ಘೋಷಣೆ ಜೂನ್ 1 ವರೆಗೆ ಮುಂದುವರಿಯಲಿದೆ ಎಂದು ಜಾನಕಿ ತಿಳಿಸಿದರು. ಜಿಲ್ಲೆಯಲ್ಲಿ ಇಲ್ಲಿಯವರೆಗೆ ಪರಿಶಿಷ್ಟ ಜಾತಿಯ 80232 ಮನೆಗಳು, 314369 ಸದಸ್ಯರು ಮತ್ತು ಇತರೆ 390297 ಮನೆಗಳನ್ನು ಸಮೀಕ್ಷೆ ನಡೆಸಲಾಗಿದೆ. ವೇಳಾ ಪಟ್ಟಿಯಂತೆ ಗಣತಿ-ದಾರರು, ಮೇಲ್ವಿಚಾರಕರು ಗಣತಿ ಕಾರ್ಯವನ್ನು ಮುಂದುವರಿಸಲು ಸೂಚಿಸಲಾಗಿದೆ. ಸಮೀಕ್ಷೆಗೆ ಬೇಕಾದ ಅಗತ್ಯ ಮಾಹಿತಿಯನ್ನು ಒದಗಿಸಿ ಸಮೀಕ್ಷೆದಾರರಿಗೆ ಸಹಕರಿಸುವಂತೆ ಸಾರ್ವಜನಿಕರಲ್ಲಿ ಕೋರಿದರು.

ಸಮೀಕ್ಷೆಗೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ದಿನದ 24 ಗಂಟೆಗಳ ಕಾಲ ಕಾರ್ಯನಿರ್ವಹಿಸುತ್ತಿರುವ ಸಹಾಯವಾಣಿ ಸಂಖ್ಯೆ 08354-235526, 9480843021ಗೆ ಕರೆ ಮಾಡಿ ಮಾಹಿತಿ ಪಡೆಯುವಂತೆ ಜಿಲ್ಲಾಧಿಕಾರಿಗಳು ತಿಳಿಸಿದರು. ಭೇಟಿ ಸಮಯದಲ್ಲಿ ಜಮಖಂಡಿ ಉಪ ವಿಭಾಗಾಧಿಕಾರಿ ಶ್ವೇತಾ ಬೀಡಿಕರ ಸೇರಿದಂತೆ ಇತರೆ ಅಧಿಕಾರಿಗಳು ಇದ್ದರು.

# ಚರ್ಮದ ವಸ್ತುಗಳ ತಯಾರಿಕೆ ತರಬೇತಿ ಫಲಾನುಭವಿಗಳಿಗೆ ಸೌಲಭ್ಯ ವಿತರಿಸಿದ ಶಾಸಕ ಮೇಟಿ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.26-ಸರ್ಕಾರದ ಸ್ವನಿರ್ಧಾರಿತ ಉದ್ಯೋಗ ಯೋಜನೆಯಡಿಯಲ್ಲಿ 60 ದಿನಗಳ ಚರ್ಮದ ವಸ್ತುಗಳ ತಯಾರಿಕೆಗೆ ಸಂಬಂಧಿಸಿದಂತೆ ತರಬೇತಿ ಪಡೆದ ಫಲಾನುಭವಿಗಳಿಗೆ ಶಾಸಕರು ಹಾಗೂ ಬಿಟಿಡಿಎ ಅಧ್ಯಕ್ಷ ಎಚ್.ವಾಯ್.ಮೇಟಿ ಸೌಲಭ್ಯಗಳನ್ನು ಸೋಮವಾರ ವಿತರಿಸಿದರು.

ನವನಗರದ ಬಾಬು ಜಗಜೀವನರಾಂ ಭವನದಲ್ಲಿ ಹಮ್ಮಿಕೊಂಡ ಸೌಲಭ್ಯ ವಿತರಣಾ ಕಾರ್ಯಕ್ರಮ ಉದ್ಘಾಟಿಸಿ ಸೌಲಭ್ಯಗಳನ್ನು ವಿತರಿಸಿ ಮಾತನಾಡಿದ ಅವರು, ತಾಂತ್ರಿಕತರಬೇತಿಯನ್ನು ಪಡೆದ ಫಲಾನುಭವಿಗಳು ಇದೀಗ ಸ್ವಉದ್ಯೋಗ ಆರಂಭಿಸಲು ಸಜ್ಜಾಗಿದ್ದು, ಈ ತರಬೇತಿ ಕಾರ್ಯಕ್ರಮದಿಂದ ಅವರ ಜೀವನದ ಸುಧಾರಣೆಯಾಗಲಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ತರಬೇತಿ ಪಡೆದ ಫಲಾನುಭವಿಗಳಿಗೆ ಕೈಗಾರಿಕಾ ಉಪಕರಣಗಳು, ಕಚ್ಚಾ ಮಾಲು ಮತ್ತು ಇತರ ಅಗತ್ಯ ಸಲಕರಣೆಗಳನ್ನು ವಿತರಿಸಲಾಯಿತು. ತರಬೇತಿ ಪಡೆದ ಫಲಾನುಭವಿಗಳು ತರಬೇತಿಯ ಅನುಭವವನ್ನು ಹಂಚಿಕೊಂಡರು. ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಜಾನಕಿ ಕೆ.ಎಂ, ಲಿಡಕರ ಸಂಸ್ಥೆಯ ಅಧ್ಯಕ್ಷ ನಾಗರಾಜ ಮುಂಡರಗಿ, ಸಮಾಜಕಲ್ಯಾಣ ಇಲಾಖೆಯ ಉಪನಿರ್ದೇಶಕ ಸದಾಶಿವ ಬಡಿಗೇರ ಸೇರಿದಂತೆ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿ-ನಿವೃತ್ತರಾಗಲಿರುವ ಅತಿಥಿ ಉಪನ್ಯಾಸಕ ಶಿವಣ್ಣ ಅವರಿಗೆ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಮೌಲಾನಾ ಅಬ್ದುಲ್ ಕಲಾಂ ಆಜಾದ್ ಎಜುಕೇಷನಲ್ ಮತ್ತು ವೆಲ್ಫೇರ್ ಟ್ರಸ್ಟ್, ಕೊಪ್ಪಳ ಹಾಗೂ ಹೈದೆರಾಬಾದ್ ನ ಮನು ಕೇಂದ್ರೀಯ ವಿಶ್ವವಿದ್ಯಾಲಯದ ಸಂಯುಕ್ತ ಆಶ್ರಯದಲ್ಲಿ ನಡೆದ ಇಂದಿನ ಕಾರ್ಯಕ್ರಮದಲ್ಲಿ 10ನೇ ತರಗತಿಯಲ್ಲಿ ಉರ್ದು ವಿಷಯದಲ್ಲಿ ಅತಿ ಹೆಚ್ಚು ಅಂಕ ಪಡೆದ ಸೈಯದ್ ಫಾರ್ಹನ್ ನವಾಜ್ ವಿದ್ಯಾರ್ಥಿಯನ್ನು ಸನ್ಮಾನಿಸಲಾಯಿತು.

ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಇದೇ ತಿಂಗಳು ಮೇ 31ನೇ ತಾರೀಕಿನಂದು ನಿವೃತ್ತಿಯಾಗುತ್ತಿರುವ ಶ್ರೀ. ಶಿವಣ್ಣ ಸರ್ ನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಎಂಎಕೆ ಎಜುಕೇಶನಲ್ ಅಂಡ್ ವೆಲ್ಫೇರ್ ಟ್ರಸ್ಟಿನ ಅಧ್ಯಕ್ಷರಾದ ಪಾಶ ರೇಷ್ಮೆ, ಮನು ವಿಶ್ವವಿದ್ಯಾಲಯದ ಅಧ್ಯಯನ ಕೇಂದ್ರದ ಕೋಆರ್ಡಿನೇಟರ್ ಡಾ.ಶಿವಬಸಪ್ಪ ಮಸ್ಕಿ , ಪರೀ-ಕ್ಷೆಯ ಅಬ್ಸರ್ವರ್ ಲಿಯಾ-ಕತ್, ಅಡ್ಮಿನಿಸ್ಟ್ರೇಟಿವ್ ಸ್ಟಾಫ್ ಶಫಿ ಸರ್ದಾರ್, ಹಿರಿಯ ಉಪನ್ಯಾಸಕರಾದ ಎಂ ಶಿವಣ್ಣ, ಮನು ವಿಶ್ವವಿದ್ಯಾಲಯದ ಅಧ್ಯಯನ ಕೇಂದ್ರದ ಸಂಸ್ಥಾಪಕರಾದ ಶಬ್ಬೀರ್ ಅಹ್ಮದ್ ಮತ್ತು ಗೌಸ್ ಪಾಶ, ಕರಿಯಪ್ಪ ಹಾಗೂ ಅಧ್ಯಯನ ಕೇಂದ್ರದ ಎಲ್ಲಾ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಮಹಾತ್ಮರ ನುಡಿಗಳಿಂದ ನೆಮ್ಮದಿ ಪ್ರಾಪ್ತಿ-ಪ್ರದೀಪ ಗುರೂಜಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.26-ಮಹಾತ್ಮರು, ಶಿವಶರಣರು, ಯೋಗಿಗಳ ಅನುಭಾವದ ನುಡಿಗಳನ್ನು ಆಲಿಸುವುದರಿಂದ ಮನಸ್ಸಿಗೆ ನೆಮ್ಮದಿ, ಸಮಾಧಾನ ಪ್ರಾಪ್ತವಾಗುತ್ತದೆ ಎಂದು ಆಧ್ಯಾತ್ಮಿಕ ಚಿಂತಕ ಪ್ರದೀಪ ಗುರೂಜಿ ಹೇಳಿದರು.

ಬೆನಕಟ್ಟಿಯ ಹೇಮ ವೇಮನ ಸದ್ಬೋಧನ ಪೀಠದ ವತಿಯಿಂದ ಮುಧೋಳ ತಾಲ್ಲೂಕಿನ ಕನಸಗೇರಿ ಗ್ರಾಮದಲ್ಲಿ ರವಿವಾರ ಹಮ್ಮಿಕೊಳ್ಳಲಾಗಿದ್ದ ಮನೆ ಮನದಲ್ಲಿ ವೇಮನರ 180 ನೇ ಮಾಸಿಕ ತತ್ವ ಚಿಂತನ ಕಾರ್ಯಕ್ರಮ ಉದ್ಘಾಟಿಸಿ, 'ತೊರೆಯಬೇಕು ಊರ ವಿರಾಮವಿರದಾಗ...'ಎನ್ನುವ ವಚನ ಕುರಿತು ಮಾತನಾಡಿದರು.

ಮನುಷ್ಯ ಬರೀ ಸಂಸಾರದ ಜಂಜಾಟದಲ್ಲಿ ಸಿಲುಕಿ ಮನಸ್ಸಿನ ನೆಮ್ಮದಿಯನ್ನು ಕಳೆದುಕೊಂಡು ದು:ಖಿತನಾಗಿದ್ದಾನೆ. ಸಮಾಧಾನ, ಶಾಂತಿ, ನೆಮ್ಮದಿ ಇಲ್ಲದಂತಾಗಿ ಚಿಂತೆಯಲ್ಲಿದ್ದಾನೆ. ಇದಕ್ಕೆ ಕೊನೆಹಾಡಿ ಮನಸ್ಸಿಗೆ ಶಾಂತಿ, ನೆಮ್ಮದಿಯನ್ನು ಪಡೆಯಲು ಸತ್ಸಂಗದಲ್ಲಿ ಪಾಲ್ಗೊಳ್ಳಬೇಕು. ಸಂತರು, ಮಹಾತ್ಮರ ನುಡಿಗಳನ್ನು ಆಲಿಸಬೇಕು ಎಂದು ಗುರೂಜಿ ಹೇಳಿದರು.

ಮಹಾಯೋಗಿ ವೇಮನರು ತಮ್ಮ ಬದುಕಿನ ಅನುಭವದ ಮಾತುಗಳನ್ನೇ ವಚನಗಳ ಮೂಲಕ ಮನುಕುಲಕ್ಕೆ ಅರುಹಿದ್ದು ಅವುಗಳಲ್ಲಿ ಜೀವನದ ಸತ್ಯವೇ ಅಡಗಿದೆ ಎಂದ ಪ್ರದೀಪ ಗುರೂಜಿ, ಹೇಮರಡ್ಡಿ ಮಲ್ಲಮ್ಮ ಹಾಗೂ ಮಹಾಯೋಗಿ ವೇಮನರಲ್ಲಿನ ಭಕ್ತಿ, ವೈರಾಗ್ಯ ಅವರನ್ನು ದೈವತ್ವಕ್ಕೆ ಏರಿಸಿದವು ಎಂದರು.

ಅತಿಥಿ ಮುಧೋಳ ತಾಲ್ಲೂಕು ರಡ್ಡಿ ನೌಕರರ ಕ್ಷೇಮಾಭಿವೃದ್ಧಿ ಸಂಘದ ಪ್ರಧಾನ ಕಾರ್ಯದರ್ಶಿ ಸತೀಶ ಬೇವೂರ ಮಾತನಾಡಿ, ಮಲ್ಲಮ್ಮ ಹಾಗೂ ವೇಮನರ ತತ್ವಾದರ್ಶಗಳನ್ನು ಪಾಲಿಸಿ ನಡೆಯಬೇಕು. ಮಕ್ಕಳಿಗೆ ಶಿಕ್ಷಣ, ಸಂಸ್ಕಾರ ನೀಡಿ ದೇಶದ ಆಸ್ತಿಯನ್ನಾಗಿ ಮಾಡಬೇಕು ಎಂದರು.

ಸಾನಿಧ್ಯ ವಹಿಸಿದ್ದ ದಾದನಟ್ಟಿ ಶಿವಾನಂದ ಮಠದ ನಿಜಾನಂದ ಸ್ವಾಮೀಜಿ, ಮನುಷ್ಯತ್ವದ ಬದುಕು ನಮ್ಮದಾಗಬೇಕು. ಪ್ರಪಂಚದಲ್ಲಿದ್ದುಕೊಂಡೇ ಪಾರಮಾರ್ಥ ಸಾಧಿಸಿ ಜೀವನ ಪಾವನಗೊಳಿಸಿಕೊಳ್ಳಬೇಕು ಎಂದು ಹೇಳಿದರು.

ಮಲ್ಲನಗೌಡ ಪಾಟೀಲ, ಭೀಮನಗೌಡ ಪಾಟೀಲ, ನಿವೃತ್ತ ಪ್ರಾಧ್ಯಾಪಕ ವಿನಾಯಕ ಪಾಟೀಲ, ನಿಂಗನಗೌಡ ಪಾಟೀಲ, ಕೃಷ್ಣಾ ಗಲಗಲಿ, ಲೋಕನಗೌಡ ಪಾಟೀಲ, ಮಲ್ಲಪ್ಪ ಮೇಲಪ್ಪನವರ, ಮಲ್ಲನಗೌಡ ಪಾಟೀಲ ಅತಿಥಿಗಳಾಗಿದ್ದರು.

ಬೆನಕಟ್ಟಿಯ ಹೇಮರಡ್ಡಿ ಮಲ್ಲಮ್ಮ ಭಜನಾ ತಂಡದವರು ವೇಮನ ವಚನ ಪಠಣ ಮಾಡಿದರು. ವಕೀಲ ಮಹಾದೇವಯ ರಡ್ಡಿ ಸ್ವಾಗತಿಸಿದರು. ಪಶು ವೈದ್ಯಾಧಿಕಾರಿ ಡಿ.ಎಂ.ಬೆಣ್ಣೂರ ಪ್ರಾಸ್ತಾವಿಕ ಮಾತನಾಡಿದರು. ಶಿಕ್ಷಕ ಎಚ್.ಬಿ.ಗೋಣಿ ವಂದಿಸಿದರು.

## ಸುರಿಯುವ ಮಳೆಯಲ್ಲಿ ನೂರಾರು ಜನ ರಾಷ್ಟ್ರ ಧ್ವಜ ಹಿಡಿದು ಜೈಕಾರ

# ತಿರಂಗಾ ಯಾತ್ರೆ: ಸೈನಿಕರ ಕುಟುಂಬಕ್ಕೆ ಗೌರವ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟೆ:ಸುರಿವ ಮಳೆಯನ್ನು ಲೆಕ್ಕಿಸದೇ ಕೈಯಲ್ಲಿ ತಿರಂಗಾ ಧ್ವಜ ಹಿಡಿದುಕೊಂಡು ತಾಳಿಕೋಟೆ ಪಟ್ಟಣದ ನಾಗರಿಕರು ಮಾಜಿ ಸೈನಿಕರು ಎನ್‌ಸಿಸಿ ಕೆಡಿಟ್ ಗಳು, ಹಾಗೂ ರಾಷ್ಟ್ರಾಭಿಮಾನಿಗಳು ಬಿಜೆಪಿ ರೈತ ಮೋರ್ಚಾ ರಾಜ್ಯಾಧ್ಯಕ್ಷ ಮಾಜಿ ಶಾಸಕ ಎ.ಎಸ್.ಪಾಟೀಲ ನಡಹಳ್ಳಿ ಅವರೊಂದಿಗೆ ತಿರಂಗಾ ಯಾತ್ರೆಯಲ್ಲಿ ಹೆಜ್ಜೆ ಹಾಕಿದರು. ಸುರಿವ ಮಳೆಯಲ್ಲಿಯೇ ನೂರಾರು ದೇಶಭಕ್ತರು ರಾಷ್ಟ್ರಧ್ವಜ ಹಿಡಿದು ಭಾರತ ಮಾತೆಗೆ, ದೇಶದ ವೀರ ಸೈನಿಕರಿಗೆ ಜೈಕಾರ ಹಾಕುತ್ತಾ ಮೆರವಣಿಗೆ ನಡೆಸಿ ಸಾರ್ವಜನಿಕರಲ್ಲಿ ರಾಷ್ಟ್ರೀಯತೆಯನ್ನು ಜಾಗೃತಿಗೊಳಿಸುವ ಕಾರ್ಯ ಮಾಡಿದರು. ದೇಶದ ಸೈನಿಕರು ಪಹಲ್ಗಾಂ ದಾಳಿಗೆ ಪ್ರತಿಕಾರವಾಗಿ ಆಪರೇಷನ್ ಸಿಂಧೂರ ನಡೆಸಿ ಪಾಕ್ ಉಗ್ರರ ನೆಲೆಗಳನ್ನು ಯಶಸ್ವಿಯಾಗಿ ಧ್ವಂಸ ಮಾಡಿದ ಹಿನ್ನೆಲೆಯಲ್ಲಿ ಅವರಿಗೆ ಕೃತಜ್ಞತೆಯನ್ನು ಸಲ್ಲಿಸಿ ಅವರ ಕುಟುಂಬದ ಸದಸ್ಯರಿಗೆ ಗೌರವ ಸಮರ್ಪಣೆ ಸಲ್ಲಿಸುವ ಕಾರ್ಯಕ್ರಮವನ್ನು ಪಕ್ಷಾತೀತ ಜಾತ್ಯತೀತ ಹಾಗೂ ಧರ್ಮಾತೀತವಾಗಿ ಹಮ್ಮಿಕೊಳ್ಳಲಾಗಿತ್ತು. ಸೋಮವಾರ ಪಟ್ಟಣದ ವಿಠಲ ಮಂದಿರ ಮುಂಭಾಗದಿಂದ ಆರಂಭವಾದ ಐತಿಹಾಸಿಕ ತಿರಂಗಾ ಯಾತ್ರೆಗೆ ಖಾಸ್ಗತೇಶ್ವರ ಮಠದ ಪರಮ ಪೂಜ್ಯ ಶ್ರೀ ಸಿದ್ದಲಿಂಗ ದೇವರು ಹಾಗೂ ಕೆಸರಟ್ಟಿಯ ಶ್ರೀ ಸೋಮಲಿಂಗ ಮಹಾಸ್ವಾಮಿಗಳು ಚಾಲನೆ ನೀಡಿದರು. ಅಲ್ಲಿಂದ ಆರಂಭವಾದ ತಿರಂಗಾ ಯಾತ್ರೆಯು ಕತ್ರಿಬಜಾರ್, ಡಾ.ಬಿ.ಆರ್.ಅಂಬೇಡ್ಕರ್ ಸರ್ಕಲ್, ಶ್ರೀ ಬಸವೇಶ್ವರ ಸರ್ಕಲ್, ಮಾಹಾರಾಣಾ ಪ್ರತಾಪ್ ಸಿಂಹ ಸರ್ಕಲ್ ಮಾರ್ಗದ ಮೂಲಕ ಶಿವಾಜಿ ಸರ್ಕಲ್ ದವರೆಗೆ ಸುರಿಯುವ ಮಳೆಯಲ್ಲೂ ಯಶಸ್ವಿಯಾಗಿ ನಡೆಸಲಾಯಿತು. ಶ್ರೀ ವಿಠಲ ಮಂದಿರದಲ್ಲಿ ನಡೆದ ವೇದಿಕೆ ಕಾರ್ಯಕ್ರಮದಲ್ಲಿ ದೇಶದ ವೀರ ಸೈನಿಕರ ಪರಿವಾರದ ಸದಸ್ಯರಿಗೆ ತಂದೆ ತಾಯಿಗಳಿಗೆ ಹಾಗೂ ವೀರ ನಾರಿಯರಿಗೆ ಗೌರವ ಸಮರ್ಪಣೆ ಸಲ್ಲಿಸಿ ಸೈನಿಕರಿಗೆ ಸ್ಥೈರ್ಯ ತುಂಬಲಾಯಿತು. ಕಾರ್ಯಕ್ರಮದಲ್ಲಿ ಪರಮಪೂಜ್ಯ ಗುರುಲಿಂಗ ಶಿವಾಚಾರ್ಯರು, ಕೆಸರಟ್ಟಿ ಸೋಮಲಿಂಗ ಮಹಾಸ್ವಾಮಿಗಳು, ಮಾಜಿ ಶಾಸಕ ಎ.ಎಸ್.ಪಾಟೀಲ ನಡಹಳ್ಳಿ, ಸಾಹಿತಿ ಅಶೋಕ ಹಂಚಲಿ, ಮಾಜಿ ಸೈನಿಕರ ಸಂಘದ ಅಧ್ಯಕ್ಷ ರಾಮನಗೌಡ ಬಿರಾದಾರ ಮಾತನಾಡಿ ಸೈನಿಕರಿಗೆ ನುಡಿ ನಮನ ಸಲ್ಲಿಸಿದರು. ಈ ಸಮಯದಲ್ಲಿ ಪುರೋಹಿತ ವಸಂತ ಜೋಶಿ, ಪುರಸಭೆ ಸದಸ್ಯರಾದ ವಾಸುದೇವ ಹೆಬಸೂರ, ಜೈಸಿಂಗ್ ಮೂಲಿಮನಿ, ಗಣ್ಯರಾದ ಕಾಶಿನಾಥ ಮುರಾಳ, ಜಿ.ಜಿ.ಮದರಕಲ್ಲ, ಮುರಿಗೆಪ್ಪ ಸರಶಟ್ಟಿ, ಗಂಗಾಧರ ಕಸ್ತೂರಿ, ಚಿಂತಪ್ಪ ಯಾಳಗಿ, ಪ್ರಕಾಶ ಹಜೇರಿ, ಶ್ರೀಕಾಂತ ಪತ್ತಾರ, ಮಾನಸಿಂಗ್ ಕೊಕಟನೂರ, ಮಹಾಂತೇಶ ಮುರಾಳ, ಬಾಬು ಹಜೇರಿ, ಬಸನಗೌಡ ವಣಿಕಿಹಾಳ, ಸುರೇಶ ಪಾಟೀಲ, ಎಂ.ಎಂ.ಪಾಟೀಲ ಬಿ.ಸಾಲವಾಡಗಿ, ಶಿವಶಂಕರ ಹಿರೇಮಠ, ಸುವರ್ಣಾ ಬಿರಾದಾರ, ರಾಘು ವಿಜಯಪುರ,

ಹಣಮಂತ್ರಾಯಗೌಡ ಢವಳಗಿ, ಮುತ್ತು ಕಶಟ್ಟಿ, ಮಾಜಿ ಸೈನಿಕರ ಸಂಘದ ಅಧ್ಯಕ್ಷ ಶ್ರೀಪಾಲ ಸಂಗಮಿ, ಮಾಜಿ ಸೈನಿಕರು, ಸಂಘ ಸಂಸ್ಥೆಗಳ ಮುಖ್ಯಸ್ಥರು, ಪಟ್ಟಣದ ಗಣ್ಯರು, ಹಿರಿಯರು, ದೇಶಾಭಿಮಾನಿಗಳು ಸಾವಿರಾರು ಸಂಖ್ಯೆಯಲ್ಲಿ ಭಾಗವಹಿಸಿದ್ದರು. ವೇದಿಕೆ ಕಾರ್ಯಕ್ರಮದ ಆರಂಭದಲ್ಲಿ ಪಹಲ್ ಗಾಮ್ ದಾಳಿಯಲ್ಲಿ ಮಡಿದ ಹಾಗೂ ಭಾರತ ಪಾಕ್ ಯುದ್ಧದಲ್ಲಿ ಹುತಾತ್ಮರಾದ ಯೋಧರಿಗೆ ಮೌನಾಚರಣೆ ಮೂಲಕ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಭಾರತ ಶಾಂತಿಯನ್ನು ಬಯಸುವ ದೇಶ ನಾವು ಯಾರ ವಿರುದ್ಧವೂ ಪ್ರತಿಕಾರಕ್ಕಾಗಿ ಯುದ್ಧ ಮಾಡಿಲ್ಲ ನಮ್ಮನ್ನು ನಾವು ರಕ್ಷಿಸಿಕೊಳ್ಳಲು ನಮ್ಮ 26 ಜನ ಮಹಿಳೆಯರ ಸಿಂಧೂರ ಅಳಿಸಿದ ಭಯೋತ್ಪಾದಕರಿಗೆ ಪಾಠ ಕಲಿಸಲು ಆಪರೇಷನ್ ಸಿಂಧೂರ ನಡೆಸಲಾಗಿದೆ ಪಾಕ್ ಪ್ರಜೆಗಳಿಗೆ ತೊಂದರೆಯಾಗದಂತೆ ಉಗ್ರರ ತಾಣ ಮಾತ್ರ ಧ್ವಂಸಗೊಳಿಸಲಾಗಿದೆ.

**-ಎ.ಎಸ್.ಪಾಟೀಲ ನಡಹಳ್ಳಿ ಮಾಜಿ ಶಾಸಕ**

## ಆಕ್ಷೇಪಣೆಗೆ ಜೂನ್ 4 ಕೊನೆಯ ದಿನ

# ಅಂಗನವಾಡಿ ಕಾರ್ಯಕರ್ತರ ತಾತ್ಕಾಲಿಕ ಪಟ್ಟಿ ಪ್ರಕಟ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.26-ಜಿಲ್ಲೆಯ ವ್ಯಾಪ್ತಿಯಲ್ಲಿ ಬಾಗಲಕೋಟೆ ತಾಲೂಕು ಹೊರತುಪಡಿಸಿ ಉಳಿದ ಎಲ್ಲ ತಾಲೂಕಿನಲ್ಲಿ ಖಾಲಿಯಿರುವ ಅಂಗನವಾಡಿ ಕಾರ್ಯಕರ್ತೆಯರ ಹಾಗೂ ಸಹಾಯಕಿಯರ ಹುದ್ದೆಗಳಿಗೆ ತಾತ್ಕಾಲಿಕವಾಗಿ ಅಭ್ಯರ್ಥಿಗಳನ್ನು ಆಯ್ಕೆ ಮಾಡಿ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ತಾತ್ಕಾಲಿಕ ಆಯ್ಕೆ ಬಗ್ಗೆ ಆಕ್ಷೇಪಣೆಗಳು ಇದ್ದಲ್ಲಿ ಜೂನ್ 4 ರೊಳಗಾಗಿ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿ ಜಾನಕಿ ಕೆ.ಎಂ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಜರುಗಿದ ಜಿಲ್ಲಾಮಟ್ಟದ ಆಯ್ಕೆ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಿಲ್ಲೆಯ ಬಾಗಲಕೋಟೆ ತಾಲೂಕು ಹೊರತುಪಡಿಸಿ, ಬೀಳಗಿ, ಬಾದಾಮಿ, ಮುಧೋಳ, ಜಮಖಂಡಿ ಹಾಗೂ ಹುನಗುಂದ ತಾಲೂಕಿನಲ್ಲಿ ಖಾಲಿ ಇರುವ 101 ಅಂಗನವಾಡಿ ಕಾರ್ಯಕರ್ತೆಯರು ಹಾಗೂ 454 ಸಹಾಯಕಿಯರ ಹುದ್ದೆಗಳಿಗೆ ತಾತ್ಕಾಲಿಕವಾಗಿ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗಿದೆ.

ಆಯ್ಕೆ ಪಟ್ಟಿಯನ್ನು ಉಪ ನಿರ್ದೇಶಕರ ಕಚೇರಿ, ಆಯಾ ತಾಲೂಕಿನ ಶಿಶು ಅಭಿವೃದ್ದಿ ಯೋಜನಾಧಿಕಾರಿಗಳ ಕಚೇ-ರಿಯ ಸೂಚನಾ ಫಲಕ ಹಾಗೂ ಸಂಬಂಧಿಸಿದ ಅಂಗನವಾಡಿ ಕೇಂದ್ರಗಳಲ್ಲಿ ಪ್ರಕಟಿಸಲಾಗಿದೆ. ಈ ಆಯ್ಕೆ ಪಟ್ಟಿಯ ಬಗ್ಗೆ ಸಾರ್ವಜನಿಕರಿಂದ ಆಕ್ಷೇಪಣೆಗಳು ಇದ್ದಲ್ಲಿ ಮೇ 27 ರಿಂದ ಜೂನ್ 4ರ ಒಳಗಾಗಿ ಕಚೇರಿ ಅವಧಿಯಲ್ಲಿ ಲಿಖಿತವಾಗಿ ಸಮರ್ಥನೀಯ ದಾಖಲೆಗಳೊಂದಿಗೆ ಆಕ್ಷೇಪಣೆಗಳನ್ನು ಸಂಬಂಧಿಸಿದ ಶಿಶು ಅಭಿವೃದ್ದಿ ಯೋಜನಾಧಿಕಾರಿಗಳ ಕಚೇರಿ ಅಥವಾ ಉಪ ನಿರ್ದೇಶಕರ ಕಚೇರಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬಾಗಲಕೋಟೆ ಇವರಿಗೆ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತಿ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ, ಮಹಿಳಾ ಮತ್ತು ಮಕ್ಕಳ ಅಬಿವೃದ್ದಿ ಇಲಾಖೆಯ ಉಪನಿರ್ದೇಶಕ ಪ್ರಭಾಕರ ಕೆ, ಸಮಾಜಕಲ್ಯಾಣ ಇಲಾಖೆಯ ಉಪನಿರ್ದೇಶಕ ಸದಾಶಿವ ಬಡಿಗೇರ ಉಪಸ್ಥಿತರಿದ್ದರು.

## 200 ಹಾಸಿಗೆ ಜಿಲ್ಲಾ ಆಸ್ಪತ್ರೆಯನ್ನು ಸಿಂಧನೂರು ತಾಲೂಕಿಗೆ ಶಿಫ್ಟ್ ಮಾಡಿದ್ದನ್ನು 8 ದಿನದ ಒಳಗೆ

# ಜಿಲ್ಲಾ ಆಸ್ಪತ್ರೆಯನ್ನು ವಾಪಸ್ ತರದೆ ಇದ್ದಲ್ಲಿ: ಧರಣಿ ಕರುನಾಡ ವಿಜಯಸೇನೆ




ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು:ಪಟ್ಟಣದ ಪತ್ರಿಕಾ ಭವನದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಕರುನಾಡ ವಿಜಯಸೇನೆ ಜಿಲ್ಲಾ ಅಧ್ಯಕ್ಷರಾದ ಎಂ.ಸಿ.ಚಂದ್ರಶೇಖರ ನಾಯಕ ಅವರ ನೇತೃತ್ವದಲ್ಲಿ 200 ಹಾಸಿಗೆ ಜಿಲ್ಲಾ ಆಸ್ಪತ್ರೆಯನ್ನು ಸಿಂಧನೂರು ತಾಲೂಕಿಗೆ ಶೀಪ್ಟ್ ಮಾಡಿದ್ದನ್ನು 8 ದಿನದ ಒಳಗೆ ಜಿಲ್ಲಾ ಆಸ್ಪತ್ರೆಯನ್ನು ವಾಪಸ್ ತರದೆ ಇದ್ದಲ್ಲಿ ಲಿಂಗಸುಗೂರು ಹಾಲಿ ಶಾಸಕರಾದ ಮಾನಪ್ಪ ಡಿ ವಜ್ಜಲ ಅವರ ಮನೆಯ ಮುಂದೆ ಮತ್ತು ಮಾಜಿ ಶಾಸಕರಾದ ಡಿ.ಎಸ್.ಹೂಲಿಗೇರಿ ಅವರ ಮನೆಯ ಮುಂದೆ ಹಾಗೂ ಹಾಲಿ ವಿಧಾನ ಪರಿಷತ್ ಸದಸ್ಯರಾದ ಶರಣಗೌಡ ಪಾಟೀಲ್ ಬಯ್ಯಾಪೂರ ಅವರ ಮನೆಯ ಮುಂದೆ ಮತ್ತು ಉಪವಾಸ ಧರಣಿ ಸತ್ಯಾಗ್ರಹ ಕೂಡ ಮಾಡುತ್ತವೆ ಎಂದು ಕರುನಾಡ ವಿಜಯಸೇನೆ ಎಚ್ಚರಿಕೆ ನೀಡಿದ್ದಾರೆ.

ಈ ಸಂದರ್ಭದಲ್ಲಿ ಕರುನಾಡ ವಿಜಯಸೇನೆ ಲಿಂಗಸುಗೂರು ತಾಲೂಕು ಅಧ್ಯಕ್ಷರಾದ ಶ್ರೀ ಹನುಮಂತ ಬಡಿಗೇರ, ತಾಲೂಕು ಉಪಾಧ್ಯಕ್ಷರಾದ ರಂಗಪ್ಪ ಭೋವಿ, ಶಾಂತ ಹಣಗಿ ತಾಲೂಕು ಮಹಿಳಾ ಮುಖಂಡರು, ಪರಶುರಾಮ ಗೋರೇಬಾಳ, ತಿರುಪತಿ ಭಜಂತ್ರಿ, ಜಾಫರ್ ನಧಾಪ್, ದುರಗಪ್ಪ ಪೂಜಾರಿ, ಮಾಹಾಂತೇಶ ತುಪ್ಪದ್, ಪಕೀರಪ್ಪ ಗುಡಿ ಇಂದಿನ, ಸಿದ್ದು ಮುದಗಲ್, ಹನುಮಂತ ನಾಗರಹಾಳ, ರಮೇಶ ಮೂಲಿಮನಿ, ಸಂಗನಗೌಡ ಪೋ. ಪಾಟೀಲ್, ನಿಂಗಪ್ಪ ಹಗಲ್ದಾಳ, ಸುರೇಶ ಹೊನ್ನಾರಡ್ಡಿ, ಹುಲಗಪ್ಪ ನಾಗರಹಾಳ, ಹಾಗೂ ಸಂಘಟನೆಯ ಪದಾಧಿಕಾರಿಗಳು ಮತ್ತು ಉಪಸ್ಥಿತರಿದ್ದರು.

